ಸಂಪುಟ: 04 ಸಂಚಿಕೆ: 352 ಪುಟಗಳು: 08 ಬುಧವಾರ 05 ಮಾರ್ಚ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸಂದೇಹದಿಂದ ನಮಗೆ ಖುಷಿ ಸಿಗುವುದಿಲ್ಲ. ಇದರಿಂದ ನಮ್ಮ ಜೀವನವೇ ಹಾಳಾಗುತ್ತದೆ.



# ಬಲ್ಡೋಟಾ ಕಾರ್ಖಾನೆ ಕಾಮಗಾರಿ ಸ್ಥಗಿತಕ್ಕೆ ಸಿಎಂ ಸೂಚನೆ

**ಕೊಪ್ಪಳ ಜನರ ಹೋರಾಟಕ್ಕೆ ಜಯ**

• ಉದಯವಾಹಿನಿ, ಕೊಪ್ಪಳ

ನಗರದಲ್ಲಿ ಬಟಾ ಸ್ಟೀಲ್ ಫ್ಯಾಕ್ಟರಿ ನಿರ್ಮಾಣಕ್ಕೆ ಭಾರಿ ವಿರೋಧ ವ್ಯಕ್ತವಾಗಿದೆ. ಈಗಾಗಲೇ ಕೊಪ್ಪಳ ಬಂದ್ ಕೂಡ ನಡೆಸಲಾಗಿದೆ. ಗವಿಮಠದ ಶ್ರೀಗಳು ಯಾವುದೇ ಕಾರಣಕ್ಕೂ ಫ್ಯಾಕ್ಟರಿ ನಿರ್ಮಿಸಬಾರದು ಎಂದು ಹೋರಾಟ ನಡೆಸಿದ್ದಾರೆ. ಇಂದು ಬೆಂಗಳೂರಿನಲ್ಲಿ ಹೋರಾಟಗಾರರು ಮತ್ತು ಜನಪ್ರತಿನಿಧಿಗಳ ನಿಯೋಗದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಕಾಮಗಾರಿ ಸ್ಥಗಿತಗೊಳಿಸುವಂತೆ ಮನವಿ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ಬಟಾ ಫ್ಯಾಕ್ಟರಿ ಕಾಮಗಾರಿ ಸ್ಥಗಿತಗೊಳಿಸುವಂತೆ ಜಿಲ್ಲಾಧಿಕಾರಿಗೆ



ಸೂಚನೆ ನೀಡಿದ್ದಾರೆ. ಈ ಮೂಲಕ ಕೊಪ್ಪಳ ಜಿಲ್ಲಾ ಜನರ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ.

ಕೊಪ್ಪಳ ನಗರದಿಂದ ಕೂಗಳತೆ ದೂರದಲ್ಲಿ ರಾಜ್ಯದ ಎರಡನೇ ಅತಿ ದೊಡ್ಡ ಸ್ಟೀಲ್ ಫ್ಯಾಕ್ಟರಿ ನಿರ್ಮಾಣಕ್ಕೆ ಬಟಾ ಸಂಸ್ಥೆ ಮುಂದಾಗಿತ್ತು. 54,000 ಕೋಟಿ ರೂಪಾಯಿ ವೆಚ್ಚದಲ್ಲಿ ವಾರ್ಷಿಕ 10.50 ಮಿಲಿಯನ್ ಕಬ್ಬಿಣ ಉತ್ಪಾದನೆ ಸಾಮರ್ಥ್ಯದ ಘಟಕ ನಿರ್ಮಾಣಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಇದಕ್ಕಾಗಿ ವರ್ಷಗಳ ಹಿಂದೆಯೇ 1034 ಎಕರೆ ಭೂಮಿಯನ್ನು ಕಂಪನಿ ರೈತರಿಂದ ಪಡೆದುಕೊಂಡಿದ್ದು. ಕಾರ್ಖಾನೆ ನಿರ್ಮಾಣ ಕಾಮಗಾರಿ ಕೈಗೊಂಡಿತ್ತು.

## ಅಕ್ರಮ ಮದ್ಯ ತಡೆಗೆ ಮಹತ್ವದ ಕ್ರಮ: 17,390 ಕೇಸ್ ದಾಖಲು

• ಉದಯವಾಹಿನಿ, ಬೆಂಗಳೂರು

ಅಕ್ರಮವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟಲು ಅಬಕಾರಿ ಇಲಾಖೆಯಿಂದ ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಲಾಗುತ್ತಿದೆ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ತಿಳಿಸಿದ್ದಾರೆ. ವಿಧಾನ ಮಂಡಲದ ಬಜೆಟ್ ಅಧಿವೇಶನದಲ್ಲಿ ಪ್ರಶ್ನೋತ್ತರ ಕಲಾಪದ ವೇಳೆ ಬೈಲಹೊಂಗಲ ಶಾಸಕ ಕೌಜಲಗಿ ಮಹಾಂತೇಶ್ ಶಿವಾನಂದ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಗಸ್ತಿನ ಸಮಯದಲ್ಲಿ ಮತ್ತು ಸಾರ್ವಜನಿಕರಿಂದ ವಿಶೇಷವಾಗಿ ಮಹಿಳೆ / ಮಹಿಳಾ ಸಂಘಗಳಿಂದ ದೂರುಗಳು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ, ಅಕ್ರಮಗಳು ಕಂಡುಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಎಲ್ಲಾ ಮದ್ಯ ಮಾರಾಟ ಸನ್ನದುಗಳನ್ನು ನಿಯಮಿತವಾಗಿ ಮಾಸಿಕವಾಗಿ ಪರಿಶೀಲಿಸಲಾಗುತ್ತಿದ್ದು, ಕಾಯ್ದೆ/ ನಿಯಮ/ ಸನ್ನದು ಷರತ್ತು ಉಲ್ಲಂಘನೆಯಾದಲ್ಲಿ ಅಂತಹ ಸನ್ನದುದಾರರ ವಿರುದ್ಧ ಅಬಕಾರಿ ಕಾಯ್ದೆ ಪ್ರಕರಣ ದಾಖಲಿಸಲಾಗುತ್ತಿದ್ದು, ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ ಎಂದರು. ಅಲ್ಲದೇ, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕ್ಕಲು ಕ್ರಮ ವಹಿಸಲು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಸಂರಕ್ಷಣಾಧಿಕಾರಿಗಳೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

# ಕೆಪಿಎಸ್‌ಸಿ ಲೋಪ ಬಿಜೆಪಿ ಆರೋಪ

**ಕೆಪಿಎಸ್‌ಸಿ ನೇಮಕಾತಿಯಲ್ಲಿ ಪದೇ ಪದೆ ಎಡವಟ್ಟು**

**ವಿಧಾನಸಭೆಯಲ್ಲಿ ನಿಲುವಳಿ ಪ್ರಸ್ತಾಪಿಸಿದ ಪ್ರತಿಪಕ್ಷ ನಾಯಕ**

**ಎಸಿಗೆ 1 ಕೋಟಿ, ಡಿವೈಎಸ್‌ಪಿಗೆ 2 ಕೋಟಿ, ತಹಶೀಲ್ದಾರ್‌ಗೆ 1 ಕೋಟಿ..! ಕೆಪಿಎಸ್‌ಸಿಯಲ್ಲಿ ರೇಟ್ ಫಿಕ್ಸ್**





### ವಿಪಕ್ಷ ಶಾಸಕರು ಮಾತಾಡುವಾಗ ಕೆಮೆರಾ ಯಾಕೆ ಅವರ ಮೇಲೆ ನೆಟ್ಟಿರುವುದಿಲ್ಲ...?

ಮಾಧ್ಯಮ ಗಮನಿಸುತ್ತಿದೆ ಮತ್ತು ರಾಜ್ಯದ ಜನತೆ ಕೂಡ. ಎಲ್ಲಾ ಟವಿ ಚಾನೆಲ್‌ಗಳು ಸದನದ ಕಲಾಪವನ್ನು ಲೈವ್ ಆಗಿ ಬಿತ್ತರಿಸುವುದರಿಂದ ಕನ್ನಡಿಗರು ಈ ಸೂಕ್ಷ್ಮವನ್ನು ಗಮನಿಸದಿರುತ್ತಾರೆಯೇ...? ವಿಷಯವೇನೆಂದರೆ, ಸದನದಲ್ಲಿ ವಿರೋಧ ಪಕ್ಷದ ಶಾಸಕರು ಮಾತಾಡುವಾಗ, ವಿಷಯಗಳನ್ನು ಸದನದ ಗಮನಕ್ಕೆ ತರುವಾಗ ಕೆಮೆರಾ ಅವರ ಮೇಲೆ ಫೋಕಸ್ ಆಗಿರಲ್ಲ, ಸದನದ ವಿಹಂಗಮ ವಿಡಿಯೋ ಹೋಗುತ್ತಿರುತ್ತದೆ, ಆಗಾಗ ಸಭಾಧ್ಯಕ್ಷರನ್ನು ಇಲ್ಲವೇ ಮಂತ್ರಿಗಳ ಮುಖಗಳ ತೋರುವ ಕೆಲಸವನ್ನು ಕೆಮೆರಾ ಮಾಡುತ್ತದೆ. ವಿರೋಧ ಪಕ್ಷದ ಯಾವ ಶಾಸಕ ಮಾತಾಡುತ್ತಿದ್ದಾರೆ ಅನ್ನೋದು ಗೊತ್ತೇ ಆಗಲ್ಲ. ಇದೇ ವಿಷಯವನ್ನು ವಿಪಕ್ಷ ನಾಯಕ ಅರ್ ಅಶೋಕ ಮತ್ತು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಭಾಧ್ಯಕ್ಷರ ಗಮನಕ್ಕೆ ತಂದು ಇದನ್ನು ಸರಿಪಡಿಸುವಂತೆ ಹೇಳಿದರು.

### ಸದನದ ಮುಂದಿಟ್ಟ ಬೇಡಿಕೆಗಳೇನು?

ಹಳೇ ಅಧಿಸೂಚನೆ ರದ್ದು ಮಾಡಿ ಹೊಸ ಅಧಿಸೂಚನೆ ಹೊರಡಿಸಬೇಕು.ಪರೀಕ್ಷೆ ಬರೆದ ಅಭ್ಯರ್ಥಿಗಳ ವಯಸ್ಸಿನ ಮಿತಿ ಸಡಲಿಕೆ ಮಾಡಬೇಕು.2.30 ಲಕ್ಷ ಅಭ್ಯರ್ಥಿಗಳಿಗೆ ಮರು ಪರೀಕ್ಷೆಗೆ ಅವಕಾಶ ನೀಡಬೇಕು.ಯಾವ ಅಧಿಕಾರಿಯಿಂದ ಕೋಟಿ ಲಾಸ್ ಆಗಿದೆ, ಆ ಆಧಿಕಾರಿಯಿಂದ ಹಣ ವಸೂಲಿ ಮಾಡಬೇಕು.ಇನ್ನು ಬಸವಗೌಡ ಪಾಟೀಲ್ ಯತ್ನಾಳ್ ಮಾತನಾಡಿ ಸುಪ್ರೀಂ ಕೋರ್ಟ್ ಹಾಗೂ ಹೈಕೋರ್ಟ್‌ಗೆ ಸುಲಭವಾಗಿ ಹೋಗಬಹುದು. ಆದರೆ ಕೆಪಿಎಸ್ ಸಿಗೆ ಎಂಟ್ರಿ ಕೊಡುವುದು ಕಷ್ಟ. ಕೆಪಿಎಸ್‌ಸಿ ಬಹ್ಮಾಂಡ ಭ್ರಷ್ಟಾಚಾರವಾಗಿದೆ. ಪಿಎಸ್‌ಐ ಹಗರಣವನ್ನು ಮುಚ್ಚಿ ಹಾಕಲಾಯ್ತು. ಎಡಿಜಿಪಿ ಸೇರಿದಂತೆ ಇತರ ಆರೋಪಿಗಳಿಗೆ ಜಾಮೀನು ಆಗಿದೆ. ಸರ್ಕಾರದ ಪರವಾಗಿ ವಾದ ಮಾಡುವವರು ನ್ಯಾಯಾಲಯದಲ್ಲಿ ಸಮರ್ಥವಾಗಿ ವಾದ ಮಾಡಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ವಿಳಂಬ, ಪರೀಕ್ಷೆ ನಡೆಸುವಲ್ಲಿ ಎಡವಟ್ಟು, ವ್ಯವಸ್ಥೆಯ ವೈಫಲ್ಯದ ಆರೋಪದ ಕುರಿತ ವಿಚಾರ ವಿಧಾನಸಭೆಯಲ್ಲಿ ಇಂದು ಪ್ರತಿಧ್ವನಿಸಿ ಚರ್ಚೆಗೆ ಗ್ರಾಸವಾಯಿತು.

ಪ್ರತಿಪಕ್ಷದ ನಾಯಕ ಆರ್. ಅಶೋಕ್, ನಿಲುವಳಿ ಸೂಚನೆ ಪೂರ್ವಭಾವಿ ಪ್ರಸ್ತಾಪ ಮಾಡುತ್ತಾ 2 ಲಕ್ಷ ಅಭ್ಯರ್ಥಿಗಳಿಗೆ ಕೆಪಿಎಸ್ ಸಿಯಿಂದ ತೊಂದರೆಯಾಗಿದೆ. ಸರ್ಕಾರದ 30 ಕೋಟಿ ರೂ. ಹಣ ಖರ್ಚಾಗಿದೆ. ಕನ್ನಡ ಭಾಷೆಗೆ ಅಪಮಾನವಾಗಿದೆ, ಕನ್ನಡವನ್ನು ಕೊಲೆ ಮಾಡಿದ್ದಾರೆ ಎಂದು ಆರೋಪಿಸಿದರು.

ನಿರುದ್ಯೋಗ ಪದವೀಧರರ ಪಾಲಿಗೆ ಆಶಾಕಿರಣವಾಗಬೇಕಿದ್ದ ಕೆಪಿಎಸ್‌ಸಿ ಅವ್ಯವಸ್ಥೆಗಳ ಆಗರವಾಗಿದೆ. ಕೆಎಎಸ್ ಪರೀಕ್ಷೆ ಮತ್ತು ಮರುಪರೀಕ್ಷೆ ನಡೆಸುವಲ್ಲಿ ಪದೇ ಪದೆ ಎಡವಟ್ಟು ಮಾಡಿದೆ. ಪ್ರಶ್ನೆ ಪತ್ರಿಕೆಗಳ ತಯಾರಿಕೆ ಮತ್ತು ಅನುವಾದ ಮಾಡುವಲ್ಲಿ ಆಗುತ್ತಿರುವ ತಪ್ಪುಗಳಿಂದ ಪರೀಕ್ಷೆ ಸಂದರ್ಶನ ನಡೆಸಿ ಅಂತಿಮ ಆಯ್ಕೆ ಪ್ರಕಟಿಸುವಲ್ಲೂ ವಿಳಂಬವಾಗುತ್ತಿದೆ. ಇದರಿಂದ ಉದ್ಯೋಗಾಕಾಂಕ್ಷಿಗಳು ತೊಂದರೆಗೆ ಒಳಗಾಗುತ್ತಿದ್ದಾರೆ. ಸರ್ಕಾರದ ರಾಜಕೀಯ ಹಸ್ತಕ್ಷೇಪ, ಭ್ರಷ್ಟಾಚಾರ, ಸ್ವಜನಪಕ್ಷಪಾತ ಈ ಎಲ್ಲಾ ಗೊಂದಲಗಳಿಗೆ ಮೂಲ ಕಾರಣವಾಗಿದೆ ಎಂದು ದೂರಿದರು.

ಪ್ರತಿ ಪರೀಕ್ಷೆಗೆ 15 ಕೋಟಿ ರೂ. ವೆಚ್ಚವಾಗಿದೆ. ಬರಗಾಲ ಹಾಗೂ ಕ್ಷೇತ್ರದ ಅಭಿವೃದ್ಧಿಗಾಗಿ ಪ್ರತಿ ರೂಪಾಯಿ ಅನುದಾನಕ್ಕೂ ನಾವು ಮುಖ್ಯಮಂತ್ರಿಗಳ ಮನೆಗೆ ಹೋಗುತ್ತೇವೆ. 2 ಲಕ್ಷ ಅಭ್ಯರ್ಥಿಗಳು ಕೆಪಿಎಸ್‌ಸಿ ವ್ಯವಸ್ಥೆ ವೈಫಲ್ಯದಿಂದ ಬೀದಿಗೆ ಬಂದಿದ್ದಾರೆ. ಹೀಗೇ ಮುಂದುವರೆದರೆ ಎಷ್ಟು ಮಂದಿ ಉದ್ಯೋಗಾಕಾಂಕ್ಷಿಗಳು ಆತ್ಮಹತ್ಯೆ ಮಾಡಿಕೊಳ್ಳುತ್ತಾರೋ ಗೊತ್ತಿಲ್ಲ. ಈ ವಿಚಾರದ ವಿಸ್ತೃತ ಚರ್ಚೆಗೆ ಅವಕಾಶ ನೀಡಬೇಕೆಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು.

ಕೆಪಿಎಸ್‌ಸಿ ವಿರುದ್ಧ ರಸ್ತೆ ತಡೆ, ಪ್ರತಿಭಟನೆ ಆಗುತ್ತಿದೆ. ಸಭಾಧ್ಯಕ್ಷರೂ ಪತ್ರ ಬರೆದಿದ್ದಾರೆ. ಕೆಪಿಎಸ್‌ಸಿಯಿಂದ ಕನ್ನಡದ ಕೊಲೆಯಾಗಿದೆ. ಕನ್ನಡ ಉಳಿಯಬೇಕಲ್ಲವೆ? ಎಂದು ಆಕ್ರೋಶ ವ್ಯಕ್ತಪಡಿಸಿದರು.ಸ್ಪೀಕರ್ ಯು.ಟಿ. ಖಾದರ್ ಮಾತನಾಡಿ, ಈ ವಿಚಾರವನ್ನು ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆ ಸಂದರ್ಭದಲ್ಲೂ ಪ್ರಸ್ತಾಪಿಸಲು ಅವಕಾಶವಿದೆ ಎಂದರು.

ಆಗ ಅಶೋಕ್ ಮಾತನಾಡಿ, ನಿಮ್ಮ ಸಲಹೆಯನ್ನು ಒಪ್ಪುತ್ತೇವೆ. ಆದರೆ, ಈ ವಿಚಾರದ ಬಗ್ಗೆ ನಿರ್ದಿಷ್ಟವಾದ ಉತ್ತರ ಸರ್ಕಾರದಿಂದ ಸಿಗುವುದಿಲ್ಲ. ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಸರ್ಕಾರ ಒಟ್ಟಾರೆ ಉತ್ತರವನ್ನು ನೀಡುತ್ತದೆ. ಹೀಗಾಗಿ ನಿಲುವಳಿ ಚರ್ಚೆಯಡಿ ವಿಸ್ತೃತ ಚರ್ಚೆಗೆ ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು. ಮತ್ತೆ ಸದನ ಸಮಾವೇಶಗೊಂಡಾಗ ಸಭಾಧ್ಯಕ್ಷರು ನಿಲುವಳಿ ಸೂಚನೆಯಡಿ ಪ್ರತಿಪಕ್ಷದ ನಾಯಕರು ಮಾಡಿರುವ ಪ್ರಸ್ತಾಪವನ್ನು ಮಾರ್ಪಾಡು ಮಾಡಿ ನಿಯಮ 69 ರಡಿ ಚರ್ಚೆಗೆ ಅವಕಾಶ ನೀಡುವುದಾಗಿ ಪ್ರಕಟಿಸಿದರು.

### ಪರೀಕ್ಷೆಗಳಿಗೆ ರೇಟ್ ಕಾರ್ಡ್ ಫಿಕ್ಸ್

ವಿಧಾನ ಸಭೆಯಲ್ಲಿ 2025ನೇ ಸಾಲಿನ ಬಜೆಟ್ ಸೆಷನ್ ಮಾರ್ಚ್ 3 ರಿಂದ ಆರಂಭವಾಗಿದೆ. ಕೆಪಿಎಸ್‌ಸಿ ಪರೀಕ್ಷಾ ಅಕ್ರಮದ ವಿಚಾರವಾಗಿ ನಿಲುವಳಿ ಸೂಚನೆಯಡಿ ಮಾತನಾಡಿ ವಿಪಕ್ಷ ನಾಯಕ ಆರ್.ಅಶೋಕ್ , ಪರೀಕ್ಷೆಗಳಿಗೆ ರೇಟ್ ಕಾರ್ಡ್ ಫಿಕ್ಸ್ ಮಾಡಲಾಗಿದೆ ಎಂಗ ಗಂಭೀರ ಆರೋಪವನ್ನು ಕೆಪಿಎಸ್‌ಸಿ ವಿರುದ್ದ ಮಾಡಿದರು. ಕೆಪಿಎಸ್‌ಸಿಯಲ್ಲಿ ಭ್ರಹ್ಮಾಂಡ ಭ್ರಷ್ಟಾಚಾರ ನಡೆಯುತ್ತಿದೆ. ಹುದ್ದೆಗಳಿಗೆ ರೇಟ್ ಫಿಕ್ಸ್ ಮಾಡಲಾಗಿದೆ ಎಂಬ ಗಂಭೀರ ಆರೋಪ ಮಾಡಿದರು. ಪ್ರಿಲಿಮ್ಸ್ ನಿಂದಲೇ 1.5 ಕೋಟಿ, ಮುಖ್ಯ ಪರೀಕ್ಷೆಗೆ 1 ಕೋಟಿ, ಸಂದರ್ಶನದ ನಂತರ 40 ಲಕ್ಷ ರೇಟು, ಎಸಿ ಗೆ 2 ಕೋಟಿ, ಡಿವೈಎಸ್‌ಪಿ 2 ಕೋಟಿ, ತಹಸೀಲ್ದಾರ್ ಗೆ 1 ಕೋಟಿ ಹೀಗೆ ರೇಟ್ ಫಿಕ್ಸ್ ಆಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಗಂಭೀರ ಆರೋಪ ಮಾಡಿದರು.

### ಮುಖ್ಯ ಕಾರ್ಯದರ್ಶಿ ಅತೀಕ್ ವಿರುದ್ಧ ಕರವೇ ಗಂಭೀರ ಆರೋಪ

ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಮರುಪರೀಕ್ಷೆಯಲ್ಲೂ ಕನ್ನಡ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ ಎಂದು ಬೀದಿಗಿಳಿದು ಹೋರಾಟ ಮಾಡುತ್ತಿದ್ದಾರೆ. ಕನ್ನಡ ಪ್ರಶ್ನೆಪತ್ರಿಕೆಯಲ್ಲಿ ಮಹಾ ಎಡವಟ್ಟುಗಳನ್ನು ಮಾಡುವ ಮೂಲಕ ಪರೀಕ್ಷಾರ್ಥಿಗಳ ಕೆಂಗಣ್ಣಿಗೆ ಗುರಿಯಾಗಿರುವ ಪ್ರಕರಣವು ಇದೀಗ ಮುಖ್ಯಮಂತ್ರಿಗಳ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್ ಅವರನ್ನು ಸುತ್ತಿಕೊಂಡಿದೆ. ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಅತೀಕ್ ಅವರ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿದ್ದಾರೆ. 384 ಪ್ರೊಬೆಷನರಿ ಗೆಜೆಟೆಡ್ ಅಧಿಕಾರಿಗಳ ಹುದ್ದೆಗೆ ಕಳೆದ ಡಿಸೆಂಬರ್‌ನಲ್ಲಿ ನಡೆದ ಮರುಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ. ಈ ಅನ್ಯಾಯ ಸರಿಪಡಿಸುವ ಕಾರ್ಯವನ್ನು ಸರ್ಕಾರ ಇಷ್ಟು ಹೊತ್ತಿಗೆ ಮಾಡಬೇಕಿತ್ತು. ಆದರೆ ತಾವೇ ಇದಕ್ಕೆ ಅಡ್ಡಿಯಾಗಿದ್ದೀರಿ ಎಂದು ಮೊದಲಿನಿಂದಲೂ ವಿದ್ಯಾರ್ಥಿಗಳು ಹೇಳುತ್ತಿದ್ದರು. ಕಳೆದ ಬಾರಿ ಇಡೀ ಪರೀಕ್ಷೆಯೇ ರದ್ದಾಗಲು ಮುಖ್ಯ ಕಾರಣರಾದ ಪರೀಕ್ಷಾ ನಿಯಂತ್ರಕರನ್ನು ತಾವು ಬೆಂಬಲಿಸುತ್ತಿದ್ದೀರಿ. ಪರೀಕ್ಷಾ ನಿಯಂತ್ರಕರು ಅದೇ ಹುದ್ದೆಯಲ್ಲಿ ಮುಂದುವರೆಯಲು ಕೂಡ ನೀವೇ ಕಾರಣ, ಅಷ್ಟೇ ಅಲ್ಲದೆ ಮರುಪರೀಕ್ಷೆಯಲ್ಲಾದ ತಪ್ಪುಗಳ ಬಗ್ಗೆ ತಾವು ಸಿಎಂ ಸಿದ್ದರಾಮಯ್ಯ ಅವರಿಗೆ ಸರಿಯಾದ ಮಾಹಿತಿ ನೀಡದೆ ದಾರಿ ತಪ್ಪಿಸಿದ್ದೀರಿ ಎಂಬ ಆರೋಪ ಕೂಡ ವಿದ್ಯಾರ್ಥಿಗಳದ್ದು ಎಂದು ನಾರಾಯಣಗೌಡ ಹೇಳಿದ್ದಾರೆ



## ಮುಡಾ ಕೇಸ್‌ನಲ್ಲಿ ಸಿಎಂಗೆ ಮತ್ತೆ ಸಂಕಷ್ಟ: ಮೇಲ್ಮನವಿ ಸಲ್ಲಿಕೆ


• ಉದಯವಾಹಿನಿ, ಬೆಂಗಳೂರು



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ) ನಿವೇಶನ ಹಂಚಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತೆ ಸಂಕಷ್ಟ ಎದುರಾಗಿದೆ. ಸಿಎಂ ಕುಟುಂಬದ ವಿರುದ್ಧದ ಮುಡಾ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ತನಿಖೆ ಕೋರಿ ಮೇಲ್ಮನವಿ ಸಲ್ಲಿಸಲಾಗಿದೆ. ಮುಡಾ ನಿವೇಶನ ಹಂಚಿಕೆ ಹಗರಣವನ್ನು ಸಿಬಿಐ ತನಿಖೆಗೆ ವಹಿಸಬೇಕೆಂದು ಒತ್ತಾಯಿಸಿ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಲಾಗಿದೆ. ಸಿಬಿಐ ತನಿಖೆ ಅರ್ಜಿಯನ್ನು ಹೈಕೋರ್ಟ್ ಏಕ ಸದಸ್ಯ ಪೀಠ ವಜಾ ಮಾಡಿದ್ದು, ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಲಾಗಿದೆ. ದೂರುದಾರ ಸ್ನೇಹಮಯಿ ಕೃಷ್ಣ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ್ದಾರೆ.

## ಹೊಸ ಜಿಲ್ಲೆಗಳ ಘೋಷಣೆಗೆ ಹೆಚ್ಚಿದ ಬೇಡಿಕೆ: ಸಚಿವ ಸಿಹಿ ಸುದ್ದಿ

• ಉದಯವಾಹಿನಿ, ಬೆಂಗಳೂರು



ಇಂಡಿ ತಾಲ್ಲೂಕನ್ನು ಜಿಲ್ಲಾ ಕೇಂದ್ರವಾಗಿ ಘೋಷಿಸಬೇಕೆಂದು ವಿಧಾನಸಭೆಯಲ್ಲಿ ಇಂಡಿ ಶಾಸಕ ಯಶವಂತರಾಯ ಗೌಡ ಪಾಟೀಲ್ ಗಮನಸೆಳೆದಿದ್ದಾರೆ. ಇಂಡಿ ತಾಲ್ಲೂಕನ್ನು ಜಿಲ್ಲೆಯನ್ನಾಗಿ ಪರಿವರ್ತಿಸಬೇಕು. ಅಭಿವೃದ್ಧಿಯ ದೃಷ್ಟಿಯಿಂದ ಜಿಲ್ಲೆಯಾಗಿ ಪರಿವರ್ತನೆ ಮಾಡಬೇಕೆಂದು ಆಗ್ರಹಿಸಿದ್ದಾರೆ. ಸಾಕಷ್ಟು ಹೊಸ ಜಿಲ್ಲೆಗಳಿಗೆ ಬೇಡಿಕೆ ಇದೆ. ರಾಜಸ್ಥಾನ ಮಾದರಿಯಲ್ಲಿ ಹೊಸ ಜಿಲ್ಲೆಗಳನ್ನು ಘೋಷಿಸಿ ಮುಂದೆ ಹೊಸ ಜಿಲ್ಲೆಗಳನ್ನು ಮಾಡುವಾಗ ಇಂಡಿ ತಾಲ್ಲೂಕನ್ನು ಗಮನಿಸಿ ಎಂದು ಹೇಳಿದ್ದಾರೆ. ಕಂದಾಯ ಸಚಿವ ಕೃಷ್ಣಬೈರೇಗೌಡ ಉತ್ತರ ನೀಡಿದ್ದು. ಸದ್ಯಕ್ಕೆ ಯಾವುದೇ ಹೊಸ ಜಿಲ್ಲೆ ಮಾಡುವ ನಿರ್ಧಾರವಿಲ್ಲ. ಮುಂದೆ ಹೊಸ ಜಿಲ್ಲೆಗಳ ಪರಿವರ್ತನೆಯ ವೇಳೆ ಗಮನಹರಿಸಲಾಗುವುದು ಎಂದು ಹೇಳಿದ್ದಾರೆ. ಹೊಸ ಜಿಲ್ಲೆ ಅಥವಾ ತಾಲ್ಲೂಕುಗಳನ್ನು ರಚಿಸುವ ಬಗ್ಗೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾಪ ಇಲ್ಲ. ಒಂದೆರಡು ತಾಲ್ಲೂಕುಗಳಿಂದ ಜಿಲ್ಲಾ ಕೇಂದ್ರ ರಚಿಸುವಂತೆ ಬೇಡಿಕೆ ಇದೆ. ಮುಂದೆ ಜಿಲ್ಲಾ ಕೇಂದ್ರಗಳ ರಚನೆ ಸಾಧ್ಯತೆ ಎದುರಾದಲ್ಲಿ ಇಂಡಿ ತಾಲ್ಲೂಕನ್ನು ಪರಿಗಣಿಸಲಾಗುವುದು ಎಂದು ಹೇಳಿದ್ದಾರೆ.

## 4 ನಗರಗಳಲ್ಲಿ ಹೈಡ್ರೋಜನ್ ರೀಫಿಲ್ಲಿಂಗ್ ಸ್ಟೇಶನ್ ಆರಂಭ

• ಉದಯವಾಹಿನಿ, ಹೊಸದಿಲ್ಲಿ

ಭಾರತ 2070ರ ವೇಳೆಗೆ ನಿವ್ವಳ-ಶೂನ್ಯ ಇಂಗಾಲ ಹೊರಸೂಸುವಿಕೆ ಗುರಿಯತ್ತ ಹೆಜ್ಜೆ ಹಾಕಿದ್ದು, ದೇಶದ ಮೊದಲ ಹೈಡ್ರೋಜನ್ ಚಾಲಿತ ವಾಹನದ ಪ್ರಾಯೋಗಿಕ ಸಂಚಾರಕ್ಕೆ ಇಂದು (ಮಾ. 4) ಚಾಲನೆ ಸಿಕ್ಕಿದೆ. ಟಾಟಾ ಮೋಟಾರ್ಸ್ ಬಿಡುಗಡೆ ಮಾಡಿದ ಹೈಡ್ರೋಜನ್ ಚಾಲಿತ ಹೆವಿ-ಡ್ಯೂಟಿ ಟ್ರಕ್‌ಗಳ ಮೊದಲ ಪ್ರಾಯೋಗಿಕ ಸಂಚಾರಕ್ಕೆ ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಮತ್ತು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ದೆಹಲಿಯಲ್ಲಿ ಹಸಿರು ನಿಶಾನೆ ತೋರಿದರು.

ಈ ವೇಳೆ ಸಚಿವ ಪ್ರಲ್ಹಾದ ಜೋಶಿ ಮಾತನಾಡಿ, ಎರಡು ವರ್ಷಗಳ ಕಾಲ 16 ಸುಧಾರಿತ ಹೈಡ್ರೋಜನ್ ವಾಹನಗಳ ಪ್ರಾಯೋಗಿಕ ಸಂಚಾರ ನಡೆಸಲಾಗುವುದು. H2 -ICE ಮತ್ತು ಇಂಧನ ಕೋಶ H 2 -FCEV ತಂತ್ರಜ್ಞಾನ ಹೊಂದಿರುವ ಈ ಟ್ರಕ್‌ಗಳು ಮುಂಬೈ, ಪುಣೆ, ದೆಹಲಿ-NCR, ಸೂರತ್, ವಡೋದರಾ, ಜಮ್ಶೆಡ್‌ಪುರ ಮತ್ತು ಕಳಿಂಗನಗರ ಸುತ್ತಮುತ್ತಲಿನ ಪ್ರದೇಶಗಳು ಸೇರಿದಂತೆ ಭಾರತದ ಪ್ರಮುಖ ಸರಕು ಸಾಗಣೆ ಮಾರ್ಗಗಳಲ್ಲಿ ಪರೀಕ್ಷಾರ್ಥ ಸಂಚಾರ ನಡೆಸಲಿವೆ ಎಂದು ಹೇಳಿದರು.



**ಸಾಗಣೆ ಮಾರ್ಗಗಳಲ್ಲಿ ಪರೀಕ್ಷಾರ್ಥ ಸಂಚಾರ**

3 ಹೈಡ್ರೋಜನ್ ಚಾಲಿತ ಹೆವಿ-ಡ್ಯೂಟಿ ಟ್ರಕ್‌ಗಳ ಮೊದಲ ಬ್ಯಾಚ್ ಫರಿದಾಬಾದ್-ದೆಹಲಿ NCR ಮತ್ತು ಅಹಮದಾಬಾದ್-ಸೂರತ್-ವಡೋದರಾ ಮಾರ್ಗಗಳಲ್ಲಿ ಕಾರ್ಯನಿರ್ವಹಿಸುತ್ತದೆ. ಇದಕ್ಕಾಗಿ ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ಫರಿದಾಬಾದ್, ವಡೋದರಾ, ಪುಣೆ ಮತ್ತು ಬಾಲಸೋರ್‌ನಲ್ಲಿ ಹೈಡ್ರೋಜನ್ ಮರುಪೂರಣ ಕೇಂದ್ರಗಳನ್ನು ಸ್ಥಾಪಿಸುತ್ತಿದೆ ಎಂದು ತಿಳಿಸಿದರು.

**ಹಸಿರು ಹೈಡ್ರೋಜನ್‌ನಲ್ಲಿ ಜಗತ್ತನ್ನೇ ಮುನ್ನಡೆಸಲಿದೆ ಭಾರತ:** ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ಹಸಿರು ಇಂಧನ ಪರಿವರ್ತನೆಯಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿದೆ. 19,744 ಕೋಟಿ ರೂಪಾಯಿ ಬೃಹತ್ ಆರ್ಥಿಕ ನೆರವಿನಲ್ಲಿ ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಶನ್ ಅಭೂತಪೂರ್ವ ಗುರಿ ಸಾಧನೆ ತೋರುತ್ತಿದೆ ಎಂದು ಹೇಳಿದರು.

ಹಸಿರು ಹೈಡ್ರೋಜನ್ ವಲಯದಲ್ಲಿ ಭಾರತ ಈಗಾಗಲೇ ಗಮನಾರ್ಹ ಪ್ರಗತಿ ಸಾಧಿಸಿದೆ. ವರ್ಷಕ್ಕೆ 4,12,000 ಟನ್ ಹಸಿರು ಹೈಡ್ರೋಜನ್ ಉತ್ಪಾದನೆ ನೀಡಿದೆ. 3 GW ಎಲೆಕ್ಟ್ರೋಲೈಸರ್ ಉತ್ಪಾದನಾ ಸಾಮರ್ಥ್ಯವನ್ನು ಅನುಮೋದಿಸಿದೆ. ಅಲ್ಲದೇ, ಸಾರಿಗೆ, ಸಾಗಣೆ, ಉಕ್ಕು ಮತ್ತು ಸಂಗ್ರಹಣೆಯಲ್ಲಿ ಹೊಸದಾಗಿ 7 ಪೈಲಟ್ ಯೋಜನೆಗಳನ್ನು ಸಹ ಪ್ರಾರಂಭಿಸಲಾಗಿದೆ ಎಂದು ತಿಳಿಸಿದರು.

# ಸಿದ್ದರಾಮಯ್ಯಗೆ ಚಾಮುಂಡೇಶ್ವರಿ ಸದ್ಬುದ್ಧಿ ನೀಡಲಿ, ರೈತಪರ ಬಜೆಟ್ ಮಂಡಿಸಲಿ

**| ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಬೇಕು | ರೈತರಿಗೆ ಅನ್ಯಾಯವಾಗದಂತೆ ಎಚ್ಚರ ವಹಿಸಬೇಕು**

• ಉದಯವಾಹಿನಿ, ಮಂಡ್ಯ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 16ನೇ ಬಜೆಟ್ ಮಂಡನೆ ತಯಾರಿಯಲ್ಲಿದ್ದಾರೆ. ತಾಯಿ ಶ್ರೀ ಚಾಮುಂಡೇಶ್ವರಿ ದೇವಿಯು ಸಿಎಂಗೆ ಸದ್ಬುದ್ಧಿ ಕೊಟ್ಟು ರೈತಪರ ಬಜೆಟ್ ಮಂಡನೆ ಮಾಡಲೆಂದು ಪ್ರಾರ್ಥಿಸುತ್ತೇನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೇಳಿದರು.

ತಾಲ್ಲೂಕಿನ ಕೊತ್ತತ್ತಿ ಗ್ರಾಮದಲ್ಲಿ ಮಂಗಳವಾರ ಭತ್ತ ನಾಟಿ ಮಾಡುವ ಮೂಲಕ ಭತ್ತ ನಾಟಿ ಸಂಭ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮುಂದೆ ಭೀಕರ ಬರಗಾಲ ಎದುರಾಗುವ ಪರಿಸ್ಥಿತಿಯಿದೆ. ಹೀಗಾಗಿ ಈಗಿನಿಂದಲೇ ಸರಕಾರ ಜಾನುವಾರುಗಳಿಗೆ ಮೇವು ಸಂಗ್ರಹ ಮಾಡಬೇಕು. ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಬೇಕು. ಕಾವೇರಿ ಕೊಳ್ಳದ ರೈತರಿಗೆ ಅನ್ಯಾಯವಾಗದಂತೆ ಮುಖ್ಯಮಂತ್ರಿಯವರು ಎಚ್ಚರ ವಹಿಸಬೇಕು, ಎಂದು ಆಗ್ರಹಿಸಿದರು.

**ಬಿಎಸ್‌ವೈಗೆ ಜನ್ಮ ಕೊಟ್ಟ ಪುಣ್ಯ ಭೂಮಿ**

ಮಂಡ್ಯ ಜಿಲ್ಲೆಯು ಬಿ.ಎಸ್. ಯಡಿಯೂರಪ್ಪ ಅವರಿಗೆ ಜನ್ಮಕೊಟ್ಟ ಪುಣ್ಯಭೂಮಿ. ನಾನೂ ಈ ಮಣ್ಣಿನ ಮೊಮ್ಮಗ. ದೇಶದಲ್ಲಿ ಯಾವ ಮುಖ್ಯಮಂತ್ರಿಯೂ ಮಾಡಿರದ ಕಾರ್ಯ ಮಾಡಿದ್ದಾರೆ. ರೈತರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿ, ಪ್ರತ್ಯೇಕವಾಗಿ ಕೃಷಿ ಬಜೆಟ್ ಮಂಡನೆ ಮಾಡಿದ ಹೆಗ್ಗಳಿಕೆ ಬಿಎಸ್‌ವೈ ಅವರದು. ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡಿದರು. ಕೇವಲ 25 ಸಾವಿರ ರೂ. ಪಾವತಿಸಿದ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿದ್ದರು. ಆದರೀಗ 3 ಲಕ್ಷ ಕೊಟ್ಟರೂ ಟಿಸಿ ಅಳವಡಿಸುತ್ತಿಲ್ಲ, ಎಂದು ದೂರಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ನಂತರ ರೈತ ಪರ ಯಾವೊಂದು ನಿರ್ಧಾರ ಮಾಡಿಲ್ಲ. ಬದಲಾಗಿ ಕಾವೇರಿ ಕೊಳ್ಳದ ಕೃಷಿಕರಿಗೆ ಅನ್ಯಾಯವಾಗಿದೆ. ಇಂಡಿಯಾ ಒಕ್ಕೂಟ ತಮಿಳುನಾಡಿನ ಸ್ಟಾಲಿನ್ ಅವರನ್ನು ಖುಷಿ ಪಡಿಸಲು ಕದ್ದುಮುಚ್ಚಿ ಕಾವೇರಿ ನೀರನ್ನು ಬಿಟ್ಟು ರಾಜ್ಯದ ರೈತರಿಗೆ ಅನ್ಯಾಯ ಮಾಡಿದೆ, ಎಂದು ಆರೋಪಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಕಿಸಾನ್ ಸಮ್ಮಾನ್ ಯೋಜನೆಯಡಿ ರೈತರಿಗೆ 6,000 ರೂ.ಕೊಟ್ಟಾಗ, ಯಡಿಯೂರಪ್ಪ ಅವರು 4 ಸಾವಿರ ರೂ. ನೀಡಿದರು. ಆದರೀಗ ಕಾಂಗ್ರೆಸ್ ಸರಕಾರ ಅದನ್ನು ನಿಲ್ಲಿಸಿದೆ. ಅಲ್ಲದೆ, ರೈತ ವಿದ್ಯಾನಿಧಿಯನ್ನೂ ನಿಲ್ಲಿಸಿ ರೈತ ವಿರೋಧಿ ನೀತಿ ಅನುಸರಿಸುತ್ತಿದೆ. ಗ್ಯಾರಂಟಿ ಹೆಸರು ಹೇಳಿ ಮತ್ತೊಂದು ಕಡೆ ಕಿತ್ತುಕೊಳ್ಳುತ್ತಿದೆ. ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯ, ರೈತ ಹಾಗೂ ಬಡವರ ವಿರೋಧ ಸರಕಾರ ಇದೆ, ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಸ್ತುತ ಅಧಿವೇಶನ ಪ್ರಾರಂಭವಾಗಿದ್ದು, ಸರಕಾರದ ಕಿವಿ ಹಿಂಡುವ ಕೆಲಸವನ್ನು ಬಿಜೆಪಿ ಮಾಡಲಿದೆ. ಕಾಂಗ್ರೆಸ್ ಸರಕಾರದ ನಿಜ ಬಣ್ಣವನ್ನು ರಾಜ್ಯದ ಜನರ ಮುಂದೆ ಬಿಚ್ಚಿಡುತ್ತೇವೆ, ಎಂದರು.



**ಮಾರ್ಚ್ 7 ಬಜೆಟ್ ಮಂಡನೆ**

### ಕೃಷಿ ವಿವಿ ವಿಚಾರದಲ್ಲಿ ರಾಜಕಾರಣ ಬೇಡ

ಜಿಲ್ಲೆಯವರೇ ಎನ್. ಚಲುವರಾಯಸ್ವಾಮಿ ಅವರು ಕೃಷಿ ಮಂತ್ರಿಯಾಗಿದ್ದು, ಅವರು ಈ ಭಾಗಕ್ಕೆ ಏನಾದರೂ ಕೊಡುಗೆ ತರಲಿ. ಉತ್ತರ ಕರ್ನಾಟಕಕ್ಕೆ ಕೊಟ್ಟ ಕೃಷಿ ವಿಶ್ವವಿದ್ಯಾಲಯವನ್ನು ಕಿತ್ತು ಇಲ್ಲಿಗೆ ತರುವ ಅವಶ್ಯಕತೆಯಿಲ್ಲ. ಮತ್ತೊಂದು ವಿವಿ ಮಾಡಲಿ. ಈ ವಿಚಾರದಲ್ಲಿ ರಾಜಕಾರಣ ಮಾಡಬಾರದು, ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು. ಕೃಷಿ ವಿಶ್ವವಿದ್ಯಾಲಯದೊಂದಿಗೆ ತೋಟಗಾರಿಕೆ ವಿವಿ ತರುವ ಕುತಂತ್ರ ನಡೆಯುತ್ತಿದೆ. ಸಿದ್ದರಾಮಯ್ಯ ರಾಜ್ಯದ ಮುಖ್ಯಮಂತ್ರಿ. ಹಾಗೆಯೇ ಚಲುವರಾಯಸ್ವಾಮಿ ರಾಜ್ಯಕ್ಕೆ ಸಚಿವರು. ಅಭಿವೃದ್ಧಿ ವಿಚಾರದಲ್ಲಿ ತಾರತಮ್ಯ ಮಾಡಬಾರದು. ಎಲ್ಲಾ ಜಿಲ್ಲೆಗೂ ನ್ಯಾಯ ಕೊಡುವ ಕೆಲಸ ಮಾಡಬೇಕು, ಎಂದು ಆಗ್ರಹಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,738/Gram24ct ₹8,010/Gram22ct | ಬೆಳ್ಳಿ: ₹98.00/Gram

# ಶ್ರೀಬಿಲ್ವಪತ್ರೆಗವಿ ಮಠದ ಚರಪಟ್ಟಾಧಿಕಾರ ಮಹೋತ್ಸವದ ಪೂರ್ವಭಾವಿ ಸಭೆ

## ಪ್ರಗತಿಪರ ಕೈಂಕಯ್ಯಗಳನ್ನು ಹಿರಿಯ ಶ್ರೀಗಳವರೊಡಗೂಡಿ ಅಭಿವೃದ್ಧಿ ಪಡಿಸಲು ನೂತನ ಉತ್ತರಾಧಿಕಾರಿಯವರ ಆಯ್ಕೆ ಅಗತ್ಯ

• ಉದಯವಾಹಿನಿ, ಕನಕಪುರ

ಶ್ರೀ ಬಿಲ್ವಪತ್ರೆ ಮಠದ ಚರಪಟ್ಟಾಧಿಕಾರ ಮಹೋತ್ಸವದ ಪೂರ್ವಭಾವಿ ಸಭೆಯ ದಿವ್ಯ ಸಾನಿಧ್ಯವನ್ನು ಶ್ರೀ ದೇಗುಲಮಠದ ಹಿರಿಯ ಪರಮಪೂಜ್ಯ ಶ್ರೀಶ್ರೀ ಮುಮ್ಮಡಿ ನಿರ್ವಾಣ ಮಹಾ ಸ್ವಾಮಿಗಳು, ನೂತನ ವಟುವಿಗೆ ಆಶೀರ್ವದಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ದೇಗುಲಮಠದ ಕಿರಿಯ ಪರಮಪೂಜ್ಯ ಶ್ರೀಚನ್ನಬಸವ ಮಹಾಸ್ವಾಮಿಗಳವರು.

ಶ್ರೀ ಬಿಲ್ವಪತ್ರೆ ಮಠವು ವೀರಶೈವ ಲಿಂಗಾಯತ ವಿರಕ್ತ ಪರಂಪರೆಗೆ ಸೇರಿದೆ. ಪ್ರಸ್ತುತ ಶ್ರೀಮಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಶ್ರೀ ಶಿವಲಿಂಗ ಸ್ವಾಮಿಗಳವರು ತಮ್ಮ 15ನೇ ವಯಸ್ಸಿನಲ್ಲಿಯೇ ತಮ್ಮ ಗುರು ವರ್ಯರಾದ ಶ್ರೀ ಶ್ರೀ ಅಲಕ್ ನಿರಂಜನ ಸ್ವಾಮಿಗಳು, ಇಮ್ಮಡಿ ನಿರ್ವಾಣ ಮಹಾಸ್ವಾಮಿಗಳವರ ಆಶೀರ್ವಾದದೊಂದಿಗೆ ದೀಕ್ಷೆಯನ್ನು ಸ್ವೀಕರಿಸಿ, ಶ್ರೀಮಠದ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸುತ್ತಾ ಶಿವಾನುಭವ ಗೋಷ್ಠಿ, ಚಿಂತನ-ಮಂಥನ, ಭಜನೆ, ಧಾರ್ಮಿಕ-ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಅನೂಚಾನವಾಗಿ ನಡೆಸಿಕೊಂಡು ಬರುತ್ತಿರುವುದರ ಜೊತೆಗೆ ಭಕ್ತಾದಿಗಳಿಗೆ ದಾಸೋಹ ವ್ಯವಸ್ಥೆಯನ್ನು ನಿರಂತರವಾಗಿ ಮಾಡಿಕೊಂಡು ಬರುತ್ತಿರುವುದು ಹೆಮ್ಮೆಯ ವಿಷಯ. ಪರಮ ಪೂಜ್ಯರು ಕೃಷಿಯಲ್ಲೂ ತೊಡಗಿಸಿಕೊಂಡು ಅನೇಕ ಪ್ರಯೋಗಗಳನ್ನು ಮಾಡುವುದರ ಮೂಲಕ ಭಕ್ತರಿಗೆ ಪ್ರೇರಣೆಯಾಗಿದ್ದಾರೆ. ಪ್ರಸ್ತುತ ಶ್ರೀಮಠದಲ್ಲಿ ಎಲ್ಲಾ ವರ್ಗದ ಜನಾಂಗದವರಿಗೂ ವಿವಾಹಗಳನ್ನು ನೆರವೇರಿಸಿಕೊಳ್ಳಲು ಉಚಿತ ಅವಕಾಶ ಮಾಡಿ ಕೊಟ್ಟಿರುವುದು ಸ್ತುತ್ಯಾರ್ಹ.

ಪೂಜ್ಯರು ಶ್ರೀಮಠದ ತಮ್ಮೆಲ್ಲಾ ಪ್ರಗತಿಪರ ಯೋಜನೆಗಳಿಗೆ ಕನಕಪುರದ ಶ್ರೀ ದೇಗುಲಮಠದ ಶ್ರೀಗಳ ಆಶೀರ್ವಾದವೇ ತಮಗೆ ಶ್ರೀರಕ್ಷೆ ಎಂದು ನಂಬಿ ಮುನ್ನಡೆಯುತ್ತಿರುವುದು ವಿಶೇಷ. ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದ ಬಿಲ್ವಪತ್ರೆ ಮಠದ ಪೂಜ್ಯ ಶ್ರೀ ಶಿವಲಿಂಗಮಹಾ ಸ್ವಾಮಿಗಳು ಈ ಪ್ರಮುಖ ಕಾರ್ಯಕ್ರಮಕ್ಕೆ ನಾಡಿನ ಹರ ಗುರು ಚರಮೂರ್ತಿಗಳು, ಗಣ್ಯಾತಿಗಣ್ಯರು, ಶ್ರೀ ಮಠದ ಸದ್ಭಕ್ತರು, ಚುನಾಯಿತ ಪ್ರತಿನಿಧಿಗಳು, ಸಂಘ-ಸಂಸ್ಥೆಗಳ ಮುಖ್ಯಸ್ಥರು, ಮುಖಂಡರುಗಳು ಅಪಾರ ಸಂಖ್ಯೆಯಲ್ಲಿ ಭಾಗವಹಿಸಲಿದ್ದು, ಎಲ್ಲಾ ಭಕ್ತರು ಕೂಡ ತಪ್ಪದೇ ಆಗಮಿಸಿ ತಮ್ಮ ತನು-ಮನ-ಧನ ಸಮರ್ಪಿಸುವ ಮೂಲಕ ಪಟ್ಟಾಧಿಕಾರ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಗುರು ಕೃಪೆಗೆ ಪಾತ್ರರಾಗಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ನೂತನವಾಗಿ ನಿಯುಕ್ತಿ ಕೊಂಡಿರುವ ಶ್ರೀ ಷಡಕ್ಷರಿರವರು, ಮರಳವಾಡಿ ಮಠದ ಕಿರಿಯ ಪೂಜ್ಯರು ತೋಟಳ್ಳಿ ಮಠದ ಪೂಜ್ಯರು ಹೆಬ್ಬನಿ ಮಠದ ಪೂಜ್ಯರು ರಾಮೇಗೌಡನಪುರ ಮಠ ಪೂಜ್ಯರು ಚನ್ನಪಟ್ಟಣದ ಕುಡಿ ನೀರು ಕಟ್ಟೆ ಮಠದ ಪೂಜ್ಯರು, ಹರಗುರು ಚರಮೂರ್ತಿಗಳು ಅನೇಕ ಸಮಾಜ ಮುಖಂಡರು, ರಾಜಕೀಯ ಮುಖಂಡರು ಭಕ್ತರ ಉಪಸ್ಥಿತಿಯಲ್ಲಿ ನೆರವೇರಿತು.


ಉದಯವಾಹಿನಿ ಚಿತ್ರ

**ಗುರು ಕೃಪೆಗೆ ಪಾತ್ರರಾಗಿ**

> ಧಾರ್ಮಿಕ ಸಂಪ್ರದಾಯದಂತೆ ನಿರಂಜನ ಚರ ಪಟ್ಟಾಧಿಕಾರ ಮಹೋತ್ಸವವನ್ನು ಇದೇ ವರ್ಷದ ಮೇ-22ನೇ ತಾರೀಖಿನಂದು ನಡೆಸಲು ನಿರ್ಧರಿಸಲಾಗಿದೆ ನಮ್ಮ ಪೂಜ್ಯ ಶ್ರೀ ಮುಮ್ಮಡಿ ನಿರ್ವಾಣ ಮಹಾಸ್ವಾಮಿಗಳವರ ಅಪೇಕ್ಷೆಯಂತೆ ಎಲ್ಲರೂ ಸಹಕಾರ ನೀಡಬೇಕೆಂದು ತಿಳಿಸಿದರು.

**ಗುರು-ಹಿರಿಯರ ಮಾರ್ಗದರ್ಶನ**

ಪ್ರಸ್ತುತ ಶ್ರೀಮಠದ ತ್ರಿವಿಧ ದಾಸೋಹ, ಪ್ರಗತಿಪರ ಕೈಂಕಯ್ಯಗಳನ್ನು ಹಿರಿಯ ಶ್ರೀಗಳವರೊಡಗೂಡಿ ಅಭಿವೃದ್ಧಿ ಪಡಿಸಲು ನೂತನ ಉತ್ತರಾಧಿಕಾರಿಯವರ ಆಯ್ಕೆ ಅತ್ಯಗತ್ಯವಾಗಿದೆ. ತತ್ಸಂಬಂಧವಾಗಿ ರಾಮನಗರ ಜಿಲ್ಲೆ ಕನಕಪುರ ತಾಲ್ಲೂಕಿನ ಶ್ರೀ ಬಿಲ್ವಪತ್ರೆ ಗವಿಮಠದ ಬಳಿ ವಾಸ ವಿರುವ ಸುಸಂಸ್ಕೃತ ಶರಣ ದಂಪತಿಗಳಾದ ಶ್ರೀಮತಿ ಸಿದ್ದಗಂಗಮ್ಮ ಮತ್ತು ಶ್ರೀ ರಾಜಣ್ಣರವರ ದ್ವಿತೀಯ ಪುತ್ರರಾದ ವೇದಾಗಮ, ಸಂಸ್ಕೃತದಲ್ಲಿ ಪದವಿ ಪಡೆದಿರುವ ಶ್ರೀ ಷಡಕ್ಷರಿ ಬಿ. ಆರ್ ರವರನ್ನು ಪೂಜ್ಯ ನಿ. ಪ್ರ. ಸ್ವ. ಶ್ರೀ ಶ್ರೀ ಶಿವಲಿಂಗ ಸ್ವಾಮಿಗಳ ಹಾಗೂ ಸಮಾಜದ ಗುರು-ಹಿರಿಯರ ಮಾರ್ಗದರ್ಶನದಂತೆ ಉತ್ತರಾಧಿಕಾರಿಯನ್ನಾಗಿ ಸ್ವೀಕರಿಸಿರುತ್ತಾರೆ.

# ಅಪರಾಧ ಪ್ರಕರಣಗಳ ತಡೆಗೆ ಸಾರ್ವಜನಿಕರ ಸಹಕಾರ ಅಗತ್ಯ

ಮಧುಗಿರಿ: ನಾಗರೀಕರು ತಮ್ಮ ಮನೆಗಳನ್ನು ಬಿಟ್ಟು ಹೊರ ಹೋಗುವಾಗ ಕಡ್ಡಾಯವಾಗಿ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಪಿಎಸ್ಐ ವಿಜಯ್‌ಕುಮಾರ್ ಸಾರ್ವಜನಿಕರಿಗೆ ಕರೆ ನೀಡಿದರು. ಪಟ್ಟಣದ ಒಂದನೇ ಬ್ಲಾಕ್‌ನಲ್ಲಿ ಮಧುಗಿರಿ ಪೊಲೀಸ್ ಠಾಣೆಯ ವತಿಯಿಂದ ಆಯೋಜಿಸಿದ್ದ ಜನ ಸಂಪರ್ಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಜನರು ಅನ್ಯ ಕಾರ್ಯದ ನಿಮಿತ್ತ ಅಥವಾ ಕೆಲವು ದಿನಗಳ ಕಾಲ ಮನೆಯಿಂದ ಹೊರ ಹೋಗುವಾಗ ಗಸ್ತು ಪೊಲೀಸರಿಗಾಗಲಿ, ಸ್ಥಳೀಯ ಠಾಣೆಗಾಗಲಿ ಮಾಹಿತಿ ನೀಡಿದರೆ ಪೊಲೀಸರು ಮನೆಯ ಬಗ್ಗೆ ಗಮನ ಹರಿಸುತ್ತಾರೆ ಹಾಗೂ ಮುಂದಾಗಬಹುದಾದ ಕಳ್ಳತನಗಳನ್ನು ತಡೆಯ ಬಹುದಾಗಿದೆ ಎಂದರು.

ರಂಜಾನ್, ಮತ್ತಿತರರ ಹಬ್ಬ ಹರಿದಿನಗಳು ಸಮೀಪವಾಗುತ್ತಿದ್ದು ಎಲ್ಲರೂ ಸೌಹಾರ್ದ, ಶಾಂತಿಯುತವಾಗಿ ಎಲ್ಲರೂ ಸೇರಿ ಆಚರಿಸಬೇಕು. ದೊಡ್ಡಪೇಟೆಯಲ್ಲಿ ವಿನಾ ಕಾರಣ ರಾತ್ರಿ ವೇಳೆಯಲ್ಲಿ ಅನಗತ್ಯವಾಗಿ ಕೆಲವರು ಓಡಾಟ ಮಾಡುತ್ತಿದ್ದಾರೆ. ಅಂತಹವರ ವಿರುದ್ಧ ಕ್ರಮ ಕೈಗೊಳ್ಳಬೇಕಾಗುತ್ತದೆ. ಯಾರಾದರೂ ಅಪರಿಚಿತರು, ಅನುಮಾನಸ್ಪದ ವ್ಯಕ್ತಿಗಳು ಕಂಡು ಬಂದರೆ ಪೊಲೀಸರಿಗೆ ಮಾಹಿತಿ ಒದಗಿಸಿ ತುರ್ತು ಸಹಾಯಕ್ಕಾಗಿ 112 ಕರೆ ಮಾಡಬೇಕು ಎಂದರು.

ಮುಖಂಡ ಎಸ್ ಬಿ ಟಿ ರಾಮು ಮಾತನಾಡಿ, ಪಟ್ಟಣದಲ್ಲಿ ಹಿಂದೂ ಮುಸ್ಲಿಂರು ಅಣ್ಣ-ತಮ್ಮಂದಿರಂತೆ ಮೊದಲಿನಿಂದಲೂ ಅನ್ಯೂನ್ಯವಾಗಿದ್ದೇವೆ. ಇದೂವರೆವಿಗೂ ಯಾವುದೇ ಅಹಿತಕರ ಘಟನೆ ನಡೆಯದಂತೆ ನಾವುಗಳು ಸಹ ಎಚ್ಚರವಹಿಸಿದ್ದೇವೆ. ಹಬ್ಬ ಹರಿದಿನಗಳನ್ನು ಒಟ್ಟಾಗಿ ಸೇರಿ ಆಚರಿಸಿದರೆ ಪ್ರೀತಿ ವಿಶ್ವಾಸ ಹೆಚ್ಚುತ್ತದೆ. ಪೊಲೀಸ್ ಇಲಾಖೆಯವರು ಈ ಜನಸಂಪರ್ಕ ಸಭೆಯನ್ನು ಆಯೋಜಿಸಿ ನಮ್ಮ ಸಮಸ್ಯೆಗಳನ್ನು ಆಲಿಸಿ ಪರಿಹಾರಗಳನ್ನು ಒದಗಿಸಿ ಕೊಟ್ಟಿರುವುದು ನಮಗೆ ಖುಷಿ ತಂದಿದೆ ಎಂದರು. ಸಭೆಯಲ್ಲಿ ಪುರಸಭಾ ಸದಸ್ಯ ಆಲೀಂ, ಜಾಮೀಯ ಮಸೀದಿ ಅಧ್ಯಕ್ಷ ಆಲೀಂ, ಮೌಲ್ವಿ ಮುಷ್ತಾಕ್ ಮೌಲಾನ, ಬಹೀರ್ ಅಹಮದ್, ರಘುಯಾದವ್ , ಲಕ್ಷ್ಮೀ ನಾರಾಯಣ್, ಬಾಬ ಫಕೃದ್ದೀನ್, ಬಿಲಾಲ್, ಷಾಜು ಇದ್ದರು.


ಉದಯವಾಹಿನಿ ಚಿತ್ರ

> ವಾಹನ ಸವಾರರು ಕಡ್ಡಾಯವಾಗಿ ತಮ್ಮ ವಾಹನಗಳಿಗೆ ದಾಖಲಾತಿಗಳನ್ನು ಪೊಲೀ ಸರು ಕೇಳಿದಾಗ ತೋರಿಸಬೇಕು. ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಧರಿಸಿ ವಾಹನ ಚಲಾಯಿಸಬೇಕು. ಅಪ್ರಾಪ್ತರಿಗೆ ದ್ವಿಚಕ್ರ ವಾಹನಗಳನ್ನು ಸವಾರಿಗೆ ನೀಡಬಾರದು ನೀಡಿದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳ ಬೇಕಾಗುತ್ತದೆ ಎಂದರು.

# ಪಂಚ ಗ್ಯಾರಂಟಿ ಯೋಜನೆ ಸಮರ್ಪಕ ಅನುಷ್ಠಾನಗೊಳಿಸಿ

• ಉದಯವಾಹಿನಿ, ಚಾಮರಾಜನಗರ

ಪಂಚ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅಧಿಕಾರಿಗಳು ಜಾರಿಗೊಳಿಸಿ ಅರ್ಹರಿಗೆ ಯೋಜನೆ ದೊರೆಯುವಂತೆ ಶ್ರಮಿಸಬೇಕು ಎಂದು ನೂತನ ತಾಲ್ಲೂಕು ಗ್ಯಾರಂಟಿ ಯೋಜನೆ ಪ್ರಾಧಿಕಾರದ ಅಧ್ಯಕ್ಷ ನಲ್ಲೂರು ಸೋಮೇಶ್ವರ ತಿಳಿಸಿದರು. ನಗರದ ತಾಲ್ಲೂಕು ಪಂಚಾಯಿತಿ ಕಚೇರಿಯ ಸಭಾಂಗಣದಲ್ಲಿ ನಡೆದ ತಾಲ್ಲೂಕು ಗ್ಯಾರಂಟಿ ಸಮಿತಿಯ ಪ್ರಥಮ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತಾಲ್ಲೂಕು ಗ್ಯಾರಂಟಿ ಸಮಿತಿಯ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಶಿಫಾರಸ್ಸು ಮಾಡಿರುವ ಕ್ಷೇತ್ರದ ಶಾಸಕರಾದ ಸಿ. ಪುಟ್ಟರಂಗಶೆಟ್ಟರಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದೇವೆ. ಮುಂದಿನ ದಿನಗಳಲ್ಲಿ ಶಾಸಕರ ನೇತೃತ್ವದಲ್ಲಿ ಕಚೇರಿಯನ್ನು ಉದ್ಘಾಟಿಸಲಾಗುತ್ತದೆ. ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಯು ಶೇ. 99 ರಷ್ಟು ಪ್ರಗತಿಯನ್ನು ಹೊಂದಿದೆ. ಜಿಲ್ಲೆ, ತಾಲ್ಲೂಕು ವ್ಯಾಪ್ತಿಯಲ್ಲಿ ಐದು ಗ್ಯಾರಂಟಿಗಳನ್ನು ಅಧಿಕಾರಿಗಳು ಶ್ರಮ ವಹಿಸಿ ಅನುಷ್ಠಾನ ಮಾಡಿದ್ದಾರೆ. ಹೀಗಾಗಿ ರಾಜ್ಯದಲ್ಲಿಯೇ ಚಾಮರಾಜನಗರ ಜಿಲ್ಲೆ ಗ್ಯಾರಂಟಿ ಅನುಷ್ಠಾನದಲ್ಲಿ ಪ್ರಥಮ ಸ್ಥಾನವನ್ನು ಪಡೆದುಕೊಂಡಿದೆ. ಅದೇ ರೀತಿ ಜಿಲ್ಲೆ ವ್ಯಾಪ್ತಿಯ ಐದು ತಾಲ್ಲೂಕುಗಳ ಪೈಕಿ ಚಾಮರಾಜನಗರ ತಾಲ್ಲೂಕು ಪ್ರಥಮ ಸ್ಥಾನವನ್ನು ಗಳಿಸಿದೆ. ಇದು ನಮ್ಮ ತಾಲ್ಲೂಕಿನ ಅಧಿಕಾರಿಗಳ ಸಾಧನೆಯಾಗಿದೆ. ಉತ್ತಮ ಕಾರ್ಯನಿರ್ವಹಣೆ ಮಾಡುತ್ತಿರುವ ಅಧಿಕಾರಿಗಳನ್ನು ಪ್ರಶಂಸಿಸೋಣ ಎಂದರು.

ಮೊದಲಿಗೆ ತಾ.ಪಂ. ಇಓ ಶ್ರೀನಿವಾಸ್, ಆಹಾರ ಇಲಾಖೆಯ ಶಿರಸ್ತೇದಾರ ವಿನು, ಆಹಾರ ನಿರೀಕ್ಷಕ ಚಿಕ್ಕಣ್ಣ, ಕೆಇಬಿ ಇಂಜನಿಯರ್, ಕೆಎಸ್‌ಆರ್‌ಟಿಸಿ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಿಡಿಪಿಓಗಳಾದ ಜಯಶೀಲಾ, ನಾಗೇಶ್, ಉದ್ಯೋಗ ವಿನಿಮಯ ಇಲಾಖೆಯ ಅಧಿಕಾರಿಗಳು ತಮ್ಮ ಇಲಾಖೆಯಗಳ ಪ್ರಗತಿ ಕುರಿತು ಸಭೆಗೆ ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

**ಪಂಚ ಗ್ಯಾರಂಟಿ ಯೋಜನೆಯು ಶೇ. 99 ಪ್ರಗತಿ**

# ಕೆಜಿಎಫ್: ಎಗ್ಗಿಲ್ಲದೆ ನಡೆಯುತ್ತಿದೆ ಪ್ಲಾಸ್ಟಿಕ್ ಉಪಯೋಗ

• ಉದಯವಾಹಿನಿ, ಕೆಜಿಎಫ್

ಆಹಾರ ಪದಾರ್ಥದಲ್ಲಿ ಪ್ಲಾಸ್ಟಿಕ್ ಬಳಕೆಯ ಬಗ್ಗೆ ನಿಷೇಧವಿದ್ದರೂ, ನಗರದ ಸಣ್ಣ ಹೋಟೆಲ್‌ಗಳು, ಬೀದಿ ಬದಿಯ ಅಂಗಡಿಗಳಲ್ಲಿ ವ್ಯಾಪಕವಾಗಿ ಪ್ಲಾಸ್ಟಿಕ್ ಬಳಸಲಾಗುತ್ತಿದೆ.

ಪ್ಲಾಸ್ಟಿಕ್ ಮುಕ್ತ ನಗರವನ್ನಾಗಿ ಮಾಡಬೇಕು ಎನ್ನುವ ನಗರಸಭೆಯ ಇರಾದೆ ಇದುವರೆವಿಗೂ ಕೈಗೂಡಿಲ್ಲ. ನಿಗದಿತ ಮೈಕ್ರಾನ್‌ಗಿಂತ ಕಡಿಮೆ ಇರುವ ಪ್ಲಾಸ್ಟಿಕ್ ಕೈಚೀಲಗಳ ಬಳಕೆ ನಗರದ ಬಹುತೇಕ ಎಲ್ಲಾ ಅಂಗಡಿಗಳಲ್ಲಿ ನಡೆಯುತ್ತಲೇ ಇದೆ. ಅದೇ ರೀತಿ ಪ್ಲಾಸ್ಟಿಕ್ ಹಾಳೆಗಳ ಮಾರಾಟ ಕೂಡ ಎಗ್ಗಿಲ್ಲದೆ ಸಾಗಿದೆ. ಇಂತಹ ಪ್ಲಾಸ್ಟಿಕ್ ಹಾಳೆಗಳನ್ನು ಇಡ್ಲಿ ತಯಾರು ಮಾಡಲು ಮತ್ತು ತಿಂಡಿ ಕೊಡುವ ಪ್ಲೇಟ್ ಗಳಿಗೆ ಉಪಯೋಗಿಸಲಾಗುತ್ತಿದೆ. ಇಡ್ಲಿ ತಯಾರು ಮಾಡಲು ದೊಡ್ಡ ಹೋಟೆಲ್‌ಗಳಲ್ಲಿ ಬಟ್ಟೆಯನ್ನು ಉಪಯೋಗಿಸಲಾಗುತ್ತದೆ. ಪ್ರತಿ ಬಾರಿ ಇಡ್ಲಿ ತೆಗೆದಾಗಲೂ ಬಟ್ಟೆ ತೊಳೆಯಲು ಅಧಿಕ ನೀರಿನ ಬಳಕೆಯಾಗುವುದರಿಂದ ಮತ್ತು ಕಾರ್ಮಿಕರ ಅಲಭ್ಯದಿಂದಾಗಿ ಈಚೆಗೆ ತವಾ ಮಾದರಿಯ ತಟೆಗಳನ್ನು ಇಡ್ಲಿ ಮಾಡಲು ಉಪಯೋಗಿಸಲಾಗುತ್ತಿದೆ.

ಇದಕ್ಕೆ ಬಟ್ಟೆಯ ಅವಶ್ಯಕತೆ ಇಲ್ಲ. ಆದರೆ ಗುಣಮಟ್ಟದ ತಟ್ಟೆಗಳು ಕೊಂಚ ದುಬಾರಿಯಾಗಿದ್ದರಿಂದ, ಸಣ್ಣ ಪುಟ್ಟ ಅಂಗಡಿಗಳವರು ಪ್ಲಾಸ್ಟಿಕ್ ಉಪಯೋಗ ಮಾಡುತ್ತಿದ್ದಾರೆ. ಪ್ಲಾಸ್ಟಿಕ್ ಹಾಳೆಗೆ ಹಿಟ್ಟು ಹಾಕಿ ಇಡ್ಲಿ ಬೇಯಿಸಿದರೆ, ಸುಲಭವಾಗಿ ಹಾಳೆಯಿಂದ ಬೇರ್ಪಡಿಸಬಹುದು ಇಡ್ಲಿ ಕೂಡ ತುಂಡಾಗುವುದಿಲ್ಲ. ಮೂರ್ನಾಲ್ಕು ಬಾರಿ ಉಪಯೋಗಿಸಿದ ನಂತರ ಪ್ಲಾಸ್ಟಿಕ್ ಹಾಳೆಗಳು ಕೊಂಚ ಮುದುಡುವುದರಿಂದ ಹೊಸ ಹಾಳೆಗಳನ್ನು ಹಾಕಲಾಗುತ್ತದೆ. ಅತ್ಯಂತ ಕಡಿಮೆ ವೆಚ್ಚದಲ್ಲಿ ಮತ್ತು ನೀರಿನ ಉಪಯೋಗವಿಲ್ಲದೆ ಇಡ್ಲಿ ತಯಾರು ಮಾಡಬಹುದು.

ಪ್ಲಾಸ್ಟಿಕ್ ಕೈ ಚೀಲಗಳ ಉಪಯೋಗ ಮತ್ತು ಕೃತಕ ಬಣ್ಣಗಳ ಬಗ್ಗೆ ಅಭಿಯಾನ ನಡೆಸಿದ್ದ ನಗರಸಭೆ ಸಿಬ್ಬಂದಿ ಇದುವರೆವಿಗೂ ಇಡ್ಲಿ ತಯಾರು ಮಾಡುವ ಅಂಗಡಿಗಳಿಗೆ ಮತ್ತು ತಿಂಡಿಗೆ ಪ್ಲಾಸ್ಟಿಕ್ ಹಾಳೆಗಳನ್ನು ಬಳಸುವ ಬಗ್ಗೆ ಕ್ರಮ ಕೈಗೊಳ್ಳದೆ ಇರುವುದು ಕಂಡು ಬಂದಿದೆ. ನ್ಯಾಯಾಲಯದ ಮತ್ತು ಸರ್ಕಾರದ ಆದೇಶದ ನಂತರವೂ ನಗರದಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ರಾಜಾ ರೋಷವಾಗಿ ಪ್ಲಾಸ್ಟಿಕ್ ಹಾಳೆಗಳನ್ನು ತಿಂಡಿಗೆ ಬಳಸಲಾಗುತ್ತಿದೆ.

ಬಿಸಿ ಬಿಸಿ ತಿಂಡಿಗಳನ್ನು ಪಾರ್ಸಲ್ ಮಾಡಲು ಕೂಡ ಪ್ಲಾಸ್ಟಿಕ್ ಹಾಳೆಗಳನ್ನು ಉಪಯೋಗಿಸಲಾಗುತ್ತಿದೆ.


ಉದಯವಾಹಿನಿ ಚಿತ್ರ

> ಪ್ಲಾಸ್ಟಿಕ್ ಬಳಸುವ ಅಂಗಡಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ನಗರಸಭೆ ಸಿಬ್ಬಂದಿಗೆ ಸೂಚನೆ ನೀಡಲಾಗಿದೆ. ಮೊದಲ ಹಂತದಲ್ಲಿ ಎಚ್ಚರಿಕೆ ನೀಡಿ ಅರಿವು ಮೂಡಿಸಲಾಗುವುದು. ಪುನಃ ಮುಂದುವರೆಸಿದರೆ ದಂಡ ವಿಧಿಸುವುದು, ಬೀಗ ಮುದ್ರೆ ಹಾಕುವುದು ಸೇರಿದಂತೆ ಕಠಿಣ ಕ್ರಮ ಕೈಗೊಳ್ಳಲಾಗುವುದು
> -ಪವನ್‌ಕುಮಾರ್, ನಗರಸಭೆ ಆಯುಕ್ತ

# ಕೆ.ಆರ್.ಪೇಟೆ: ತಾಲ್ಲೂಕು ಕಚೇರಿಯಲ್ಲಿ ದಲ್ಲಾಳಿಗಳ ದರ್ಬಾರು

• ಉದಯವಾಹಿನಿ, ಕೆ.ಆರ್.ಪೇಟೆ

ಕಂದಾಯ ಇಲಾಖೆಯ ನೌಕರರು ಸರ್ಕಾರದ ನಿಯಮಗಳನ್ನು ಪಾಲಿಸದೇ ಇರುವುದರಿಂದ ದಲ್ಲಾಳಿಗಳ ಮೂಲಕವೇ ರೈತರು ತಮ್ಮ ಕೆಲಸಗಳನ್ನು ಮಾಡಿಸಿಕೊಳ್ಳಬೇಕಾದ ಪರಿಸ್ಥಿತಿ ತಾಲ್ಲೂಕು ಕಚೇರಿಯಲ್ಲಿ ಉದ್ಭವಿಸಿದೆ. ಯಾವ ದಾಖಲೆಗಳನ್ನು ಸರಿಪಡಿಸಿಕೊಡಲು ಎಷ್ಟೆಷ್ಟು ಹಣ ನೀಡಬೇಕು ಎಂಬುದನ್ನು ತಿಳಿಸಿ ಪುಣ್ಯ ಕಟ್ಟಿಕೊಳ್ಳಿ ಎಂದು ರೈತ ಮುಖಂಡ ಮುದುಗೆರೆ ರಾಜೇಗೌಡ ತಹಶೀಲ್ದಾರ್ ಅವರಿಗೆ ಮನವಿ ಮಾಡಿದರು. ಪಟ್ಟಣದ ಮಿನಿ ವಿಧಾನಸೌಧದ ಸಭಾಂಗಣದಲ್ಲಿ ತಹಶೀಲ್ದಾರ್ ಎಸ್.ಯು. ಅಶೋಕ್ ನೇತೃತ್ವದಲ್ಲಿ ನಡೆದ ರೈತರ ಕುಂದು-ಕೊರತೆಗಳ ಪರಿಶೀಲನಾ ಸಭೆಯಲ್ಲಿ ಅವರು ಮೇಲಿನಂತೆ ಹೇಳಿದರು.

ತಾಲ್ಲೂಕು ಕಚೇರಿ ಸೇವಾ ಕೇಂದ್ರವಾಗುವ ಬದಲು ವ್ಯಾಪಾರಿ ಕೇಂದ್ರವಾಗಿ ಪರಿವರ್ತನೆಯಾಗಿದೆ.

ಪ್ರಜಾ ಪ್ರಭುತ್ವ ವ್ಯವಸ್ಥೆಯಲ್ಲಿ ರೈತರೇ ಪ್ರಭುಗಳು ಎಂದು ಭಾಷಣ ಮಾಡುತ್ತೀರಿ. ಆದರೆ ಪ್ರಭುಗಳ ಮೇಲೆ ನೌಕರರ ದಬ್ಬಾಳಿಕೆ ನಡೆಯುತ್ತಿದೆ. ಕುಂದು-ಕೊರತೆಗಳ ಪರಿಶೀಲನಾ ಸಭೆಯಲ್ಲಿ ರೈತರು ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗೆ ನೀತಿ ಪಾಠ ಹೇಳುವ ಪರಿಸ್ಥಿತಿ ನಿರ್ಮಾಣವಾಗಿರುವುದು ನಾಚಿಕೆಗೇಡು' ಎಂದು ಕಿಡಿಕಾರಿದರು.

ಪಟ್ಟಣದ ಎಪಿಎಂಸಿಗೆ ಸೇರಿದ 19 ಗುಂಟೆ ವ್ಯಕ್ತಿಯೊಬ್ಬರ ಹೆಸರಿಗೆ ಖಾತೆಯಾಗಿದ್ದು, ಖಾತೆ ಮಾಡಿದ ಸಿಬ್ಬಂದಿಯನ್ನು ಪತ್ತೆ ಹಚ್ಚಿ ಆತನ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಿ. ಆಸ್ತಿಯನ್ನು ಅಳತೆ ಮಾಡಿ ಆರ್‌ಟಿಸಿ ಇಂಡೀಕರಣ ಮಾಡಿ ಕೊಟ್ಟು ಸರ್ಕಾರಿ ಆಸ್ತಿಯನ್ನು ಸಂರಕ್ಷಿಸಿ' ಎಂದರು.

ತಾಲ್ಲೂಕಿನ ತೇಗನಹಳ್ಳಿ ಬಳಿ ವ್ಯಕ್ತಿಯೊಬ್ಬರು ಸರ್ಕಾರಿ ಕೆರೆಯನ್ನೇ ಸ್ವಾಧೀನಕ್ಕೆ ತೆಗೆದುಕೊಂಡಿದ್ದಾರೆ. ಈ ಬಗ್ಗೆ ಸಾಕಷ್ಟು ದೂರು ನೀಡಿದರೂ ಅಕ್ರಮ ತಡೆಗಟ್ಟಲು ಆಗಿಲ್ಲ. ತಾಲ್ಲೂಕಿನ ಕೂಡಲಕುಪ್ಪೆ ಗ್ರಾಮದ ಬಳಿ ಸರ್ಕಾರಿ ನಾಲೆಯನ್ನು ಕೆಲವರು ಮುಚ್ಚಿ ಹಾಕಿದ್ದು, ನೀರು ಹರಿದು ಹೋಗದಂತೆ ತಡೆಯೊಡ್ಡಿದ್ದಾರೆ. ಇವರ ವಿರುದ್ಧ ಕ್ರಮಕ್ಕೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಇದುವರೆಗೂ ಮುಚ್ಚಿರುವ ನಾಲೆಯನ್ನು ತೆರವುಗೊಳಿಸಿಲ್ಲ. ಹೇಮಾವತಿ ನಾಲೆಗಳ ಮೇಲೆ ರಕ್ಷಣಾ ತಡೆಗೋಡೆಗಳನ್ನು ನಿರ್ಮಿಸಬೇಕೆಂಬ ಮನವಿಗೂ ಸ್ಪಂದಿಸಿಲ್ಲ. ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಹಿಂಭಾಗದ ರೈತರ ಜಮೀನಿಗೆ ಹೋಗಲು ರಸ್ತೆ ನಿರ್ಮಾಣವಾಗಿಲ್ಲ' ಎಂದು ಗಮನ ಸೆಳೆದರು.


ಉದಯವಾಹಿನಿ ಚಿತ್ರ

# ಪಾಂಡವಪುರ ಪುರಸಭೆ ಅಸ್ತಿ ಅಕ್ರಮ ಪರಭಾರೆ: ಆರೋಪ

• ಉದಯವಾಹಿನಿ, ಪಾಂಡವಪುರ

ಇಲ್ಲಿನ ಪುರಸಭೆಯಲ್ಲಿ 2025-26ನೇ ಸಾಲಿ ಗೆ 22.90 ಲಕ್ಷದ ಉಳಿತಾಯ ಬಜೆಟ್ ಮಂಡಿಸಲಾಯಿತು. ಜ್ಯೋತಿಲಕ್ಷ್ಮೀ ಬಾಬು ಅಧ್ಯಕ್ಷತೆಯಲ್ಲಿ ನಡೆದ ಬಜೆಟ್ ಮಂಡನೆ ಸಭೆಯಲ್ಲಿ ಮುಖ್ಯಾಧಿಕಾರಿ ಸತೀಶ್ ಕುಮಾರ್ ಬಜೆಟ್ ಅನ್ನು ಓದಿದರು. ಪುರಸಭೆ ನಾಮ ನಿರ್ದೇಶನ ಸದಸ್ಯ ಎಚ್.ಎಲ್. ಮುರುಳೀಧರ್ ಮಾತನಾಡಿ, ಆದಾಯ ಸೋರಿಕೆ ತಡೆಗಟ್ಟಲು ಅಧಿಕಾರಿಗಳು ಕ್ರಮವಹಿಸಿದರೆ ನಿರೀಕ್ಷೆಗಿಂತ ಹೆಚ್ಚಿನ ಆದಾಯ ಪಡೆಯಬಹುದು.

ವಾಣಿಜ್ಯ ಮಳಿಗೆ ಮತ್ತು ಇತರೆ ಕಟ್ಟಡಗಳ ಬಾಡಿಗೆಯಿಂದ 9 ಲಕ್ಷ ಆದಾಯ ನಿರೀಕ್ಷಿಸಲಾಗಿದೆ. ಪುರಸಭೆಗೆ ಸೇರಿದ 82 ಮಳಿಗೆಗಳಿದ್ದು, ಈ ಮಳಿಗೆಗಳನ್ನು ಬಾಡಿಗೆ ಪಡೆದ ವ್ಯಕ್ತಿಗಳು ತಾವೇ ಅದರ ಮಾಲೀಕರಂತೆ ವರ್ತಿಸುತ್ತಿದ್ದಾರೆ. ಮಳಿಗೆಗಳನ್ನು ವಿಭಾಗಗೊಳಿಸಿ ಸಾವಿರಗಟ್ಟಲೇ ಬಾಡಿಗೆಗೆ ನೀಡಿ ಪುರಸಭೆಗೆ ನೂರರ ಲೆಕ್ಕದಲ್ಲಿ ಬಾಡಿಗೆ ಕೊಡುತ್ತಿದ್ದಾರೆ ಎಂದು ಹೇಳಿದರು.

ಅಧಿಕಾರಿಗಳು ಇದನ್ನು ತಡೆಯಲು ವಿಫಲ ರಾಗಿದ್ದು, ಈ ಬಜೆಟ್ ವಾಸ್ತವಕ್ಕೆ ತದ್ವಿರುದ್ದವಾಗಿದೆ. ಪಟ್ಟಣ ವ್ಯಾಪ್ತಿಯಲ್ಲಿ ದೊಡ್ಡ ದೊಡ್ಡ ಬಡಾವಣೆಗಳು ನಿರ್ಮಾಣವಾಗುತ್ತಿದ್ದು, ಆದರೆ ಅಭಿವೃದ್ಧಿ ಶುಲ್ಕ ಮಾತ್ರ ನಿರೀಕ್ಷೆಯಂತೆ ಇಲ್ಲ ಎಂದು ಆರೋಪಿಸಿದರು. ಸದಸ್ಯ ಪಾರ್ಥಸಾರಥಿ ಮಾತನಾಡಿ, ಪುರಸಭೆ ಮಳಿಗೆಗಳನ್ನು ತಮ್ಮ ಸ್ವಂತ ಆಸ್ತಿ ಎಂಬಂತೆ ಲಕ್ಷಾಂತರ ರೂಪಾಯಿಗಳಿಗೆ ಅಕ್ರಮವಾಗಿ ಪರಭಾರೆ ಮಾಡಲಾಗುತ್ತಿದೆ. ಮಳಿಗೆಗಳಿಗೆ ಕ್ರಮ ಸಂಖ್ಯೆ ನೀಡಬೇಕು.

ಪುರಸಭೆ ಆಸ್ತಿಗಳಲ್ಲಿ ಪ್ರಭಾವಿ ವ್ಯಕ್ತಿಗಳು ಐದು ಅಂತಸ್ತಿನ ಕಟ್ಟಡ ನಿರ್ಮಿಸಿದ್ದಾರೆ. ಅದಕ್ಕೆ ತಕ್ಕಂತೆ ಕಂದಾಯ ಪಾವತಿಸುತ್ತಿಲ್ಲ. ಆದರೆ ಬಡವರ ಬಳಿ ಒಂದು ರೂಪಾಯಿಯನ್ನು ಬಿಡದೆ ಕಂದಾಯ ವಸೂಲಿ ಮಾಡಲಾಗುತ್ತಿದೆ ಎಂದು ತರಾಟೆಗೆ ತೆಗೆದುಕೊಂಡರು.

ಹೊಸ ಕಟ್ಟಡ ಕಟ್ಟುವವರಿಗೆ ಪರವಾನಗಿ ನೀಡಲು ವಿಳಂಬ ಮಾಡುತ್ತಿರುವ ಕಾರಣ ಬಹುತೇಕರು ಪರವಾನಗಿಯನ್ನೇ ಪಡೆಯದೆ ಕಟಡ ನಿರ್ಮಿಸಿಕೊಳ್ಳುತ್ತಿದ್ದಾರೆ.

ಆನಂತರದಲ್ಲಿ ಎರಡರಷ್ಟು ಕಂದಾಯ ಸಂದಾಯ ಮಾಡಿ ಎನ್‌ಸಿ ಪಡೆದುಕೊಳ್ಳುತ್ತಾರೆ. ಇದರಿಂದ ಪುರಸಭೆಗೆ ಸಾವಿರಾರು ರೂಪಾಯಿ ಆದಾಯ ಖೋತಾ ಆಗುತ್ತಿದೆ. ತ್ವರಿತವಾಗಿ ಇ-ಖಾತೆ ಮಾಡಿ ಕೊಟ್ಟರೆ ಕಟ್ಟಡ ಪರವಾನಗಿಯನ್ನು ಪಡೆಯಲು ಅನುಕೂಲವಾಗುತ್ತದೆ. ಈ ಬಗ್ಗೆ ಅಧಿಕಾರಿಗಳು ಗಮನಹರಿಸಬೇಕು' ಎಂದು ಸದಸ್ಯ ಚಂದ್ರು ಸಲಹೆ ನೀಡಿದರು.

ಪುರಸಭೆ ಉಪಾಧ್ಯಕ್ಷ ಎಲ್.ಅಶೋಕ್, ಸದಸ್ಯರಾದ ಶಿವಕುಮಾರ್, ಆರ್.ಸೋಮಶೇಖರ್, ಎಂ.ಗಿರೀಶ್, ಉಮಾಶಂಕರ್, ಜಯಲಕ್ಷ್ಮಿ, ನಾಮನಿರ್ದೇಶನ ಸದಸ್ಯರಾದ ಮಹಮ್ಮದ್ ಹನೀಫ್, ಎಸ್. ರಮೇಶ್, ಎನ್. ಲಕ್ಷ್ಮೀಗೌಡ, ಎಂಜಿನಿಯರ್‌ಗಳಾದ ಚೌಡಪ್ಪ, ಯಶಸ್ವಿನಿ, ಪರಿಸರ ಎಂಜಿನಿಯರ್ ಶಫಿನಾಜ್ ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**22.90 ಲಕ್ಷ ಉಳಿತಾಯ**

**ಬಜೆಟ್ ಮುಖ್ಯಾಂಶ**

- 5.27 ಕೋಟಿ - ಆರಂಭಿಕ ಶಿಲ್ಕು
- 18.43 ಕೋಟಿ - ಆದಾಯ ನಿರೀಕ್ಷೆ
- 18.21 ಕೋಟಿ - ಖರ್ಚು ಅಂದಾಜು

# ಅನ್ನ ನೀಡದ ಇಂದಿರಾ ಕ್ಯಾಂಟೀನ್

## ಹೊಸದಾಗಿ 9ಕ್ಕೆ ಭೂಮಿಪೂಜೆ ನಡೆದು ವರ್ಷವೇ ಸಮೀಪಸುತ್ತಿದೆ

• ಉದಯವಾಹಿನಿ, ಮೈಸೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರಾದ ಜಿಲ್ಲೆಯಲ್ಲಿ ಒಂಬತ್ತು ಇಂದಿರಾ ಕ್ಯಾಂಟೀನ್‌ಗಳು 1 ವರ್ಷ ಸಮೀಪಿಸುತ್ತಿದ್ದರೂ ಸೇವೆ ಆರಂಭಿಸಿಲ್ಲ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರು ಹೋದ ವರ್ಷ ಮಾರ್ಚ್ 11ರಂದು ಭೂಮಿ ಪೂಜೆ ನೆರವೇರಿಸಿದ್ದರು. ಅತ್ಯಂತ ಕಡಿಮೆ ದರಕ್ಕೆ ಉಪಾಹಾರ ಹಾಗೂ ಊಟವನ್ನು ನೀಡಲಾಗುವ ಈ ಕ್ಯಾಂಟೀನ್‌ಗಳನ್ನು ಹೊಸದಾಗಿ ನಗರವೂ ಸೇರಿದಂತೆ ಜಿಲ್ಲೆಯ ವಿವಿದೆಡೆ ಸ್ಥಾಪಿಸಬೇಕೆಂಬ ಬೇಡಿಕೆಗೆ ಸ್ಪಂದಿಸಿ ಸರ್ಕಾರದಿಂದ ಅನುದಾನ ಒದಗಿ ಸಲಾಗಿದೆ. ನಿರೀಕ್ಷೆಯಂತೆಯೇ ಎಲ್ಲಾವೂ ನಡೆದಿದ್ದರೆ, ಈ ವೇಳೆಗಾಗಲೇ ಅವು ಜನರಿಗೆ ಅನ್ನ ನೀಡುವ ಕೆಲಸವನ್ನು ಮಾಡಬೇಕಾಗಿತ್ತು.

ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ 35 ಲಕ್ಷ ವೆಚ್ಚದಲ್ಲಿ ಎರಡು ಕಡೆ ಕ್ಯಾಂಟೀನ್ ನಿರ್ಮಿಸಲಾಗುತ್ತಿದೆ. ಸಿದ್ದಾರ್ಥನಗರದಲ್ಲಿರುವ ಹೊಸ ಜಿಲ್ಲಾಧಿಕಾರಿ ಕಚೇರಿಯೂ ಒಳಗೊಂಡ ಜಿಲ್ಲಾಮಟ್ಟದ ಕಚೇರಿಗಳ ಸಂಕೀರ್ಣದ ಪಕ್ಕದಲ್ಲಿ ಹಾಗೂ ಪಡುವಾರಹಳ್ಳಿಯ ಮಹರ್ಷಿ ವಾಲ್ಮೀಕಿ ರಸ್ತೆಯ ಮಹಾರಾಣಿ ವಾಣಿಜ್ಯ ಕಾಲೇಜು ಆವರಣದಲ್ಲಿ ಸ್ಥಾಪನೆಗೆ ಕಾಮಗಾರಿಗೆ ಚಾಲನೆ ನೀಡಲಾಗಿತ್ತು.

**35 ಲಕ್ಷ ವೆಚ್ಚದಲ್ಲಿ ಎರಡು ಕಡೆ ಕ್ಯಾಂಟೀನ್**


ಉದಯವಾಹಿನಿ ಚಿತ್ರ

**ಇತರ ಕಡೆ ಎಲ್ಲೆಲ್ಲಿ?:** ಹೂಟಗಳ್ಳಿ ನಗರಸಭೆ ವ್ಯಾಪ್ತಿ, ಪಿರಿಯಾಪಟ್ಟಣ, ಬನ್ನೂರು ಪುರಸಭೆ, ಸರಗೂರು, ಬೋಗಾದಿ, ಕಡಕೊಳ, ರಮ್ಮನಹಳ್ಳಿ ಪಟ್ಟಣ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನಿರ್ಮಾಣಕ್ಕೆ 65 ಲಕ್ಷ ಒದಗಿಸಲಾಗಿತ್ತು. ಇವು ಕೆಲವೇ ತಿಂಗಳಲ್ಲಿ ಕಾರ್ಯಾರಂಭ ಮಾಡಲಿವೆ ಎಂದು ಹೇಳಲಾಗಿತ್ತು. ಡಿಸಿ ಕಚೇರಿಯೂ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳಲ್ಲಿನ ಕೆಲಸಕ್ಕೆ ಬರುವ ಸಾರ್ವಜನಿಕರಿಗೆ ಅನುಕೂಲ ಆಗಲೆಂದು ಅಲ್ಲಿ ಕ್ಯಾಂಟೀನ್ ಆರಂಭಕ್ಕೆ ನಿರ್ಧರಿಸಲಾಗಿದೆ. ಅದರಂತೆಯೇ ಪ್ರಮುಖವಾಗಿ ಮಹಾರಾಣಿ ಕಾಲೇಜಿನ ವಿದ್ಯಾರ್ಥಿನಿಯರಿಗೆ ಅನುಕೂಲಕ್ಕೆಂದು ಪಡುವಾರಹಳ್ಳಿಯಲ್ಲಿ ಕಾಲೇಜಿನ ಸಮೀಪವೇ ಸ್ಥಾಪನೆಗೆ ತೀರ್ಮಾನಿಸಲಾಗಿದೆ.

ಬಡವರು, ಶ್ರಮಿಕರು, ಬೀದಿ ಬದಿ ವ್ಯಾಪಾರಿಗಳು, ದುಡಿಯುವ ವರ್ಗದವರು, ಪೌರಕಾರ್ಮಿಕರು, ವಲಸೆ ಕಾರ್ಮಿಕರು, ವಿದ್ಯಾರ್ಥಿಗಳು ಮೊದಲಾದವರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಇಂದಿರಾ ಕ್ಯಾಂಟಿನ್‌ಗಳು ಸಹಕಾರಿಯಾಗಿವೆ. ಈ ಕ್ಯಾಂಟೀನ್‌ಗಳಲ್ಲಿ ಹೊಸದಾಗಿ ಮುದ್ದೆ ಹಾಗೂ ಸೊಪ್ಪಿನ ಸಾರಿನ ಊಟ ಸೇರ್ಪಡೆ ಮಾಡಲು ಕ್ರಮ ವಹಿಸಲಾಗಿದೆ ಎಂದು ಸಚಿವರು ತಿಳಿಸಿದ್ದರು. ಈ ಕ್ಯಾಂಟೀನ್‌ಗಳಲ್ಲಿ ಬೆಳಿಗ್ಗೆ ಉಪಾಹಾರ, ಮಧ್ಯಾಹ್ನ, ರಾತ್ರಿ ಊಟ ದೊರೆಯುತ್ತದೆ. ಉಪಾಹಾರಕ್ಕೆ 5, ಮಧ್ಯಾಹ್ನ ಹಾಗೂ ರಾತ್ರಿ ಊಟಕ್ಕೆ ತಲಾ 10 ನಿಗದಿಪಡಿಸಲಾಗಿದೆ. ಬೆಳಿಗ್ಗೆ 7.30ರಿಂದ 10ರವರೆಗೆ, ಮಧ್ಯಾಹ್ನ 1ರಿಂದ 3.30 ಹಾಗೂ ರಾತ್ರಿ 7.30ರಿಂದ 9.30ರವರೆಗೆ ಇಂದಿರಾ ಕ್ಯಾಂಟೀನ್ ತೆರೆದಿರುತ್ತದೆ. ಸದ್ಯ ಜಿಲ್ಲೆಯಲ್ಲಿ ಒಟ್ಟು 16 ಕ್ಯಾಂಟೀನ್‌ಗಳು ಕಾರ್ಯನಿರ್ವಹಿಸುತ್ತಿವೆ. ನಗರದ ಕ್ಯಾಂಟೀನ್‌ಗಳಿಗೆ ಆಹಾರ ಪೂರೈಸುವ ಎರಡು ಮಾಸ್ಟರ್ ಕಿಚನ್‌ಗಳಿವೆ. ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ದೊರೆಯುತ್ತಿರುವ ಕಾರಣ ಹೊಸದಾಗಿ ಸ್ಥಾಪನೆಗೆ ಕ್ರಮವಹಿಸಲಾಗಿದೆ ಎನ್ನುತ್ತಾರೆ ಅಧಿಕಾರಿಗಳು.



> ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಇಂದಿರಾ ಕ್ಯಾಂಟಿನ್ ಆರಂಭವಾದರೆ ವಿವಿಧ ಸರ್ಕಾರಿ ಕಚೇರಿಗಳಿಗೆಂದು ಗ್ರಾಮೀಣ ಪ್ರದೇಶ ಸೇರಿದಂತೆ ವಿವಿಧೆಡೆಯಿಂದ ಬರುವವರಿಗೆ ಅನುಕೂಲ ಆಗುತ್ತದೆ.
> -ತನ್ವೀರ್ ಸೇಠ್, ಶಾಸಕ

> ಹೊಸ 9 ಇಂದಿರಾ ಕ್ಯಾಂಟೀನ್‌ಗಳು ವಿವಿಧ ಹಂತದಲ್ಲಿವೆ. ಕೆಲವು ಕಟ್ಟಡ ಪೂರ್ಣಗೊಂಡಿವೆ. ವಿದ್ಯುತ್ ನೀರಿನ ಸಂಪರ್ಕ ಕಲ್ಪಿಸುವುದು ಆಗಬೇಕಿದೆ. ಹಂತ ಹಂತವಾಗಿ ಉದ್ಘಾಟನೆಗೆ ಸರ್ಕಾರದ ಮಟ್ಟದಲ್ಲಿ ಕ್ರಮವಾಗಲಿದೆ
> -ಪ್ರಿಯದರ್ಶಿನಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ

**ಶೌಚಾಲಯವೂ ಬಳಕೆಗೆ ದೊರೆತಿಲ್ಲ**

ಸಿದ್ದಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿ ಸಮೀಪದಲ್ಲಿ ಮಹಾನಗರ ಪಾಲಿಕೆಯಿಂದ ನಿರ್ಮಿಸಿರುವ ಸಾರ್ವಜನಿಕ ಶೌಚಾಲಯವನ್ನು ಉದ್ಘಾಟಿಸುವ ಕೆಲಸ ನಡೆದಿಲ್ಲ. ಇದರಿಂದಾಗಿ ಜಿಲ್ಲಾಧಿಕಾರಿ ಕಚೇರಿಗೆ ಕೆಲಸಗಳಿಗೆ ಪ್ರತಿಭಟನೆ ನಡೆಸಲು ಬರುವವರು ಮೊದಲಾದವರು ಶೌಚಕ್ಕಾಗಿ ಪರದಾಡುವ ಸ್ಥಿತಿ ಇದೆ.

# ಮಿನಿ ನ್ಯೂಸ್

## ಮೋದಿಜಿಯವರ ಆಶಯ ಯೋಜನೆ ಜನ ಔಷಧಿ ಕೇಂದ್ರ: ಶ್ರೀಕಾಂತ್

• ಉದಯವಾಹಿನಿ, ಹನೂರು

ರಾಷ್ಟ್ರ ಕಂಡ ಧೀಮಂತ ಪ್ರಧಾನಿ ನರೇಂದ್ರ ಮೋದಿಜೀಯವರ ಆಶಯವಾದ ಜನ ಔಷಧಿ ಕೇಂದ್ರ ಯೋಜನೆಯು ಜನರಿಗೆ ಅತಿ ಕಡಿಮೆ ಬೆಲೆಯಲ್ಲಿ ಗುಣಮಟ್ಟದ ಔಷಧಿಗಳನ್ನು ಪೂರೈಸುವ ಅತ್ಯಂತ ಮಹತ್ವದ ಯೋಜನೆಯಾಗಿದೆ ಎಂದು ಜನ ಔಷಧಿ ಕೇಂದ್ರ ವ್ಯವಸ್ಥಾಪಕರು ಶ್ರೀಕಾಂತ್ ಅವರು ತಿಳಿಸಿದರು. ಹನೂರು ಪಟ್ಟಣದಲ್ಲಿ ಜನ ಔಷಧಿ ಕೇಂದ್ರದಲ್ಲಿ ಮಾರ್ಚ್ 1 ರಿಂದ 7ರವರೆಗೆ ಆಚರಿಸುವ ಜನ ಔಷಧಿ ದಿವಸ್ ಸಪ್ತಾಹದ ಕಾರ್ಯಕ್ರಮವನ್ನು ಆಚರಣೆ ಮಾಡಿ ನಂತರ ಮಾತನಾಡಿದ ಅವರು ಬಲಿಷ್ಠ ರಾಷ್ಟ್ರ ನಿರ್ಮಾಣ ಮಾಡಲು, ಸ್ವಾಸ್ಥ್ಯ ಸಮಾಜಕ್ಕೆ ಆರೋಗ್ಯವೇ ಜೀವನದ ಪ್ರಮುಖ ಮೂಲಾಧಾರವಾಗಿದೆ.

2008ರಲ್ಲಿ ಪ್ರಾರಂಭವಾದ ಈ ಯೋಜನೆಯು 2016ರಲ್ಲಿ ಪ್ರಧಾನ ಮಂತ್ರಿ ಭಾರತೀಯ ಜನ ಔಷಧಿ ಪರಿಯೋಜನ (ಪಿಎಂಬಿಜೆಪಿ)ಎಂದು ಮರುನಾಮಕರಣಗೊಂಡು ತನ್ನ ಸೇವಾ ವ್ಯಾಪ್ತಿಯನ್ನು ಮತ್ತಷ್ಟು ವಿಸ್ತರಿಸಿತು ಸತತವಾಗಿ 16 ವರ್ಷಗಳಿಂದ ಉತ್ತಮ ಗುಣಮಟ್ಟದ ಜನರಿಕ್ ಔಷಧಿಗಳನ್ನು ಬಡವರಿಗೆ ಒದಗಿಸುತ್ತಿರುವ ಜನ ಔಷಧಿ ಕೇಂದ್ರಗಳ ಈ ಕಾರ್ಯವು ನಿಜಕ್ಕೂ ಶ್ಲಾಘನೀಯ ಎಂದು ತಿಳಿಸಿದರು. ಇದೆ ಸಂದರ್ಭದಲ್ಲಿ ಜಯಕುಮಾರ್, ಪ್ರಿಂಟಿಂಗ್ ಪ್ರೆಸ್ ನಾಗೇಂದ್ರ, ಸತೀಶ, ಕುಮಾರ್, ಪ್ರಸನ್ನ ಗುಪ್ತ, ಮಹೇಶ್ ಇದ್ದರು.

## ಮಾಗಡಿ: ಬೆಂಬಲ ಬೆಲೆಯಲ್ಲಿ ರಾಗಿ ಖರೀದಿಸಲು ಆಗ್ರಹ

• ಉದಯವಾಹಿನಿ, ಮಾಗಡಿ

ಸರ್ಕಾರ ಬೆಂಬಲ ಬೆಲೆಯಲ್ಲಿ ರಾಗಿ ಖರೀದಿ ಮಾಡಲು ರೈತರಿಂದ ನೋಂದಣಿ ಮಾಡಿಸಿಕೊಂಡಿದೆ. ಈಗ ರಾಗಿ ಖರೀದಿ ಮಾಡಲು ವಿಳಂಬ ಮಾಡಲಾಗುತ್ತಿದೆ ಎಂದು ಟಿಎಪಿಸಿಎಂಎಸ್ ಅಧ್ಯಕ್ಷ ಶಿವಪ್ರಸಾದ್ ಹೇಳಿದರು. ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಮಾ.1ರಿಂದ ರಾಗಿ ಖರೀದಿ ಮಾಡಲಾಗುತ್ತದೆ ಎಂದು ರೈತರಿಗೆ ತಿಳಿಸಲಾಗಿತ್ತು. ಈಗ ಮಾರ್ಚ್ ತಿಂಗಳು ಆರಂಭವಾದರೂ ಕೂಡ ರಾಗಿ ಖರೀದಿ ಮಾಡಲು ಯಾವುದೇ ರೀತಿ ಸರ್ಕಾರ ಮುಂದಾಗುತ್ತಿಲ್ಲ. ಇದರಿಂದ ರೈತರಿಗೆ ಸಾಕಷ್ಟು ಸಮಸ್ಯೆ ಆಗುತ್ತಿದ್ದು ರೈತರಿಗೆ ನೀಡಿರುವ ದಿನಾಂಕ ಕೂಡ ಬದಲಾವಣೆ ಆಗುತ್ತಿದೆ. ವಿಳಂಬವಾಗಿ ರಾಗಿ ಖರೀದಿ ಮಾಡಲು ಆರಂಭ ಮಾಡಿದರೆ ರೈತರೆಲ್ಲರೂ ಒಂದೆಡೆ ಸೇರುವುದರಿಂದ ಗೊಂದಲ ಉಂಟಾಗಲಿದೆ. ಮಳೆಗಾಲ ಆರಂಭವಾದರೆ ಕೃಷಿ ಚಟುವಟಿಕೆಗಳಲ್ಲಿ ರೈತರು ತೊಡಗಿಸಿಕೊಳ್ಳಬೇಕು. ಈ ರೀತಿ ವಿಳಂಬನೆ ಮಾಡುವುದು ಸರಿಯಲ್ಲ. ರೈತರಿಂದ ಕೂಡಲೇ ರಾಗಿ ಖರೀದಿ ಮಾಡಲು ಸರ್ಕಾರ ಮುಂದಾಗಬೇಕು ಎಂದು ಮನವಿ ಮಾಡಿದರು.

## 23 ಲಕ್ಷ ಮೌಲ್ಯದ ಗಾಂಜಾ ವಶ ಆರೋಪಿಗಳ ಬಂಧನ

• ಉದಯವಾಹಿನಿ, ಮುಳಬಾಗಿಲು

ಮಾರಾಟ ಮಾಡಲು ಅಕ್ರಮವಾಗಿ ಆಟೋದಲ್ಲಿ ಸಾಗಿಸುತ್ತಿದ್ದ 23 ಲಕ್ಷ ಮೌಲ್ಯದ ಗಾಂಜಾ ವಶಪಡಿಸಿಕೊಂಡಿರುವ ಮುಳಬಾಗಿಲು ಗ್ರಾಮಾಂತರ ಪೊಲೀಸರು ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ. ಮಾಲೂರು ತಾಲ್ಲೂಕಿನ ವೆಂಕಟರಾಜನಹಳ್ಳಿಯ ಕೃಷ್ಣಮೂರ್ತಿ (44) ಹಾಗೂ ಕಡದನಹಳ್ಳಿ ಗ್ರಾಮದ ಮನೋಹರ( 26) ಬಂಧಿತ ಆರೋಪಿಗಳು. ಬಂಧಿತರು ನೆರೆಯ ಆಂಧ್ರಪ್ರದೇಶದದಿಂದ ಆಟೊದಲ್ಲಿ ಸುಮಾರು 23 ಲಕ್ಷ ಮೌಲ್ಯದ 23.85 ಕೆಜಿ ತೂಕದ ಗಾಂಜಾ ಸಾಗಿಸುತ್ತಿದ್ದಾರೆ ಎನ್ನುವ ಖಚಿತ ಮಾಹಿತಿಯ ಮೆರೆಗೆ ದಾಳಿ ಮಾಡಲಾಗಿದೆ.

ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ, ಅಲ್ಲಾಲಸಂದ್ರದ ಬಳಿ ಹೋಗುತ್ತಿದ್ದಾಗ ಗ್ರಾಮಾಂತರ ಸರ್ಕಲ್ ಇನ್ಸ್‌ಪೆಕ್ಟರ್ ಕೆ.ಜಿ.ಸತೀಶ್, ಸಬ್ ಇನ್ಸ್‌ಪೆಕ್ಟರ್ ವಿಠಲ್ ವೈ ತಳವಾರ್, ಎಲ್.ಮಮತಾ ನೇತೃತ್ವದ ಪೊಲೀಸರು ದಾಳಿ ಮಾಡಿ, ಗಾಂಜಾ ಸಮೇತ ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್.ಬಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ರವಿಶಂಕರ್ ಮತ್ತು ಜಗದೀಶ್, ಡಿವೈಎಸ್‌ಪಿ ಡಿ.ಸಿ.ನಂದಕುಮಾರ್ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿದೆ. ಮುಳಬಾಗಿಲು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ಬೆಳಕವಾಡಿ: ಅಕ್ರಮ ಮದ್ಯ ವಶ

• ಉದಯವಾಹಿನಿ, ಬೆಳಕವಾಡಿ

ಸಮೀಪದ ನೆಟ್ಕಲ್ ಗ್ರಾಮದ ಹೊರವಲಯದ ಅರಳಿಕಟ್ಟೆ ರಸ್ತೆಯ ಕೆರೆ ಬಳಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದ ಮಹೇಶ್ ಎಂಬಾತನನ್ನು ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಪಿಎಸ್ಐ ಬಿ.ವಿ. ಪ್ರಕಾಶ್ ತಂಡ ದಾಳಿ ಮಾಡಿ ಆರೋಪಿಯನ್ನು ಬಂಧಿಸಿ 47 ಮದ್ಯ ತುಂಬಿದ 90 ಎಂ.ಎಲ್. ಹೈವಾರ್ಡ್ಸ್ ಚಿಯರ್ ವಿಸ್ಕಿ ಹಾಗೂ ಬಿಳಿ ಬಣ್ಣದ ಪ್ಲಾಸ್ಟಿಕ್ ಬ್ಯಾಗ್ ವಶಪಡಿಸಿಕೊಂಡಿದ್ದಾರೆ. ಬೆಳಕವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗೋಣಿಕೊಪ್ಪಲು: ಪರಿಶಿಷ್ಟರ ಮೀಸಲು ಹಣ ಮರುಬಳಕೆಗೆ ಖಂಡನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗೋಣಿಕೊಪ್ಪಲು

ಪರಿಶಿಷ್ಟರ ಅಭಿವೃದ್ಧಿಗೆ ಮೀಸಲಿಟ್ಟಿದ್ದ ಅನುದಾನವನ್ನು ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಳ್ಳುತ್ತಿರುವುದು ಖಂಡನೀಯ ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಎಚ್.ಆರ್.ಪರಶುರಾಮ್ ಖಂಡಿಸಿದ್ದಾರೆ.

ದಲಿತ ಸಂಘರ್ಷ ಸಮಿತಿಯು ನಡೆಸಿದ ಚಳವಳಿಯಿಂದಾಗಿ 2013-14ರಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಎಸ್‌ಸಿ-ಎಸ್‌ಟಿ ಯೋಜನೆಯಲ್ಲಿ ಅನುದಾನ ಮೀಸಲಿಡಲಾಗಿತ್ತು. ಆದರೆ ಇದೇ ಸರ್ಕಾರ ಈ ಅನುದಾನವನ್ನು ಅನ್ಯ ಯೋಜನೆಗಳಿಗೆ ಬಳಸಿಕೊಂಡು ಪರಿಶಿಷ್ಟ ಜಾತಿ ಪಂಗಡಕ್ಕೆ ಅನ್ಯಾಯ ಮಾಡಿದಂತಾಗಿದೆ ಎಂದು ಆರೋಪಿಸಿದರು. ಸುಮಾರು 25000 ಕೋಟಿಯನ್ನು ಗ್ಯಾರಂಟಿಗಳಿಗೂ, 15000 ಕೋಟಿಯನ್ನು ಅನ್ಯ ಉದ್ದೇಶಕ್ಕೂ ಬಳಸಿರುವುದು ಕಾಯ್ದೆಯನ್ನು ಸ್ಪಷ್ಟವಾಗಿ ಉಲ್ಲಂಘಿಸಿದಂತೆ ಆಗಿದೆ. ಮುಖ್ಯಮಂತ್ರಿ, ಸಮಾಜ ಕಲ್ಯಾಣ ಸಚಿವರು ಸೇರಿದಂತೆ ಇತರ ಮಂತ್ರಿಗಳೂ ಈ ಕ್ರಮವನ್ನು ಸಮರ್ಥಿಸಿಕೊಳ್ಳುತ್ತಿರುವುದು ದಲಿತ ಸಮುದಾಯಗಳಿಗೆ ಬಗೆದ ಮಹಾದ್ರೋಹವಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ಆಕ್ಷೇಪಿಸಿದ್ದಾರೆ.

ಅಂತರಾಳದಿಂದ... EDITORIAL

# ಸರಕಾರಿ ಆಸ್ಪತ್ರೆಗಳ ದುರವಸ್ಥೆ

ಸರಕಾರಿ ಆಸ್ಪತ್ರೆಗಳ ದುರವಸ್ಥೆಪ್ರಜಾಪ್ರಭುತ್ವದಲ್ಲಿ ಜನ ಸಾಮಾನ್ಯರಿಗೆ ಗುಣಮಟ್ಟದ ಆರೋಗ್ಯ ಸೇವೆಯನ್ನು ಒದಗಿಸಬೇಕಾದುದು ಸರಕಾರದ ಮುಖ್ಯ ಕರ್ತವ್ಯವಾಗಿದೆ. ಸರಕಾರಿ ಆಸ್ಪತ್ರೆಗಳಲ್ಲಿ ಗುಣ ಮಟ್ಟದ ಔಷಧಿಗಳು, ನುರಿತ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ, ಸುಸಜ್ಜಿತ ಪ್ರಯೋಗಾಲಯಗಳು ಇವೆಲ್ಲ ಲಭ್ಯವಿರಬೇಕು. ಆದರೆ ವಿಷಾದದ ಸಂಗತಿಯೆಂದರೆ ಹಿಂದಿನ ಬಿಜೆಪಿ ಸರಕಾರವಿದ್ದಾಗ ಹದಗೆಟ್ಟಿದ್ದ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಇನ್ನೂ ಸುಧಾರಿಸಲು ಸಾಧ್ಯವಾಗಿಲ್ಲ. ಈ ಸರಕಾರಿ ಆಸ್ಪತ್ರೆಗಳಿಗೆ ಕಡಿಮೆ ಗುಣಮಟ್ಟದ ನಕಲಿ ಔಷಧಿಗಳು ಹೇಗೆ ಪೂರೈಕೆಯಾಗುತ್ತವೆ ಎಂಬ ಸಂಗತಿ ಈಗ ಬಯಲಿಗೆ ಬಂದಿದೆ. ನಗರ ಪ್ರದೇಶಗಳಲ್ಲಿ ಜನ ಸಾಮಾನ್ಯರು ತಾವು ದುಡಿದದ್ದನ್ನೆಲ್ಲ ಖಾಸಗಿ ಆಸ್ಪತ್ರೆಗಳಿಗೆ ವ್ಯಯಿಸ ಬೇಕಾಗಿ ಬಂದಿದೆ. ಬಡಜನರಿಗೆ ಸರಕಾರಿ ಆಸ್ಪತ್ರೆಗಳು ಜೀವ ಕಾಪಾಡುವ ಸಂಜೀವಿನಿಯಾಗಿವೆ. ಆದ್ದರಿಂದ ಸರಕಾರಿ ಆಸ್ಪತ್ರೆಗಳ ಸುಧಾರಣೆಗೆ ಮೊದಲ ಆದ್ಯತೆ ನೀಡಬೇಕಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನವರಿಗೆ ಇವೆಲ್ಲ ಗೊತ್ತಿಲ್ಲವೆಂದಲ್ಲ ಅವರು ಪದೇ ಪದೇ ಹಿರಿಯ ಅಧಿಕಾರಿಗಳ ಸಭೆ ಕರೆದು ಎಚ್ಚರಿಕೆ ನೀಡುತ್ತಲೇ ಇದ್ದಾರೆ. ಆದರೂ ಪರಿಸ್ಥಿತಿ ಸುಧಾರಿಸಿಲ್ಲ ಎಂಬುದು ಕಟು ಸತ್ಯ.ರಾಜ್ಯದಲ್ಲಿ ಸಾಕಷ್ಟು ಸಂಖ್ಯೆ ಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾ ಯ ಆರೋಗ್ಯ ಕೇಂದ್ರಗಳು ಇವೆ. ಆಧುನಿಕ ಸರಕಾರಿ ಆಸ್ಪತ್ರೆಗಳು ಹಾಗೂ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆ ಗಳಿಗೂ ಕೊರತೆಯಿಲ್ಲ. ಇಷ್ಟೆಲ್ಲಾ ಇದ್ದರೂ ಇವುಗಳಲ್ಲಿ ಮೂಲ ಸೌಕರ್ಯಗಳ ಕೊರತೆಯಿಂದಾಗಿ ಜನರಿಗೆ ಸೂಕ್ತವಾದ ಸೇವೆ ಲಭ್ಯವಾಗುತ್ತಿಲ್ಲ. ಇದನ್ನು ಗಮನಿಸಿದ ಮಹಾಲೇಖಪಾಲರು(ಸಿಎಜಿ), ವಿಧಾನ ಮಂಡಲಕ್ಕೆ ಸಲ್ಲಿಸಿದ ಲೆಕ್ಕ ಪರಿಶೋಧನಾ ವರದಿಯಲ್ಲಿ ರಾಜ್ಯದ ವಿವಿಧೆಡೆ ರೂ. 228.37 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಆರು ಆಸ್ಪತ್ರೆಗಳನ್ನು ಯಾಕೆ ಬಳಕೆ ಮಾಡುತ್ತಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಆದರೆ ಮುಂದಿನ ಮುಖ್ಯಮಂತ್ರಿ ಯಾರಾಗಬೇಕೆಂಬ ರಾಜಕಾರಣದಲ್ಲಿ ಆಸ್ಪತ್ರೆಗಳತ್ತ ಯಾರೂ ಗಮನ ನೀಡುತ್ತಿಲ್ಲ. ನಗರ ಪ್ರದೇಶ ಮಾತ್ರವಲ್ಲ ಗ್ರಾಮೀಣ ಪ್ರದೇಶಗಳಲ್ಲೂ ಜನಸಾಮಾನ್ಯರು ತಮಗೆ ಬರುವ ಕಾಯಿಲೆ-ಕಸಾಲೆಗಳಿಗಾಗಿ ಸರಕಾರಿ ಆಸ್ಪತ್ರೆಗಳನ್ನೇ ಅವಲಂಬಿಸಿದ್ದಾರೆ. ಆದರೆ ಚಿಕಿತ್ಸೆಗೆಂದು ಬರುವವರಿಗೆ ಸೂಕ್ತ ಚಿಕಿತ್ಸೆ ನೀಡಿ ಆರೈಕೆ ಮಾಡುವ ಸ್ಥಿತಿಯಲ್ಲಿ ಸರಕಾರಿ ಆಸ್ಪತ್ರೆಗಳಿಲ್ಲ. ಒಂದೆಡೆ ಆಧುನಿಕ ಯಂತ್ರೋಪಕರಣಗಳಿದ್ದರೂ, ಅಲ್ಲಿ ಅಗತ್ಯ ವೈದ್ಯಕೀಯ ಸಿಬ್ಬಂದಿ ಇಲ್ಲ. ಇನ್ನೊಂದು ಕಡೆ ಸಾಕಷ್ಟು ವೈದ್ಯಕೀಯ ಸಿಬ್ಬಂದಿ ಇದ್ದರೂ ಅಲ್ಲಿ ಅಗತ್ಯದ ಯಂತ್ರೋಪಕರಣಗಳಿಲ್ಲ. ರೋಗವನ್ನು ಪತ್ತೆ ಮಾಡುವ ಸಲಕರಣೆಗಳಿಲ್ಲ. ಶಸ್ತ್ರ ಚಿಕಿತ್ಸೆಗೆ ಅಗತ್ಯವಿರುವ ತೀವ್ರ ನಿಗಾ ಘಟಕಗಳಿಲ್ಲ. ಔಷಧಿ ಸಂಗ್ರಹವೂ ಇರುವುದಿಲ್ಲ.ಅವ್ಯವಸ್ಥೆಗೆ ಹಲವಾರು ಉದಾಹರಣೆಗಳಿವೆ. ಬೆಂಗಳೂರಿನ ಗೋವಿಂದ ರಾಜ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೊಳಪಟ್ಟಿರುವ ಅಗ್ರಹಾರ ದಾಸರ ಹಳ್ಳಿಯಲ್ಲಿ 106 ಕೋಟಿ ರೂ. ಖರ್ಚು ಮಾಡಿ ನಿರ್ಮಿಸಿದ, 2023ರ ಮಾರ್ಚ್ ತಿಂಗಳಿನಲ್ಲಿ ಉದ್ಘಾಟಿಸಲಾಗಿದ್ದ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆಗೆ ಅಗತ್ಯವಿರುವಷ್ಟು ವೈದ್ಯಕೀಯ ಹಾಗೂ ಇತರ ಸಿಬ್ಬಂದಿಯನ್ನು ಒದಗಿಸದಿರುವುದರಿಂದ ಪೂರ್ಣ ಪ್ರಮಾಣದಲ್ಲಿ ಅದನ್ನು ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಬಿಬಿಎಂಪಿ) ಆರೋಗ್ಯ ಇಲಾಖೆಯ ನಿಯಂತ್ರಣದಲ್ಲಿರುವ ಸದರಿ ಆಸ್ಪತ್ರೆಯ ನಾಲ್ಕು ಅಂತಸ್ತಿನ ಬೃಹತ್ ಕಟ್ಟಡದಲ್ಲಿ ಆಧುನಿಕ ಯಂತ್ರೋಪಕರಣಗಳು , ಇತರ ಸೌಕರ್ಯಗಳು ಇದ್ದರೂ ತುರ್ತು ಚಿಕಿತ್ಸಾ ಘಟಕ ಮಾತ್ರ ಇಲ್ಲ. ಹೀಗಾಗಿ 300 ಹಾಸಿಗೆಗಳ ಈ ಆಸ್ಪತ್ರೆ ಇದ್ದೂ ಇಲ್ಲದಂತಾಗಿದೆ. ಇಂತಹ ಅನೇಕ ಅವ್ಯವಸ್ಥೆಯ ಆಸ್ಪತ್ರೆಗಳು ರಾಜ್ಯದಲ್ಲಿ ಇವೆ. ಇವುಗಳಿಗೆ ಜೀವ ನೀಡಬೇಕಾಗಿದೆ.ಆರೋಗ್ಯ ಇಲಾಖೆಯ ಅಂಕಿ ಅಂಶಗಳ ಪ್ರಕಾರ ತಜ್ಞ ವೈದ್ಯರ ಕೊರತೆ ಶೇ. 52ರಷ್ಟಿದೆ. ಈ ಕೊರತೆಗೆ ಕಾರಣವೇನೆಂದರೆ ಗ್ರಾಮೀಣ ಪ್ರದೇಶಗಳಲ್ಲಿ ಕೆಲಸ ಮಾಡಲು ವೈದ್ಯರು ನಿರಾಕರಿಸುತ್ತಾರೆ. ಹೀಗಾಗಿ ವೈದ್ಯರಿಗಾಗಿ ಕಟ್ಟಿಸಿರುವ ಮನೆಗಳು ಖಾಲಿ ಬಿದ್ದಿವೆ. ವೈದ್ಯರು ಮಾತ್ರವಲ್ಲ ದಾದಿಯರು, ಇತರ ವೈದ್ಯಕೀಯ ಸಿಬ್ಬಂದಿಯ ಕೊರತೆ ಸಾಕಷ್ಟಿದೆ. ತಾಲ್ಲೂಕು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರು ಇಲ್ಲದಿದ್ದರೆ ಖಾಸಗಿ ಆಸ್ಪತ್ರೆಗಳಿಗೆ ರೋಗಿಗಳನ್ನು ಕಳಿಸಿಕೊಡಲಾಗುತ್ತದೆ. ಹೀಗೆ ಒಂದು ಆಸ್ಪತ್ರೆಯಿಂದ ಇನ್ನೊಂದು ಆಸ್ಪತ್ರೆಗೆ ರೋಗಿಗಳನ್ನು ಸಾಗಿಸುವುದು ಸರಿಯಲ್ಲ. ಈ ಅಲೆದಾಟದಲ್ಲಿ ರೋಗಿಯ ಕಾಯಿಲೆ ಉಲ್ಬಣಗೊಂಡರೆ ಯಾರು ಹೊಣೆ ವಾಸ್ತವವಾಗಿ ಪ್ರತೀ ಹತ್ತು ಸಾವಿರ ಜನರಿಗೆ ಒಂಭತ್ತು ಮಂದಿ ವೈದ್ಯರು ಸೇವೆಗೆ ಲಭ್ಯವಿರಬೇಕು.


**ಸರಕಾರಿ ಆಸ್ಪತ್ರೆಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡ ನಿರ್ಮಾಣ ಕಾರ್ಯಕ್ಕೆ ತೋರಿಸುವ ಆಸಕ್ತಿಯನ್ನು ಅಲ್ಲಿ ವೈದ್ಯಕೀಯ ಸೌಕರ್ಯಗಳನ್ನು ಕಲ್ಪಿಸುವ ವಿಷಯದಲ್ಲೂ ತೋರಿಸಬೇಕು. ಅಲ್ಲದೆ ಸರಕಾರಿ ಆಸ್ಪತ್ರೆಗಳಲ್ಲಿ ಔಷಧಿ ಖರೀದಿಗೆ ಸಂಬಂಧಿಸಿದಂತೆ ಪಾರದರ್ಶಕತೆಯನ್ನು ಕಾಪಾಡಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಭ್ರಷ್ಟಾಚಾರದ ಪ್ರಕರಣಗಳಲ್ಲಿ ಮುಲಾಜಿಲ್ಲದೆ ಕ್ರಮಗಳನ್ನು ಕೈಗೊಳ್ಳಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಸೇವೆ ಸಲ್ಲಿಸಲು ನಿರಾಕರಿಸುವ ವೈದ್ಯರ ಮನವೊಲಿಸಿ ಹಳ್ಳಿಗಾಡು ಪ್ರದೇಶಕ್ಕೆ ಕಳುಹಿಸಿಕೊಡಬೇಕು. ಸಾರ್ವಜನಿಕ ಆಸ್ಪತ್ರೆಗಳು ಖಾಸಗಿ ಆಸ್ಪತ್ರೆಗಳಿಗೆ ಕಡಿಮೆಯಿಲ್ಲದಂತೆ ಕಾರ್ಯನಿರ್ವಹಿಸಬೇಕು. ಆಗ ಜನರಿಗೆ ನಂಬಿಕೆ ಬರುತ್ತದೆ.**

## ಶ್ರೀ ರಾಘವೇಂದ್ರ ವಿಜಯ ಪ್ರವಚನ ಮಾಲಿಕೆ


ಉದಯವಾಹಿನಿ ಚಿತ್ರ

ಶ್ರೀ ರಾಘವೇಂದ್ರ ತೀರ್ಥ ಗುರು ಸಾರ್ವಭೌಮರ ಜೀವನ ಚರಿತ್ರೆ, ಡಾಕ್ಟರ್- ವೇಂಕಟನರಸಿಂಹಾಚಾರ್ಯರಿಂದ ರಾಯರ ಜೀವನ ಚರಿತ್ರೆ, ಪ್ರವಚನನೆರವೇರುತ್ತಿದೆ ಪ್ರತಿನಿತ್ಯ 1st March to 6th March ಸಂಜೆ 6 ರಿಂದ 7 ಗಂಟೆಯವರೆಗೆ ಬೆಂಗಳೂರಿನ ಜಯನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ

## ರಾಮಾಯಣ



ಶ್ರೀರಾಮನು ಮೆರವಣಿಗೆಯಲ್ಲಿ ದಶರಥರಾಜನ ಅರಮನೆಗೆ ಹೋದದ್ದು

• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಅನಂತರ ಸದ್ವಿನಯ ಭಯಭಕ್ತಿಗಳಿಂದ ಆ ರಾಯನ ಚರಣಾರವಿಂದಗಳಿಗೆ ಸಾಷ್ಟಾಂಗ ನಮಸ್ಕಾರಗಳನ್ನು ಮಾಡಿ ಕೈಕೇಯಾದೇವಿಗೂ ಸಾಷ್ಟಾಂಗಪ್ರಣಾಮವನ್ನು ಮಾಡಿ ಕೈ ಮುಗಿದು ನಿಂತನು. ಆತನನ್ನು ಕಂಡು ದಶರಥರಾಯನು ಕಣ್ಣೀರು ತುಂಬಿ ರಾಮ ಎಂಬ ನಾಮಮಾತ್ರವನ್ನೇ ನುಡಿದು ದುಃಖಾತಿಶಯದಿಂದ ಮುಖವೆತ್ತಿ ನೋಡುವುದಕ್ಕೂ ಚೈತನ್ಯವಿಲ್ಲದೆ ಕಾಂತಿಗುಂದಿದನು. ಆಗ ಶ್ರೀರಾಮನು ಮಲಗಿದ್ದ ಸರ್ಪವನ್ನು ಮೆಟ್ಟಿದಂತೆ ಭಯಪಟ್ಟನು. ದಶರಥನು ದುಃಖಾತಿಶಯದಿಂದಲೂ ಕೋಪೋದ್ರೇಕದಿಂದಲೂ ನಿಟ್ಟುಸಿರುಬಿಡುತ್ತ ಅತಿಶೋಭವುಂಟಾದ ಸಮುದ್ರರಾಜನ ಹಾಗೆ ಕಳವಳಗೊಂಡು ರಾಹುಗ್ರಸ್ತನಾದ ಚಂದ್ರನಂತೆಯೂ ಹುಸಿ ಯಾಡಿದ ಋಷಿಯಂತೆಯೂ ಅತ್ಯಂತ ಚಿಂತಾಕ್ರಾಂತನಾಗಿದ್ದನು. ಅದನ್ನು ಕಂಡು ಪಿತೃಭಕ್ತನಾದ ಶ್ರೀರಾಮನು ಪರ್ವಕಾಲದ ಸಮುದ್ರದಂತೆ ಅಶಾಂತನಾಗಿ ಇದೇನು ಆಶ್ಚರ್ಯ ನನ್ನ ತಂದೆಯು ನನ್ನೊಡನೆ ಸಂಭಾಷಣೆ ಮಾಡದೆ ಇದ್ದಾನೆ ನನ್ನನ್ನು ಕಂಡರೆ ಹುಣ್ಣಿಮೆಯ ಚಂದ್ರನನ್ನು ಕಂಡ ಸಮುದ್ರದ ಹಾಗೆ ಸಂತೋಷದಿಂದ ಹಿಗ್ಗಿ ನಲಿದು ಮುದ್ದಾಡಿ ಪ್ರಸನ್ನನಾಗಿ ಮಾತನಾಡಿಸುತ್ತಿದ್ದನು. ಅಂಥ ರಾಯನು ಈಗ ನನ್ನನ್ನು ಕಂಡು ಕಣ್ಣೀರು ತುಂಬಿ ನನ್ನನ್ನು ನೋಡದೆಯೂ ಸಂಭಾಷಣೆ ಮಾಡದೆಯೂ ಇದ್ದಾನೆ ಇದೇನು ಕಾರಣವೂ ತಿಳಿಯಲಿಲ್ಲ ಎಂದು ಯೋಚಿಸಿ ಕಂಗೆಟ್ಟು ಮುಖ ಕಾಂತಿಗುಂದಿದನು. ಆಮೇಲೆ ಅತಿಭಯದಿಂದ ಕೈಕೇಯಾದೇವಿಯನ್ನು ನೋಡಿ ಕೈ ಮುಗಿದು ಆಕೆಯನ್ನು ಕುರಿತು ಅಮ್ಮ, ಮಹಾರಾಜನಿಗೆ ಶರೀರದಲ್ಲಿ ಏನಾದರೂ ತೊಂದರೆಯಾಗಿದೆಯೆ ನಾನೇನಾದರೂ ಅಪರಾಧವನ್ನು ಮಾಡಿದೆನೆ ಯಾವ ಕಾರಣ ನನ್ನ ಮೇಲೆ ಕೋಪಿಸಿಕೊಂಡು ಮಾತನಾಡದಿದ್ದಾನೆಯೋ ತಿಳಿಯಲಿಲ್ಲ. ನೀನು ಸಮಾಧಾನವನ್ನು ಹೇಳಿ ಆತನ ಕೋಪವನ್ನು ಶಾಂತಮಾಡು, ನನ್ನಲ್ಲಿ ಯಾವಾಗಲೂ ಬಹಳ ಪ್ರೀತಿಯುಳ್ಳ ಮಹಾರಾಜನು ನನ್ನೊಡನೆ ಮುಖ ಗೊಟ್ಟು ಮಾತನಾಡದಿದ್ದಾನೆ. ಈತನಿಗೆ ಏನಾದರೂ ಮನೋವ್ಯಥೆಯುಂಟಾಗಿದೆಯೆ ಅಥವಾ ದೈಹಿಕವಾದ ಆಲಸ್ಯವಾಗಿದೆಯೆ ಒಡಹುಟ್ಟಿದವರಾದ ಭರತಶತ್ರುಘ್ನಾದಿಗಳಿಗೆ ಅನಾರೋಗ್ಯ ವೆಂದೂ ಕೇಳಲಿಲ್ಲ. ನಾನು ಅತ್ಯಂತ ಭಯಭಕ್ತಿಗಳಿಂದ ನನ್ನ ತಂದೆಯ ಸೇವೆಯನ್ನು ಮಾಡುತ್ತಿರುವೆನು. ಈತನು ನನ್ನಲ್ಲಿ ಅತ್ಯಂತ ವಾತ್ಸಲ್ಯದಿಂದಿರುವನು. ಇಂಥ ಮಹಾರಾಜನು ಈಗ ಕೋಪಿಸಿಕೊಂಡು ಮುಖದಿರುಗಿ ನೋಡದೆ ಇರುವಪಕ್ಷದಲ್ಲಿ ನಾನು ಜೀವಿಸಿರಲಾರೆನು. ಕಾರಣವಿಲ್ಲದೆ ಕೋಪವು ಹುಟ್ಟಲಾರದು. ನೀನೇನಾದರೂ ಕೋಪಿಸಿಕೊಂಡು ನಿಷ್ಠುರವಾಗಿ ನುಡಿದೆಯಾ ಈ ವಿಷಯ ವನ್ನು ನನಗೆ ತಿಳಿಯಹೇಳಬೇಕು ಎಂದು ಕೇಳಿದನು. ಆ ಮಾತನ್ನು ಕೇಳಿ ಕೈಕೇಯಿಯು ಲಜ್ಜೆಯನ್ನು ಬಿಟ್ಟು ಅಹಿತವಾದ ಮಾತುಗಳಿಂದ ಶ್ರೀರಾಮನನ್ನು ಕುರಿತು **ಹೀಗೆಂದಳು:** ರಾಮ. ನಿನ್ನ ತಂದೆಯಾದ ದಶರಥರಾಯನಿಗೆ ಯಾವ ಕೋಪವೂ ಇಲ್ಲ.


**ಮುಂದುವರಿಯುವುದು...**

**ಹನ್ನೆರಡನೆಯ ಶತಮಾನದ ಶರಣರು ಪ್ರತಿಪಾದಿಸಿದ 'ಲಿಂಗಾಯತ ಧರ್ಮ'ವು ಹೇಗೆ ಹಿಂದೂ ಧರ್ಮಕ್ಕಿಂತ ಭಿನ್ನ ಎಂಬುದನ್ನು ವಿಶ್ಲೇಷಿಸಲಾಗಿದೆ. ಗೋವನ್ನು ಧಾರ್ಮಿಕ ನೆಲೆಯಲ್ಲಿ ಪವಿತ್ರೀಕರಿಸುತ್ತ, ಗೋ ಹತ್ಯೆ ನಿಷೇಧ ಕಾಯ್ದೆಯ ರಾಜಕಾರಣದ ಮೂಲಕ ಬಹುಸಂಖ್ಯಾತ ಸಮುದಾಯಗಳ ಆಹಾರ ಸಂಸ್ಕೃತಿಯನ್ನು ಅಪವ್ಯಾಖ್ಯಾನಿಸಲಾಗುತ್ತಿರುವ ಕೋಮುವಾದಿ ಆಹಾರ ರಾಜಕಾರಣದ ಹುನ್ನಾರವನ್ನು ಪ್ರಶ್ನಿಸಲಾಗಿದೆ. ಪ್ರಸ್ತುತ ಗೋವನ್ನು ಧಾರ್ಮಿಕ ನೆಲೆಯಲ್ಲಿ ಪವಿತ್ರೀಕರಿಸಿ ರಾಜಕಾರಣ ಮಾಡುತ್ತಿರುವ ಮನುವಾದಿ ಮನಸ್ಥಿತಿಗಳೆ ಈ ಹಿಂದೆ ಹೇಗೆ ಗೋವಿನ ಮಾಂಸದ ಭಕ್ಷಕರಾಗಿದ್ದರು ಎಂಬುದನ್ನು ಪುರಾಣ ಕಥನಗಳಲ್ಲಿನ್ನ ಉಲ್ಲೇಖದ ಮೂಲಕ ಸ್ಪಷ್ಟಪಡಿಸಲಾಗಿದೆ.**

# ವರ್ತಮಾನದ ಸಂಕಟಗಳಿಗೆ ಸಾಂಸ್ಕೃತಿಕ ರಾಜಕಾರಣ ಕನ್ನಡಿ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ




ವರ್ತಮಾನದ ಸಂಕಟಗಳಿಗೆ ಕನ್ನಡಿ ಯಾಗಬೇಕಾದ ಬರಹಗಾರರ ನೈತಿಕ ಹೊಣೆಗಾರಿಕೆ ತಮ್ಮ ಕಾಲದ ಸಂಕಟ ಗಳಿಗೆ ಜವಾಬ್ದಾರಿಯಿಂದ ಪ್ರತಿಕ್ರಿಯಿಸಬೇಕಾಗಿರುವುದು ಬರಹಗಾರರ ಬಹುಮುಖ್ಯ ಕರ್ತವ್ಯವಾಗಿದೆ. ನೈತಿಕವಾಗಿ, ಮಾನಸಿಕವಾಗಿ, ಬೌದ್ಧಿಕವಾಗಿ ಗಟ್ಟಿಯಾಗಿದ್ದಾಗ ಮಾತ್ರ ತಮ್ಮ ಸುತ್ತಲ ಸಮಾಜ, ಸಮುದಾಯಗಳನ್ನು ಪ್ರಾಮಾಣಿಕವಾಗಿ ಗ್ರಹಿಸಲಿಕ್ಕೆ ಹಾಗೂ ನಿಷ್ಪಕ್ಷಪಾತವಾಗಿ ಒಳಿತು-ಕೆಡುಕುಗಳನ್ನು ಕಂಡುಕೊಳ್ಳುತ್ತ ಪ್ರಶ್ನಿಸಲಿಕ್ಕಾಗುವುದು. ಮಾನಸಿಕ ಗುಲಾಮಗಾರಿಕೆ ಹಾಗೂ ಬೌದ್ಧಿಕ ಅಧಃಪತನಗಳನ್ನು ಮೀರಲಿಕ್ಕೆ ಸಾಧ್ಯವಾಗದ ಯಾವುದೇ ಬರಹಗಾರರು ವರ್ತಮಾನದ ದುರಂತಗಳಿಗೆ ಕಣ್ಣಾಗುತ್ತ, ಸಂವಾದಿಸಲಿಕ್ಕೆ ಸಾಧ್ಯವಿಲ್ಲ. ಮನುಷ್ಯ ವಿರೋಧಿ ಧೋರಣೆಗಳನ್ನು ಪ್ರಶ್ನಿಸುವ, ಪ್ರತಿರೋಧಿಸುವ ನಡೆಗಳನ್ನೇ ಅಪರಾಧವನ್ನಾಗಿ ಬಿಂಬಿಸುತ್ತಿರುವ ಈ ಹೊತ್ತಿನಲ್ಲಿ ಬರಹಗಾರರು ಇನ್ನಷ್ಟು ತೀವ್ರವಾದ ಚಿಂತನೆಗಳ ಮೂಲಕ ಸಮಾಜಕ್ಕೆ ಮುಖಾಮುಖಿಯಾಗಬೇಕಿದೆ.

ಪ್ರಜಾಪ್ರಭುತ್ವ, ಸಾಮಾಜಿಕ ನ್ಯಾಯ, ಭಾರತ ಸಂವಿಧಾನ, ಮಾನವ ಹಕ್ಕುಗಳು ಗಂಡಾಂತರಕ್ಕೆ ಸಿಲುಕಿರುವ ಆತಂಕಕಾರಿಯಾದ ಈ ಹೊತ್ತಿನಲ್ಲಿ ನಿಷ್ಠೂರವಾದಿಯಾದ ಗೆಳೆಯ ಹಾರೋಹಳ್ಳಿ ರವೀಂದ್ರ ಅವರ ''ಸಾಂಸ್ಕೃತಿಕ ರಾಜಕಾರಣ'' ಕೃತಿ ಹೊರಬರುತ್ತಿರುವುದು ಮೆಚ್ಚತಕ್ಕ ಸಂಗತಿ.

ಈ ಕೃತಿಯಲ್ಲಿನ ಬರಹಗಳು ಓದುಗರನ್ನು ಜಿಜ್ಞಾಸೆಗೆ ಹಚ್ಚಬಲ್ಲವಾಗಿವೆ. ಧರ್ಮ, ಆಹಾರ, ಅಭಿವ್ಯಕ್ತಿ, ಅಧಿಕಾರ, ಜಾತಿ, ಕಾನೂನು, ರಾಜಕಾರಣ, ಸಂವಿಧಾನ, ಪ್ರಜಾಪ್ರಭುತ್ವ'ವನ್ನು ಮನುವಾದಿ ಜಾತಿ ರಾಜಕಾರಣವು ತನ್ನ ಸ್ವಾರ್ಥ ಸಾಧನೆಗಾಗಿ ದಮನಕಾರಿ ಅಸ್ತ್ರಗಳನ್ನಾಗಿ ಬಳಸುತ್ತಿರುವ ಅದರ ಅನಾಹುತಕಾರಿಯಾದ ಒಳಹುನ್ನಾರಗಳನ್ನು ಪ್ರಖರವಾಗಿ ಮಂಡಿಸುವ ಇಲ್ಲಿನ ಬರಹಗಳು ಪ್ರತಿರೋಧವನ್ನು ತೀವ್ರವಾಗಿ ಉಸಿರಾಡುತ್ತವೆ. ಮನುವಾದಿ ಪರಂಪರೆಯ ಕ್ರೌರ್ಯ, ದುರಂತಗಳು ವರ್ತಮಾನದಲ್ಲಿ ಹೊಸ ಹೊಸ ರೂಪಾಂತರಗಳ ವೇಷ ತೊಟ್ಟು ಮರುಹುಟ್ಟು ಪಡೆದು ಕೊಂಡು ಮಾನವ ಲೋಕಕ್ಕೆ ಹೇಗೆ ಕಂಟಕಪ್ರಾಯವಾಗಿವೆ ಎಂಬುದನ್ನು ಸಾಕ್ಷಿಪ್ರಜ್ಞೆಯ ಮೂಲಕ ತರ್ಕಕ್ಕೆ ಒಳಪಡಿಸಲಾಗಿದೆ. ಪ್ರಶ್ನೆ, ಪ್ರತಿರೋಧ, ವಿಮರ್ಶಾ ದೃಷ್ಟಿಕೋನದ ಮೂಲಕ ಮಹತ್ವದ ಸಂಗತಿಗಳನ್ನು ತರ್ಕಕ್ಕೆ ಒಳಪಡಿಸುವ ಇಲ್ಲಿನ ಲೇಖನಗಳು ವರ್ತಮಾನದ ಪ್ರಜಾಪ್ರಭುತ್ವಾದಿ ಭಾರತಕ್ಕೆ ಹಾಗೂ ಭಾರತ ಸಂವಿಧಾನಕ್ಕೆ ಬಂದೊದಗಿರುವ ಯಾತನಾಮಯ ಸ್ಥಿತಿಯನ್ನು ಅನಾವರಣ ಮಾಡುತ್ತವೆ. ಯಾವುದೇ ಧರ್ಮ ಗ್ರಂಥವನ್ನು ಕೇವಲ ಭಾವನಾತ್ಮಕವಾಗಿ ಗ್ರಹಿಸುವ ಬದಲಾಗಿ, ವಸ್ತುನಿಷ್ಠವಾಗಿ ಜೀವಕೇಂದ್ರಿತವಾಗಿ ವೈಚಾರಿಕತೆಯ ವಿವೇಕದ ನೆಲೆ ಯಲ್ಲಿ ಅವಲೋಕಿಸಬೇಕಾಗಿರುವ ಅಗತ್ಯತೆಯನ್ನು ಎತ್ತಿಹಿಡಿಯಲಾಗಿದೆ. ಧರ್ಮಾಧಾರಿತ ಆಡಳಿತಾತ್ಮಕ ರಾಜಕಾರಣವು ನಿರ್ಮಿಸಬಹುದಾದ ಕೋಮುವಾದಿ, ಸರ್ವಾಧಿಕಾರಿ ಧೋರಣೆಯ ಅಪಾಯದ ಅರಿವಿದ್ದ ಬಾಬಾಸಾಹೇಬ್ ಅಂಬೇಡ್ಕರ್ ಅವರು 'ಧರ್ಮ ನಿರಪೇಕ್ಷತೆ'ಯ ಮಹತ್ವವನ್ನು ಸಂವಿಧಾನದಲ್ಲಿ ಅಳವಡಿಸಿದ್ದಾರೆ.

ಜಗತ್ತಿನ ಯಾವುದೇ ಧರ್ಮವು ತಾನೊಂದು ಹಿಂಸಾ ಸ್ವರೂಪಿಯಾದ ಭಯೋತ್ಪಾದಕ ಧೋರಣೆಯ ಜೀವ ವಿರೋಧಿ ರೂಪಾಂತರವಾಗದಂತೆ ಎಚ್ಚರವಹಿಸುತ್ತ, ಸಕಲ ಜೀವರಾಶಿಗಳ ಒಳಿತನ್ನು ಬಯಸುವ ಮನುಷ್ಯತ್ವದ ವಿವೇಕವಾಗಬೇಕೆಂಬುದನ್ನು ಇಲ್ಲಿನ ಬರಹಗಳು ಪ್ರತಿಪಾದಿಸುತ್ತವೆ. ಜಾತೀಯತೆ, ಅಸ್ಪೃಶ್ಯತೆ, ವರ್ಣ ವ್ಯವಸ್ಥೆ, ಅಸಮಾನತೆ, ಶೋಷಣೆ, ಲಿಂಗತಾರತಮ್ಯವನ್ನು ನಿವಾರಿಸಿಕೊಳ್ಳದ ಹಾಗೂ ಮನುಷ್ಯರನ್ನು ಮನುಷ್ಯರನ್ನಾಗಿ ಕಾಣದ, ನಡೆಸಿಕೊಳ್ಳದ, ಘನತೆಯ ಬದುಕನ್ನು ಬದುಕವಂತೆ ತನ್ನ ಅನುಯಾಯಿಗಳಿಗೆ ಹೇಳಿಕೊಡದ ಯಾವುದೇ ಧರ್ಮ ನಿಜ ಅರ್ಥದಲ್ಲಿ ಮಾನವೀಯ ಧರ್ಮವಾಗಿ ಉಳಿಯಲಿಕ್ಕೆ ಸಾಧ್ಯವಿಲ್ಲ ಹಾಗೂ ಅಂತಹ ಧರ್ಮದ ಅನುಯಾಯಿಗಳು ಹಿಂಸಾ ಪ್ರವೃತ್ತಿಯ ಧರ್ಮಾಂಧರಾಗುವಲ್ಲಿ ಯಾವುದೇ ಅನುಮಾನವಿಲ್ಲ ಎಂಬುದನ್ನು ಈ ಕೃತಿ ಮನವರಿಕೆ ಮಾಡಿಕೊಡುತ್ತದೆ.

**ಕೆಲವು ವಿಚಾರಗಳನ್ನು ಕುರಿತು ವಿಮರ್ಶಿಸುವ ಸಂದರ್ಭದಲ್ಲಿ ಲೇಖಕರು ಸಂಯಮ ರಹಿತವಾಗಿ, ಪ್ರಚೋದನಾಕಾರಿಯಾಗಿ ಮಾತನಾಡುತ್ತಾರೆ ಎನಿಸುತ್ತದೆ. ಇದಕ್ಕೆ ಆ ವಿಚಾರ ಗಳಲ್ಲಿನ ಸಮಾಜ-ಸಮುದಾಯ ವಿರೋಧಿ ಧೋರಣೆಗಳು ಸಹ ಕಾರಣವಾಗಿವೆ. ಆದರೂ ಸಹ ಸಮಾಜಮುಖಿ ಚಿಂತನಾಶೀಲ ಬರಹಗಾರರ ಭಾಷೆ ಸಂಯಮವನ್ನು ಕಳೆದುಕೊಳ್ಳಬಾರದೆನಿಸುತ್ತದೆ.**

ಕಾವ್ಯ, ಕಥೆ, ಪುರಾಣದ ಸಂಗತಿಗಳನ್ನು ಐತಿಹಾಸಿಕ ಸತ್ಯ ಘಟನೆಗಳೆಂಬಂತೆ ಬಿಂಬಿಸಲು ಹೊರಟರುವ ಉದ್ದೇಶದ ಹಿಂದಿನ ಕುಟಿಲತನವನ್ನು ಇಲ್ಲಿ ಬಯಲಾಗಿಸಲಾಗಿದೆ. ಭಾವನಾವಾದದ ಮನುವಾದ ಹಾಗೂ ಭೌತವಾದದ ಬೌದ್ಧವಾದದ ನಡುವಿನ ಪಾರಂಪರಿಕ ಸಂಘರ್ಷವನ್ನು ವಿನ್ಸೆಂಟ್ ಸ್ಮಿತ್, ಚಾಲ್ಸ್ ಹೆಲೆನ್, ಪ್ರತಾಪ್ ಚೆಟ್ಸೆ, ಆರ್. ಡಿ. ಬ್ಯಾನರ್ಜಿ, ಡಾ. ಬಿ. ಆರ್. ಅಂಬೇಡ್ಕರ್ ಅವರ ಅಧ್ಯಯನದ ಹಿನ್ನೆಲೆಯಲ್ಲಿ ಚರ್ಚಿಸಲ್ಪಟ್ಟಿರುವ ಇಲ್ಲಿನ ವಿವರಗಳು ಓದುಗರಲ್ಲಿ ಕುತೂಹಲವನ್ನು ನಿರ್ಮಿಸುವ ಮೂಲಕ ಹೆಚ್ಚಿನ ಅಧ್ಯಯನಕ್ಕೆ ಒತ್ತಾಯಿಸುತ್ತವೆ. ಆದಿಮ ದ್ರಾವಿಡ ಪರಂಪರೆಯವರಾದ ಕಶ್ಯಪ, ಪ್ರಹ್ಲಾದ, ವಿರೋಚನ, ಬಲಿ ಚಕ್ರವರ್ತಿ, ಮಹಿಷಾಸುರರಿಗೆ ಸಂಬಂಧಿಸಿದ ಮಹತ್ವದ ಚರ್ಚೆಗಳು ನಮ್ಮ ಪರಂಪರೆ, ಸಂಸ್ಕೃತಿ, ಚರಿತ್ರೆಗಳನ್ನು ಮರುಚಿಂತನೆ, ಅಧ್ಯಯನ, ಸಂಶೋಧನೆಗೆ ಒಳಪಡಿಸಬೇಕಾಗಿರುವ ಅಗತ್ಯತೆಯನ್ನು ಮನವರಿಕೆ ಮಾಡಿಕೊಡುತ್ತವೆ. ಗೋವಿನ ರಕ್ಷಣೆಯ ನೆಪದಲ್ಲಿ ಗೋ ರಕ್ಷಕ ದಳದವರು ದಲಿತ, ಮುಸ್ಲಿಂ ಸಮುದಾಯದ ಮೇಲೆ ಎಸಗಿರಬಹುದಾದ, ಎಸಗುತ್ತಿರುವ ಅಮಾನವೀಯ ಹಿಂಸಾತ್ಮಕ ಕೃತ್ಯಗಳನ್ನು ದಾಖಲೆ ಸಹಿತ ವಿಶ್ಲೇಷಿಸುತ್ತಲೇ, ಕೋಮುವಾದದ ಕ್ರೂರತನದ ಮುಖವಾಡವನ್ನು ಬೆತ್ತಲಾಗಿಸಿದ ಗುಜರಾತ್‌ನ ಸೋಮನಾಥಪುರ ಜಿಲ್ಲೆಯ ಊನಾ ಎಂಬಲ್ಲಿ ನಡೆದಂತಹ ಮಹತ್ವದ ಪ್ರತಿರೋಧಾತ್ಮಕ ಹೋರಾಟವನ್ನು ದಾಖಲಿಸಲಾಗಿದೆ.

ಗೋವಿನ ಮಾಂಸವನ್ನು ಆಹಾರವನ್ನಾಗಿ ಬಳಸುವುದು ಅಪರಾಧ ಎಂದು ಹೇಳುವವರು, ಗೋವಿನ ಮಾಂಸ ವನ್ನು ಹೊರ ದೇಶಗಳಿಗೆ ರಫ್ತು ಮಾಡುತ್ತ ಹಣಗಳಿಸುವ ವ್ಯವಹಾರದಲ್ಲಿ ತೊಡಗಿರುವವರನ್ನು ಪ್ರಶ್ನಿಸದಿರುವ ಅವರ ಕೋಮುವಾದಿ ರಾಜಕಾರಣದ ಹಿಂದಿನ ದ್ವಂದ್ವ ನಿಲುವನ್ನು ಪ್ರಶ್ನಿಸಲಾಗಿದೆ. ಗೋವಿನ ಮಾಂಸದ ಆಹಾರ ರಾಜಕಾರಣ ಹಾಗೂ ಗೋ ಹತ್ಯೆ ನಿಷೇಧ ಕಾಯ್ದೆಯ ನೆಪದಲ್ಲಿ ಈ ದೇಶದ ದಲಿತರು, ಮುಸಲ್ಮಾನರನ್ನು ಸಾಮಾಜಿಕವಾಗಿ, ರಾಜಕೀಯವಾಗಿ ದಮನಕ್ಕೆ ಒಳಪಡಿಸುವುದು ಜಾತಿವಾದಿ, ಕೋಮುವಾದಿ, ಮತಾಂಧರ ಬಹುಮುಖ್ಯ ಉದ್ದೇಶವಾಗಿರುವುದನ್ನು ಇಲ್ಲಿನ ಬರಹಗಳು ಖಚಿತಪಡಿಸುತ್ತವೆ. ಕೋಮುವಾದೀಕರಣಗೊಂಡಿರುವ ಜಾತಿವಾದಿ ಪ್ರಭುತ್ವವು ಹೇಗೆ ಸಂವಿಧಾನಬದ್ಧ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುವ ಮೂಲಕ ಪ್ರಜಾಪ್ರಭುತ್ವ ವಿರೋಧಿಯಾಗಿ ನಡೆದು ಕೊಳ್ಳುತ್ತಿದೆ ಎಂಬುದನ್ನು ಎಂ. ಎಂ. ಕಲಬುರಗಿ, ಗೌರಿ ಲಂಕೇಶ್, ಗೋವಿಂದ ಪನ್ಸಾರೆ, ದಾಬೋಲ್ಕರ್ ಅವರ ಹತ್ಯೆ, ಹಾಗೂ ಪೆರುಮಾಳ್ ಮುರುಗನ್ ಮುಂತಾದ ಲೇಖಕರ ಮೇಲಿನ ಹಲ್ಲೆ, ಜೀವ ಬೆದರಿಕೆ, ಬಂಧನದ ವಿವರಗಳ ಮೂಲಕ ವಿಶ್ಲೇಷಿಸಲಾಗಿದೆ. ಇಂತಹ ಸಂಕಟದ ಸಂದಿಗ್ಧತೆಯನ್ನು ಬರಹಗಾರರು, ಚಿಂತಕರು, ಮಾನವೀಯ ಸಂವೇದನಾಶೀಲರು ತೀವ್ರವಾಗಿ ಪ್ರಶ್ನಿಸುವ ಅಗತ್ಯವಿದೆ ಎಂಬುದನ್ನು ಇಲ್ಲಿನ ಬರಹಗಳು ಒತ್ತಾಯಿಸುತ್ತವೆ. ಜಾತಿವಾದ, ಕೋಮುವಾದ, ಧರ್ಮಾಂಧತೆಯಿಂದಾಗಿ ಸಾಮಾಜಿಕ ವ್ಯವಸ್ಥೆ ಭ್ರಷ್ಟಗೊಂಡು ಹಿಂಸಾತ್ಮಕ ಸ್ವರೂಪವನ್ನು ಪಡೆದುಕೊಂಡು ಜನಾಂಗೀಯ ದ್ವೇಷ ಬಿತ್ತುತ್ತಿರುವ ಅಪಾಯವನ್ನು ವಿವರಿಸುವ ಇಲ್ಲಿನ ಬರಹಗಳು, ಈ ಸಂಕಟಗಳಿಂದ ಸಮಾಜ, ಸಮುದಾಯಗಳನ್ನು ಪಾರು ಮಾಡುವ ನಿಟ್ಟಿನಲ್ಲಿ ನಾಗರಿಕರ ಹೊಣೆಗಾರಿಕೆಯನ್ನು ಎಚ್ಚರಿಸಬಲ್ಲವಾಗಿವೆ. ಪ್ರಭುತ್ವವು ತನಗೆ ದಕ್ಕಿದ ಸಂವಿಧಾನಬದ್ಧ ಅಧಿಕಾರವನ್ನು ದುರ್ಬಳಕೆ ಮಾಡಿಕೊಂಡು; ಸಂವಿಧಾನಬದ್ಧ ಕಾಯ್ದೆ, ಕಾನೂನುಗಳನ್ನು ಜನಪರವಾಗಿ, ಸಮಾಜದ ವಿಕಾಸಕ್ಕೆ ಬಳಸುವ ಬದಲಾಗಿ, ಅವುಗಳನ್ನು ದ್ವೇಷದ ಹಿನ್ನೆಲೆಯಲ್ಲಿ ಜನಾಂಗಗಳನ್ನು ತುಳಿಯುವ ಅಸ್ತ್ರವನ್ನಾಗಿ ಬಳಸುವುದರಿಂದಾಗುವ ಅಪಾಯವನ್ನು 'ಸಿ.ಎ.ಬಿ., ಎನ್.ಆರ್.ಸಿ., ಯು.ಎ.ಪಿ.ಎ.' ಕಾಯ್ದೆಗಳಲ್ಲಿನ ಜನವಿರೋಧಿ ಧೋರಣೆಗಳ ಹಿನ್ನೆಲೆಯಲ್ಲಿ ಚರ್ಚಿಸಲಾಗಿದೆ. ಚರಿತ್ರೆಯನ್ನು ತಿರುಚುವುದು, ಅಪವ್ಯಾಖ್ಯಾನಿಸುವುದು ಎಷ್ಟು ಅಪಾಯಕಾರಿ ಹಾಗೂ ಅದು ಚರಿತ್ರೆಗೆ ಎಸಗುವ ಮಹಾ ದ್ರೋಹ ಎಂಬುದನ್ನು; ಸಮಾಜಕ್ಕೆ ಕಂಟಕವಾಗಿರುವ, ವಂಚನೆ ಎಸಗಿರುವವರನ್ನೇ ಆದರ್ಶ ಎಂಬುದಾಗಿ ಬಿಂಬಿ ಸುವುದರಿಂದಾಗುವ ಅನಾಹುತವನ್ನು ಇಲ್ಲಿನ ಲೇಖನಗಳು ವಿಮರ್ಶೆಗೆ ಒಳಪಡಿಸಿವೆ. ವ್ಯಕ್ತಿ ಮತ್ತು ಸಮುದಾಯಗಳ ಸಾಮಾಜಿಕ, ರಾಜಕೀಯ, ಚಾರಿತ್ರಿಕ, ಸಾಮುದಾಯಿಕ ಪ್ರಜ್ಞೆಯು ಭ್ರಷ್ಟಗೊಳ್ಳದಂತೆ ಸದಾ ಜಾಗೃತವಾಗಿಟ್ಟುಕೊಳ್ಳಬೇಕಾಗಿರುವ ಅಗತ್ಯತೆಯನ್ನು ಈ ಕೃತಿ ಎಚ್ಚರಿಸುತ್ತದೆ. ನಿಷ್ಠೂರವಾದ ಬರಹಗಳನ್ನು ಒಳಗೊಂಡಿರುವ ಈ ಕೃತಿಯ ಆಳದಲ್ಲಿರುವ ಸಾಮಾಜಿಕ, ಸಾಮುದಾಯಿಕ ಬದ್ಧತೆಯ ಜೀವಪರ ಕಾಳಜಿಯನ್ನು ಅಲ್ಲಗಳೆಯಲಾಗದು.

**ಮಹಿಷಾಸುರರಿಗೆ ಸಂಬಂಧಿಸಿದ ಮಹತ್ವದ ಚರ್ಚೆ**

ಈ ಕೃತಿಯಲ್ಲಿನ ಬರಹಗಳನ್ನು ಓದುವ ಮೂಲಕ ಓದುಗರು, ನಮ್ಮ ನಿಜವಾದ ಚರಿತ್ರೆ, ಪರಂಪರೆ, ಸಂಸ್ಕೃತಿ ಯಾವುದು ನಮ್ಮ ಸಮಾಜ ಯಾವ ದಿಕ್ಕಿಗೆ ಚಲಿಸುತ್ತಿದೆ ಅದು ಸಾಗಬೇಕಾಗಿರುವ ಮಾರ್ಗ ಯಾವುದು ಜಾತಿವಾದ, ಕೋಮುವಾದ, ಜನ ವಿರೋಧಿ ಧರ್ಮರಾಜ ಕಾರಣವನ್ನು ಬದಲಾಯಿಸುವ ಚಿಂತನೆ ಗಳಾವುವು ಸಂವಿಧಾನಬದ್ಧ ಪ್ರಜಾಪ್ರಭುತ್ವವಾದಿ ಮಾನವೀಯ ಸಮಾಜವನ್ನು ಕಟ್ಟುವಲ್ಲಿ, ಉಳಿಸಿಕೊಳ್ಳುವಲ್ಲಿ ನಾಗರಿಕರಾದ ನಮ್ಮ ನೈತಿಕ ಹೊಣೆಗಾರಿಕೆ ಏನು ಸ್ವಾತಂತ್ರ್ಯ ಸಮಾನತೆ, ಸಹೋದರತೆ, ಸಾಮಾಜಿಕ ನ್ಯಾಯದಂತಹ ಮೌಲ್ಯಗಳನ್ನು ಒಳಗೊಂಡಿರುವ ಭಾರತ ಸಂವಿಧಾನ ಹಾಗೂ ಪ್ರಜಾಪ್ರಭುತ್ವವನ್ನು ಕಾಪಾಡಿಕೊಳ್ಳುವುದು ಭಾರತೀಯರಾದ ನಮ್ಮೆಲ್ಲರ ಜವಾಬ್ದಾರಿಯಲ್ಲವೆ ಎಂಬಿತ್ಯಾದಿ ಆತ್ಮಾವಲೋಕನದ ಪ್ರಶ್ನೆಗಳನ್ನು ಕೇಳಿಕೊಳ್ಳುವಂತಾಗಲಿ ಎಂದು ಬಯಸುತ್ತೇನೆ. ಮಿತ್ರರಾದ ಹಾರೋಹಳ್ಳಿ ರವೀಂದ್ರ ಅವರು, ಓದುಗರನ್ನು ಚಿಂತನಾಶೀಲರನ್ನಾಗಿಸುವಂಹ ಈ ಬಗೆಯ ಕೃತಿಗಳನ್ನು ಇನ್ನಷ್ಟು ಪ್ರಕಟಿಸುವಂತಾಗಲಿ. ಶುಭಾಶಯಗಳು.

**ಲೇಖಕರು ಉಲ್ಲೇಖಿಸಿರುವ ''ನೀನು ಸಾಮಾಜಿಕ ಸ್ವರೂಪವನ್ನು ಬದಲು ಮಾಡದೆ ಹೋದರೆ ನೀವೇನೂ ಪ್ರಗತಿಯನ್ನೂ ಸಾಧಿಸಲಾರಿರಿ ಎಂದು ನಿಸ್ಸಂಶಯವಾಗಿ ಹೇಳುತ್ತೇನೆ. ರಕ್ಷಣೆಗಾಗಲಿ ದಾಳಿಗಾಗಲಿ ನೀವು ಜನಬಲವನ್ನು ಸಿದ್ಧಗೊಳಿಸಲಾರಿರಿ. ಜಾತಿಯ ಅಡಿಪಾಯದ ಮೇಲೆ ನೀವೇನನ್ನೂ ಕಟ್ಟಲಾರಿರಿ, ರಾಷ್ಟ್ರವನ್ನು ನಿರ್ಮಿಸಲಾರಿರಿ, ನೀತಿಯನ್ನು ಮೌಲೀಕರಣಗೊಳಿಸಲಾರಿರಿ. ಜಾತಿಯ ಆಧಾರದ ಮೇಲೆ ಕಟ್ಟಿದುದು ಏನೇ ಆಗಿರಲಿ ಅದು ಬಿರುಕು ಬಿಡುವುದು, ಅಖಂಡವಾಗಿ ಉಳಿಯಲಾರದು'' ಎಂಬ ಬಾಬಾಸಾಹೇಬ್ ಅಂಬೇಡ್ಕರ್ ಅವರ ಮಾತು ನಮ್ಮೆಲ್ಲರ ಅರಿವಿನ ಎಚ್ಚರವಾಗಲಿ.**

## ಪ್ರಪ್ರಥಮಗಳ ಸರದಾರ - ಸಾವರಕರ

ಶ್ರೀ. ಮೋಹನ ಗೌಡ
• ಉದಯವಾಹಿನಿ, ವಿಶೇಷ

ದೇಶಭಕ್ತಿಯ ಅಪರಾಧ'ಕ್ಕಾಗಿ ಭಾರತೀಯ ಮಾಹಾವಿದ್ಯಾಲಯವೊಂದರ ವಸತಿಗೃಹದಿಂದ ಹೊರದೂಡಲ್ಪಟ್ಟ ಪ್ರಪ್ರಥಮ ವಿದ್ಯಾರ್ಥಿ.

ಭಾರತದಲ್ಲಿ ವಿದೇಶಿ ಬಟ್ಟೆಗಳಿಗೆ ಬೆಂಕಿ ಇಟ್ಟು ಹೋಳಿ ಆಚರಿಸಿದ ಪ್ರಪ್ರಥಮ ಸ್ವದೇಶಾಭಿಮಾನಿ.

'ಸ್ವರಾಜ್ಯ' ಎಂದು ಹೇಳುವುದೇ ಮಹಾಪರಾಧವಾಗಿದ್ದ ಕಾಲದಲ್ಲಿ ಸಂಪೂರ್ಣ ಸ್ವರಾಜ್ಯವೇ ಭಾರತದ ಲಕ್ಷ್ಯ ಎಂದು ಹೇಳಿದ ಪ್ರಪ್ರಥಮ ದೇಶಾಭಿಮಾನಿ.

ದಾಸ್ಯ ರಕ್ಕಸನ ಎದೆ ಮೆಟ್ಟಲು ಪ್ರಯತ್ನಿಸಿದ್ದಕ್ಕಾಗಿ ತಾನು ಗಳಿಸಿದ ಬಿ.ಎ. ಪದವಿಯನ್ನು ಕಳೆದುಕೊಂಡ ಪ್ರಪ್ರಥಮ ಭಾರತೀಯ ವಿದ್ಯಾರ್ಥಿ.

ಕ್ರಾಂತಿಕಾರಿ ಚಟುವಟಿಕೆಗೆ ತೊಡಗಿದ್ದಕ್ಕಾಗಿ ಬ್ರಿಟಿಷರಿಂದ ಬ್ಯಾರಿಸ್ಟರ್ ಪದವಿ ನಿರಾಕರಿಸಲ್ಪಟ್ಟ ಮೊಟ್ಟಮೊದಲ ಬ್ಯಾರಿಸ್ಟರ್. ಹಿಂದುಸ್ಥಾನದ ಸ್ವಾತಂತ್ರ್ಯದ ಪ್ರಶ್ನೆ ವಿದೇಶಗಳಲ್ಲೂ ಮಹತ್ವಗಳಿಸುವಂತೆ ಮಾಡಿದ ಪ್ರಪ್ರಥಮ ಭಾರತೀಯ.

ಪ್ರಕಟಣೆಗೆ ಮೊದಲೇ ಎರಡು ರಾಷ್ಟ್ರಗಳಲ್ಲಿ ನಿಷೇಧಿಸಲ್ಪಟ್ಟ ಗ್ರಂಥ (1857 ಪ್ರಥಮ ಸ್ವಾತಂತ್ರ್ಯ ಸಂಗ್ರಾಮ, ಬರೆದದ್ದು 24ರ ಹರೆಯದಲ್ಲಿ) ರಚಿಸಿದ ಜಗತ್ತಿನ ಪ್ರಪ್ರಥಮ ಲೇಖಕ.

ಬ್ರಿಟಿಷರ ನ್ಯಾಯಾಲಯವನ್ನು ತಾನು ಪುರಸ್ಕರಿಸುವುದಿಲ್ಲವೆಂದು ಸಾರಿದ ಪ್ರಪ್ರಥಮ ರಾಜಕೀಯ ಕೈದಿ.

ಜಗತ್ತಿನ ರಾಜಕೀಯ ಇತಿಹಾಸ ದಲ್ಲಿಯೇ ಹೇಗ್ ಅಂತರ್‌ರಾಷ್ಟ್ರೀಯ ನ್ಯಾಯಾಲಯದೆದುರು ತನ್ನ ಬಗ್ಗೆ ಮೊಕದ್ದಮೆ ನಡೆಯುವಂತೆ ಮಾಡಿದ ಪ್ರಪ್ರಥಮ ರಾಜಕೀಯ ಕೈದಿ.

ವಿಶ್ವ ರಾಜಕೀಯ ಇತಿಹಾಸದಲ್ಲಿ 50 ವರ್ಷಗಳ ಕರಿನೀರಿನ ಶಿಕ್ಷೆಗೆ ಗುರಿಯಾದ ಪ್ರಪ್ರಥಮ ರಾಜಕೀಯ ಕೈದಿ.

ಬರೆಯಲು ಬೇಕಾದ ಕಾಗದ, ಪೆನ್ನು ಇತ್ಯಾದಿ ಸೌಲಭ್ಯಗಳೊಂದೂ ಇಲ್ಲದಿದ್ದರೂ ಬರವಣಿಗೆಯನ್ನು ನಿಷೇಧಿಸಲಾಗಿದ್ದರೂ, ಜೈಲಿನ ಗೋಡೆಗಳ ಮೇಲೆ ಮೊಳೆಯಿಂದಲೇ 10 ಸಾವಿರ ಸಾಲುಗಳ ಕಾವ್ಯ ರಚಿಸಿ ಕಂಠಪಾಠ ಮಾಡಿ, 14 ವರ್ಷಗಳ ಸೆರೆವಾಸದಿಂದ ಸುರಕ್ಷಿತವಾಗಿ ಹೊರಗೆ ಬಂದ ನಂತರ ಮತ್ತೆ ಅದನ್ನು ಬರೆದು ದೇಶಕ್ಕೆ ಅರ್ಪಿಸಿದ ವಿಶ್ವದ ಪ್ರಪ್ರಥಮ ಮಹಾಕವಿ.




**ನನ್ನ ಹತ್ತಿರ ಭಯಂಕರ ಆಯುಧಗಳಿವೆ**

**ಲಂಡನ್ ನಗರದಲ್ಲಿ ಒಂದು ದಿನ ಗುಪ್ತಚರರು ಸ್ವಾ. ಸಾವರಕರರನ್ನು ದಾರಿ ಮಧ್ಯದಲ್ಲಿ ನಿಲ್ಲಿಸಿ ಕೇಳಿದರು, ಮಹಾಶಯರೇ, ಕ್ಷಮಿಸಿರಿ. ನಮಗೆ ನಿಮ್ಮ ಬಗ್ಗೆ ಸಂಶಯವಿದೆ. ನಿಮ್ಮ ಹತ್ತಿರ ಘಾತಕ ಆಯುಧಗಳಿವೆ ಎಂದು ನಿಶ್ಚಿತ ಸುಳಿವು ಸಿಕ್ಕಿದೆ. ಆದ್ದರಿಂದ ನಿಮ್ಮ ತಪಾಸಣೆಯನ್ನು ಮಾಡುತ್ತೇವೆ. ಸಾವರಕರರು ನಿಂತರು, ಗುಪ್ತಚರರು ತಪಾಸಣೆ ಮಾಡಿದರು. ಆದರೆ ಏನೂ ಸಿಗಲಿಲ್ಲ. ಆಗ ಗುಪ್ತಚರರ ಪ್ರಮುಖ ಅಧಿಕಾರಿಗಳು ಕೇಳಿದರು, ಕ್ಷಮಿಸಿರಿ ತಪ್ಪು ಸುದ್ದಿಯಿಂದಾಗಿ ನಿಮಗೆ ತೊಂದರೆ ನೀಡಿದೆವು. ಆಗ ಸಾವರಕರರು ಹೇಳಿದರು, ನಿಮಗೆ ಸಿಕ್ಕ ಸುಳಿವು ತಪ್ಪಲ್ಲ. ನನ್ನ ಬಳಿ ಘಾತಕ ಆಯುಧವಿದೆ. ಜೇಬಿನಲ್ಲಿದ್ದ ಪೆನ್ನನ್ನು ತೋರಿಸಿ ಹೇಳಿದರು, ನೋಡಿ ಇದೇ ಆ ಆಯುಧ, ಇದರಿಂದ ಹೊರ ಬರುವ ಒಂದೊಂದು ಶಬ್ದ ಯುವಕರಿಗೆ ಅನ್ಯಾಯದ ವಿರುದ್ಧ ಹೋರಾಡುವ ಪ್ರೇರಣೆಯನ್ನು ನೀಡುತ್ತದೆ. ಈ ಶಬ್ದಗಳಿಂದ ದೇಶಭಕ್ತರ ರಕ್ತ ಕುದಿಯುತ್ತದೆ ಮತ್ತು ಅವರು ತಮ್ಮ ಪ್ರಾಣವನ್ನು ಒತ್ತೆ ಇಟ್ಟು ಹೋರಾಡಲು ಸಿದ್ಧರಾಗುತ್ತಾರೆ.**

## ಸ್ಥೂಲಕಾಯತೆಗೆ ಕಾರಣವೇನು, ಇದನ್ನು ತಡೆಯುವುದು ಹೇಗೆ


• ಉದಯವಾಹಿನಿ, ಬೆಂಗಳೂರು



ಪ್ರತಿ ವರ್ಷ ಮಾರ್ಚ್ 4 ರಂದು ವಿಶ್ವ ಬೊಜ್ಜು ದಿನವನ್ನು ಆಚರಿಸಲಾಗುತ್ತದೆ.

ಬೊಜ್ಜು ವಿಶ್ವಾದ್ಯಂತ ಅತಿದೊಡ್ಡ ಆರೋಗ್ಯ ಸವಾಲುಗಳಲ್ಲಿ ಒಂದಾಗಿದೆ, ಇದು ವಿವಿಧ ವಯಸ್ಸಿನ ಲಕ್ಷಾಂತರ ಜನರ ಮೇಲೆ ಪರಿಣಾಮ ಬೀರುತ್ತದೆ. ವಿಶ್ವ ಬೊಜ್ಜು ದಿನವು ಸ್ಥೂಲಕಾಯತೆಯ ಹೆಚ್ಚುತ್ತಿರುವ ಜಾಗತಿಕ ಆರೋಗ್ಯ ಸವಾಲಿನ ಬಗ್ಗೆ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ. ಭಾರತದಲ್ಲಿಯೂ ಸ್ಥೂಲಕಾಯ ಅಥವಾ ಬೊಜ್ಜಿನ ಸಮಸ್ಯೆ ಆತಂಕಕಾರಿ ಪ್ರಮಾಣದಲ್ಲಿ ಏರಿಕೆಯಾಗುತ್ತಿದೆ. ವಿಶ್ವ ಬೊಜ್ಜು ದಿನವು ಬೊಜ್ಜು, ಅದರ ಕಾರಣಗಳು ಮತ್ತು ಉತ್ತಮ ಚಿಕಿತ್ಸೆ ಮತ್ತು ತಡೆಗಟ್ಟುವ ತಂತ್ರಗಳ ಅಗತ್ಯದ ಬಗ್ಗೆ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿದೆ. ಬೊಜ್ಜು ಕೇವಲ ತೂಕ ಹೆಚ್ಚಳಕ್ಕೆ ಸಂಬಂಧಿಸಿದ್ದಲ್ಲ - ಇದು ಜೀವನಶೈಲಿ, ಪರಿಸರ ಮತ್ತು ಮಾನಸಿಕ ಆರೋಗ್ಯ ಸೇರಿದಂತೆ ವಿವಿಧ ಅಂಶಗಳಿಂದ ಪ್ರಭಾವಿತವಾದ ಸಂಕೀರ್ಣ ಆರೋಗ್ಯ ಸ್ಥಿತಿಯಾಗಿದೆ. ಸ್ಥೂಲಕಾಯತೆಯ ಕಾರಣಗಳು ಮತ್ತು ಪರಿಣಾಮಗಳನ್ನು ಪರಿಹರಿಸಲು ಶಿಕ್ಷಣ, ಮತ್ತು ನೀತಿ ಬದಲಾವಣೆಗಳಲ್ಲಿ ಸಾಮೂಹಿಕ ಪ್ರಯತ್ನಗಳ ಅಗತ್ಯವನ್ನು ಈ ದಿನ ಒತ್ತಿಹೇಳುತ್ತದೆ.

**ವಿಶ್ವ ಬೊಜ್ಜು ದಿನ ಎಂದರೇನು:** ವಿಶ್ವ ಬೊಜ್ಜು ದಿನವು ವರ್ಲ್ಡ್ ಒಬೆಸಿಟಿ ಫೆಡರೇಶನ್ ವಿಶ್ವದಾದ್ಯಂತದ ಆರೋಗ್ಯ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸುವ ಜಾಗತಿಕ ಜಾಗೃತಿ ದಿನವಾಗಿದೆ. 2015 ರಲ್ಲಿ ಮೊದಲ ಬಾರಿಗೆ ಈ ದಿನವನ್ನು ಆಚರಿಸುವ ಮೂಲಕ ಶಿಕ್ಷಣ, ವಕಾಲತ್ತು ಮತ್ತು ನೀತಿ ಬದಲಾವಣೆಗಳ ಮೂಲಕ ಬೊಜ್ಜು ಸಮಸ್ಯೆಯನ್ನು ನಿಭಾಯಿಸುವ ತುರ್ತು ಅಗತ್ಯವನ್ನು ಎತ್ತಿ ತೋರಿಸಿತು. ಇದು ವ್ಯಕ್ತಿಗಳು ತಮ್ಮ ತೂಕವನ್ನು ನಿರ್ವಹಿಸಲು ಮತ್ತು ಆರೋಗ್ಯಕರ ಜೀವನಶೈಲಿಯನ್ನು ಪ್ರೋತ್ಸಾಹಿಸಲು ಸಹಾಯ ಮಾಡುವ ಪ್ರಾಯೋಗಿಕ ಪರಿಹಾರಗಳನ್ನು ಉತ್ತೇಜಿಸುತ್ತದೆ.



ಪ್ರತಿ ವರ್ಷ, ವಿಶ್ವ ಬೊಜ್ಜು ದಿನವು ಬೊಜ್ಜು ತಡೆಗಟ್ಟುವಿಕೆ ಮತ್ತು ನಿರ್ವಹಣೆಯ ವಿವಿಧ ಅಂಶಗಳ ಮೇಲೆ ಗಮನ ಹರಿಸುತ್ತದೆ. 2025 ರ ವಿಶ್ವ ಬೊಜ್ಜು ದಿನದ ಥೀಮ್- ಸ್ಥೂಲಕಾಯತೆಯನ್ನು ಸಾರ್ವಜನಿಕ ಆರೋಗ್ಯ ಆದ್ಯತೆಯಾಗಿ ಪರಿಹರಿಸಲು ವ್ಯಕ್ತಿಗಳು, ಆರೋಗ್ಯ ವೃತ್ತಿಪರರು ಮತ್ತು ನೀತಿ ನಿರೂಪಕರನ್ನು ಒಟ್ಟುಗೂಡಿಸುವ ಸಾಮೂಹಿಕ ಕ್ರಮಕ್ಕೆ ಒತ್ತು ನೀಡುವುದು. ದೈಹಿಕ ಆರೋಗ್ಯದ ಹೊರತಾಗಿ, ಬೊಜ್ಜು ಮಾನಸಿಕ ಯೋಗಕ್ಷೇಮದ ಮೇಲೂ ಪರಿಣಾಮ ಬೀರುತ್ತದೆ. ಸ್ಥೂಲಕಾಯತೆಯೊಂದಿಗೆ ಹೋರಾಡುತ್ತಿರುವ ಅನೇಕ ಜನರು ಬಾಡಿ ಶೇಮಿಂಗ್, ಕಡಿಮೆ ಆತ್ಮವಿಶ್ವಾಸ ಮತ್ತು ಖಿನ್ನತೆಯನ್ನು ಎದುರಿಸುತ್ತಾರೆ. ಆದ್ದರಿಂದ ಜಾಗೃತಿ ಮೂಡಿಸುವುದು ಮತ್ತು ಈ ಸಮಸ್ಯೆಯಿಂದ ಬಳಲುತ್ತಿರುವವರಿಗೆ ಬೆಂಬಲವನ್ನು ಒದಗಿಸುವುದು ಮುಖ್ಯವಾಗುತ್ತದೆ.

**ಬೊಜ್ಜು ಕೇವಲ ತೂಕ ಹೆಚ್ಚಳಕ್ಕೆ**

**ಬೊಜ್ಜಿನಿಂದ ಏಲೆಲ್ಲಾ ಸಮಸ್ಯೆಗಳು ಎದುರಾಗುತ್ತವೆ? ಬೊಜ್ಜು ಹಲವಾರು ಸಾಂಕ್ರಾಮಿಕವಲ್ಲದ ರೋಗಗಳೊಂದಿಗೆ ಸಂಬಂಧ ಹೊಂದಿದೆ, ಅವುಗಳೆಂದರೆ:**

- **ಟೈಪ್ 2 ಮಧುಮೇಹ**
- **ಅಧಿಕ ರಕ್ತದೊತ್ತಡ ಮತ್ತು ಹೃದ್ರೋಗ**
- **ಪಾರ್ಶ್ವವಾಯು**
- **ಕೆಲವು ರೀತಿಯ ಕ್ಯಾನ್ಸರ್**
- **ಕೊಬ್ಬಿನ ಯಕೃತ್ತಿನ ಕಾಯಿಲೆ**
- **ಕೀಲು ಸಮಸ್ಯೆಗಳು ಮತ್ತು ಸಂಧಿವಾತ**

**ಸ್ಥೂಲಕಾಯತೆಯ ಮೂಲ ಕಾರಣಗಳು:** ಬೊಜ್ಜಿಗೆ ಹೆಚ್ಚು ತಿನ್ನುವುದು ಅಥವಾ ಸಾಕಷ್ಟು ವ್ಯಾಯಾಮ ಮಾಡದಿರುವುದು ಮಾತ್ರ ಕಾರಣವಲ್ಲ.

ಇದಕ್ಕೆ ಅನೇಕ ಕಾರಣಗಳಿವೆ, ಅವುಗಳೆಂದರೆ ಆಹಾರ ಪದ್ಧತಿ- ಸಂಸ್ಕರಿಸಿದ ಆಹಾರಗಳು, ಸಕ್ಕರೆ ಪಾನೀಯಗಳು ಮತ್ತು ಅನಾರೋಗ್ಯಕರ ಕೊಬ್ಬುಗಳ ಹೆಚ್ಚಿನ ಸೇವನೆ. ಜೀವನಶೈಲಿ ಆಯ್ಕೆಗಳು- ಹೆಚ್ಚು ಚಟುವಟಿಕೆ ಇಲ್ಲದ ಉದ್ಯೋಗಗಳು ಮತ್ತು ಹೆಚ್ಚು ಸಮಯ ಲ್ಯಾಪ್ ಟಾಪ್ ಅಥವಾ ಮೊಬೈಲ್ ನೋಡಿಕೊಂಡು ಇರುವುದರಿಂದ ದೈಹಿಕ ಚಟುವಟಿಕೆಯ ಕೊರತೆ. ಜೆನೆಟಿಕ್ಸ್- ಕೆಲವರಿಗೆ ಆನುವಂಶಿಕವಾಗಿ ಬೊಜ್ಜಿನ ಸಮಸ್ಯೆ ಇರುತ್ತದೆ. ಮಾನಸಿಕ ಅಂಶಗಳು - ಭಾವನಾತ್ಮಕ ಒತ್ತಡ, ಆತಂಕ ಮತ್ತು ಖಿನ್ನತೆಯು ಅತಿಯಾಗಿ ತಿನ್ನಲು ಕಾರಣ ವಾಗಬಹುದು.

**ವರ್ಕೌಟ್- ವ್ಯಾಯಾಮ, ಯೋಗ, ನಡಿಗೆಯಂತಹ ದೈಹಿಕ ಚಟುವಟಿಕೆಯ ಅಭ್ಯಾಸಗಳನ್ನು ನಿಮ್ಮ ದಿನಚರಿಯಲ್ಲಿ ಸೇರಿಸಿ. ದೇಹ ದಂಡಿಸುವ ಜೊತೆಗೆ ನಾವು ಸೇವಿಸುವ ಆಹಾರದ ಮೇಲೆ ಗಮನ ಹರಿಸಬೇಕು. ಹೆಚ್ಚು ಕೊಬ್ಬಿನಾಂಶವಿರುವ ಆಹಾರಗಳನ್ನು ಕಡಿಮೆ ಸೇವಿಸಿ, ಅಥವಾ ಸೇವಿಸುವುದನ್ನು ನಿಲ್ಲಿಸಿ. ಎಣ್ಣೆಯಲ್ಲಿ ಕರಿದ ಆಹಾರಗಳನ್ನು ತಪ್ಪಿಸಿ. ಅದರ ಬದಲು ತರಕಾರಿ-ಹಣ್ಣುಗಳನ್ನು ಸೇವಿಸಿ. ಫಾಸ್ಟ್ ಫುಡ್ ಸೇವನೆಯನ್ನು ನಿಲ್ಲಿಸಿ.**

## ಭಾರತ ಮತ್ತು ಚೀನಾ ದೇಶದ ಶೈಕ್ಷಣಿಕ ವ್ಯವಸ್ಥೆ ಬಗ್ಗೆ ಸಂವಾದ

• ಉದಯವಾಹಿನಿ ಅಥಣಿ

ಜಾಧವಜಿ ಶಿಕ್ಷಣ ಸಂಸ್ಥೆ ಹಾಗೂ ಗಾಂಧಿ ಗ್ರಾಮೀಣ ಗುರುಕುಲ ಇವುಗಳ ಸಹಯೋಗದಲ್ಲಿ ಭಾರತ ಹಾಗೂ ಚೀನಾ ದೇಶದ ಶೈಕ್ಷಣಿಕ ವ್ಯವಸ್ಥೆ ಕುರಿತು ಉಪನ್ಯಾಸಕರ ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ಗೋಷ್ಠಿ ಕಾರ್ಯಕ್ರಮವನ್ನು ದಿ. 06 ರಂದು ಸಾಯಂಕಾಲ 4:30ಕ್ಕೆ ಡಾ. ಆರ್ ಎಚ್ ಕುಲಕರ್ಣಿ ಸಭಾ ಭವನದಲ್ಲಿ ಜರುಗಲಿದೆ ಎಂದು ಜಾದವಜಿ ಶಿಕ್ಷಣ ಸಂಸ್ಥೆಯ ಕಾರ್ಯಧ್ಯಕ್ಷ ಡಾ. ರಾಮ ಕುಲಕರ್ಣಿ ತಿಳಿಸಿದರು.

ಅವರು ಇಲ್ಲಿನ ಕೆ. ಎ. ಲೋಕಾಪುರ ಮಹಾವಿದ್ಯಾಲಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ನಮ್ಮಲ್ಲಿನ ವಿದ್ಯಾರ್ಥಿ ಮತ್ತು ಶಿಕ್ಷಕರಿಂದ ಚೀನಾದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ಜೊತೆ ಸಂವಾದ ಕಾರ್ಯಕ್ರಮದಲ್ಲಿ ಚೀನಾದ ರಾಯಭಾರಿಯಾಗಿ ಕಾಂಗ್ ಕ್ಷಿಯಾನಹುವಾ, ಗಾಂಧಿ ಗ್ರಾಮೀಣ ಗುರುಕುಲದ ಸಂಸ್ಥಾಪಕ ಸುಧೀಂದ್ರ ಕುಲಕರ್ಣಿ ಆಗಮಿಸಲಿದ್ದು, ತಾಲೂಕಿನ ವಿವಿಧ ಪದವಿಪೂರ್ವ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದರ ಸದುಪಯೋಗ


ಉದಯವಾಹಿನಿ ಚಿತ್ರ

ಪಡೆದುಕೊಳ್ಳಬೇಕೆಂದು ಕರೆ ನೀಡಿದರು. ಕೆ ಎ ಲೋಕಾಪುರ ಮಹಾವಿದ್ಯಾಲಯದ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಅರವಿಂದರಾವ ದೇಶಪಾಂಡೆ ಮಾತನಾಡಿ ಭಾರತ ಮತ್ತು ಚೀನಾ ನೆರೆಹೊರೆಯ ರಾಷ್ಟ್ರಗಳಾಗಿದ್ದು, ಸಂಬಂಧಗಳು ಉತ್ತಮ ವಾಗಿರಬೇಕು ಎಂಬ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ.

ದೇಶದ ಅನೇಕ ವಿದ್ಯಾರ್ಥಿಗಳು ವಿದ್ಯಾರ್ಜನೆಗಾಗಿ ಚೀನಾ ಸೇರಿದಂತೆ ಬೇರೆ ಬೇರೆ ದೇಶಗಳಿಗೆ ಹೋಗುತ್ತಾರೆ. ಅಲ್ಲಿನ ಶೈಕ್ಷಣಿಕ ವ್ಯವಸ್ಥೆ ಮತ್ತು ನಮ್ಮ ಭಾರತದಲ್ಲಿನ ಶೈಕ್ಷಣಿಕ ವ್ಯವಸ್ಥೆ ಕುರಿತು ವಿಚಾರ ವಿನಿಮಯ ಮಾಡಿಕೊಳ್ಳಲು ಈ ಸಂವಾದ ಗೋಷ್ಠಿಯನ್ನು ಏರ್ಪಡಿಸಲಾಗಿದೆ ಎಂದು ಹೇಳಿದರು.

## ಎಸ್‌ಸಿ,ಎಸ್ಟಿ ಹಣ ಗ್ಯಾರಂಟಿಗೆ ಬಳಕೆ ಖಂಡಿಸಿ ಬಿಜೆಪಿ ಬೃಹತ್ ಪ್ರತಿಭಟನೆ

• ಉದಯವಾಹಿನಿ ವಿಜಯಪುರ

ಪರಿಶಿಷ್ಟ ಜಾತಿಗಳ ವಿಶೇಷ ಘಟಕ (ಎಸ್.ಸಿ.ಪಿ) ಹಾಗೂ ಪರಿಶಿಷ್ಟ ಪಂಗಡಗಳ ವಿಶೇಷ ಘಟಕ ಯೋಜನೆ (ಟಿ.ಎಸ್.ಪಿ)ಗಳ ಮೀಸಲು ಹಣವನ್ನು ಗ್ಯಾರಂಟಿಗೆ ಬಳಸಿಕೊಳ್ಳುವ ಮೂಲಕ ದಲಿತ ಸಮುದಾಯದವರಿಗೆ ಅನ್ಯಾಯ ಮಾಡಿರುವ ಕಾಂಗ್ರೆಸ್ ಸರ್ಕಾರದ ದಲಿತ ವಿರೋಧಿ ಧೋರಣೆ ಖಂಡಿಸಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಸೋಮವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾ ಮೆರವಣಿಗೆ ಬಸವೇಶ್ವರ ವೃತ್ತ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಮಾರ್ಗವಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸಿ, ಕೆಲಕಾಲ ಪ್ರತಿಭಟನೆ ನಡೆಸಿ, ಜಿಲ್ಲಾಡಳಿತಕ್ಕೆ ಮನವಿ ಪತ್ರ ಸಲ್ಲಿಸಲಾಯಿತು.

ಮೆರವಣಿಗೆಯುದ್ದಕ್ಕೂ ದಲಿತ ವಿರೋಧಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆಗಳು


ಉದಯವಾಹಿನಿ ಚಿತ್ರ

ಮೊಳಗಿದವು. ಕಲಬುರಗಿ ಮಾಜಿ ಸಂಸದ ಉಮೇಶ ಜಾಧವ ಮಾತನಾಡಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಬಲೀಕರಣ, ಶಿಕ್ಷಣ, ಉದ್ಯೋಗ, ಸ್ವಾವಲಂಬನೆ ಮೂಲಕ ಪ್ರತಿ ವ್ಯಕ್ತಿ, ಕುಟುಂಬವನ್ನು ಸಶಕ್ತಗೊಳಿಸಲು, ದಲಿತ ಕೇರಿ, ಕಾಲೊನಿಗಳಿಗೆ ಆದಿವಾಸಿ ಮೂಲಭೂತ ಸೌಕರ್ಯ ಒದಗಿಸಲು ಹಾಗೂ ಭೂ ಒಡೆತನ, ಭೂಮಿಗೆ ನೀರು, ಸ್ವಉದ್ಯೋಗ, ಸ್ವಂತ ವಾಹನ, ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ, ವಸತಿ ಶಾಲೆ, ವಸತಿ ನಿಲಯ ನಿರ್ಮಾಣದ ಮಹತ್ತರ ಉದ್ದೇಶದಿಂದ ಆರಂಭಗೊಂಡ ಪರಿಶಿಷ್ಟ ಜಾತಿಗಳ ವಿಶೇಷ ಘಟಕ ಹಾಗೂ ಪರಿಶಿಷ್ಟ ಪಂಗಡಗಳ ವಿಶೇಷ ಘಟಕ ಯೋಜನೆಗಳ ಮೀಸಲು ಅನುದಾನ ಗ್ಯಾರಂಟಿಗೆ ಬಳಸಿರುವ ಕಾಂಗ್ರೆಸ್ ಸರ್ಕಾರದ ಧೋರಣೆ ಖಂಡನೀಯ ಎಂದು ಹೇಳಿದರು.

**2023 ರಲ್ಲಿ ಎಸ್.ಸಿ.ಪಿ ಯಿಂದ ರೂ.7,713.15 ಸಾವಿರ ಕೋಟಿ, ಟಿ.ಎಸ್.ಪಿ ಯಿಂದ ರೂ.3,430.85 ಸಾವಿರ ಕೋಟಿ ಸೇರಿ ರೂ.11, ಅಲ್ಪಸಂಖ್ಯಾತರು ಒಳಗೊಂಡಿದ್ದಾರೆ. ಅವರೆಲ್ಲರಿಗೂ ದಲಿತರಿಗೆ ಮೀಸಲಿಟ್ಟ ಅನುದಾನ ಕೊಡುವುದು ನ್ಯಾಯವಲ್ಲ. ಬಜೆಟ್ ದಲ್ಲಿ ಅಲ್ಪಸಂಖ್ಯಾತರಿಗೆ ಸಾವಿರಾರು ಕೋಟಿ ಮೀಸಲಿಡುವ ಕಾಂಗ್ರೆಸ್ ಸರ್ಕಾರ, ಆ ಹಣವನ್ನೇಕೆ ಗ್ಯಾರಂಟಿಗೆ ಬಳಸುವುದಿಲ್ಲ ಎಂದು ಪ್ರಶ್ನಿಸಿದರು.**

## ಮಿನಿ ನ್ಯೂಸ್

### ಟ್ರಕ್ ಅನ್ನು ಓವರ್‌ಟೇಕ್ ಮಾಡುವ ಭರದಲ್ಲಿ ಆಟೋ ರಿಕ್ಷಾ ಪಲ್ಟಿ

• ಉದಯವಾಹಿನಿ ಉಡುಪಿ

ಆಟೋ ರಿಕ್ಷಾವೊಂದು ಟ್ರಕ್ ಅನ್ನು ಓವರ್‌ಟೇಕ್ ಮಾಡಲು ಪ್ರಯತ್ನಿಸುವ ವೇಳೆ ಪಲ್ಟಿಯಾಗಿ ರಸ್ತೆ ಡಿವೈಡರ್ ಗೆ ಡಿಕ್ಕಿ ಹೊಡೆದ ಘಟನೆ ಉಡುಪಿಯ ಗುಂಡಿಬೈಲ್ ರಸ್ತೆಯ ಬಳಿ ಸಂಭವಿಸಿದೆ.

ಟ್ರಕ್ ಮಣಿಪಾಲದಿಂದ ಗುಂಡಿಬೈಲ್ ರಸ್ತೆಯ ಮೂಲಕ ಸಂತೆಕಟ್ಟೆಯ ಕಡೆಗೆ ಸಾಗುತ್ತಿತ್ತು. ಇದೇ ವೇಳೆ ಉಡುಪಿಯಿಂದ ಹಾಲಾಡಿಯ ಕಡೆಗೆ ಹೋಗುತ್ತಿದ್ದ ಆಟೋ ರಿಕ್ಷಾ ಟ್ರಕ್ ಅನ್ನು ಓವರ್‌ಟೇಕ್ ಮಾಡಲು ಪ್ರಯತ್ನಿಸಿತು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ ಆಟೋ ರಿಕ್ಷಾ ಪಲ್ಟಿಯಾಗಿ ರಸ್ತೆ ಡಿವೈಡರ್ ಗೆ ಡಿಕ್ಕಿ ಹೊಡೆದಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಅದೃಷ್ಟವಶಾತ್, ಆಟೋ ರಿಕ್ಷಾ ಚಾಲಕನಿಗೆ ಯಾವುದೇ ಗಾಯಗಳಾಗದೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

### ಆಟೋ ರಿಕ್ಷಾ-ಕೆಎಸ್ ಆರ್‌ಟಿಸಿಬಸ್ ನಡುವೆ ಭೀಕರ ಅಪಘಾತ: ಇಬ್ಬರು ಮೃತ್ಯು

• ಉದಯವಾಹಿನಿ, ಪುತ್ತೂರು

ಕೆಎಸ್ ಆರ್ ಟಿಸಿ ಬಸ್ಸಿಗೆ ಆಟೋ ರಿಕ್ಷಾವೊಂದು ಡಿಕ್ಕಿ ಹೊಡೆದು ರಿಕ್ಷಾದಲ್ಲಿದ್ದ ಇಬ್ಬರು ಮೃತಪಟ್ಟ ಹಾಗೂ ಚಾಲಕ ಗಂಭೀರಗೊಂಡ ದಾರುಣ ಘಟನೆ ನಗರದ ಹೊರವಲಯದ ಮಂಜಲ್ಪಡ್ಪು ಎಂಬಲ್ಲಿನ ಮಾಣಿ-ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ.

ಮಂಗಳೂರಿನಿಂದ ಪುತ್ತೂರಿಗೆ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ಸಿಗೆ ಪುತ್ತೂರು ಕಡೆಯಿಂದ ಕಬಕ ಕಡೆಗೆ ಕೆದಂಬಾಡಿ ಗ್ರಾಮದ ಮಹಮ್ಮದ್ ಎಂಬವರು ಚಲಾಯಿಸಿಕೊಂಡು ಹೋಗುತ್ತಿದ್ದ ರಿಕ್ಷಾ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಆಟೋ ರಿಕ್ಷಾ ಪಲ್ಟಿಯಾಗಿದ್ದು, ಅದರಲ್ಲಿ ಪ್ರಯಾಣಿಸುತ್ತಿದ್ದ ರಿಕ್ಷಾ ಚಾಲಕ ಮಹಮ್ಮದ್ ಅವರ ಎರಡನೇ ಪತ್ನಿ ಜಮೀಲ(49) ಮತ್ತು ಆಕೆಯ ಪುತ್ರಿಯ ಮಗ ತಪ್ಸಿಬ್(5) ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ. ರಿಕ್ಷಾ ಚಾಲಕ ಮಹಮ್ಮದ್ ಗಂಭೀರ ಗಾಯಗೊಂಡಿದ್ದಾರೆ. ಘಟನೆಗೆ ಸಂಬಂಧಿಸಿ ಪುತ್ತೂರು ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕಲ್ಯಾಣ ಪಥಕ್ಕೆ ಕೆಕೆಆರ್‌ಡಿಬಿ ಸಂಪೂರ್ಣ ಸಹಕಾರ: ಡಾ.ಅಜಯ್ ಧರ್ಮಸಿಂಗ್

• ''ಕಲ್ಯಾಣ ಪಥ''ಯೋಜನೆಗೆ ಕೆಕೆಆರ್‌ಡಿಬಿಯಿಂದ 298. 50 ಕೋಟಿ ರೂ. ಮೊತ್ತದ ಅನುದಾನ ಬಿಡುಗಡೆ

• ಉದಯವಾಹಿನಿ ಕಲಬುರಗಿ

ರಾಜ್ಯ ಸರ್ಕಾರದ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿನ 38 ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 1,150 ಕೋಟಿ ರೂ. ಮೊತ್ತದಲ್ಲಿ ಗ್ರಾಮೀಣ ಭಾಗದಲ್ಲಿ ರಸ್ತೆ ನಿರ್ಮಾಣ ಮಾಡುವ ಕಲ್ಯಾಣ ಪಥ ಯೋಜನೆಗೆ ಕೆ.ಕೆ.ಆರ್.ಡಿ.ಬಿ ಈಗಾಗಲೇ 298. 50 ಕೋಟಿ ರುಪಾಯಿ ಮೊತ್ತದ ಅನುದಾನ ಬಿಡುಗಡೆ ಮಾಡಿದೆ ಎಂದು ಕೆಕೆಆರ್‌ಡಿಬಿ ಅಧ್ಯಕ್ಷ ಡಾ. ಅಜಯ್ ಧರ್ಮಸಿಂಗ್ ಹೇಳಿದ್ದಾರೆ.

ಇದೇ ಮಾ. 8 ರಂದು ಜೇವರ್ಗಿಯ ಧರಂಸಿಂಗ್ ಕಲ್ಯಾಣ ಮಂಟಪ ಮೈದಾನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್, ಎಐಸಿಸಿ ಅಧ್ಯಕ್ಷರಾದ ಡಾ. ಮಲ್ಲಿಕಾರ್ಜುನ ಖರ್ಗೆಯವರು ಈ ಐತಿಹಾಸಿಕ ಯೋಜನೆಗೆ ಚಾಲನೆ ನೀಡಲಿದ್ದಾರೆಂದು ಡಾ. ಅಜಯ್ ಸಿಂಗ್ ಜೇವರ್ಗಿಯಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡುತ್ತ ಹೇಳಿದರು.

ಮುಂಚೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಅನುದಾನವೂ ಇದಕ್ಕಿದೆ ಎಂದು ಹೇಳಲಾಗಿತ್ತು. ಆದರೀಗ ಕೆಕೆಆರ್‌ಡಿಬಿಯೇ 1000 ಕೋಟಿ ರೂ. ಹಣ ಬಿಡುಗಡೆ ಮಾಡಲಿದೆ. ಮೊದಲೆರಡು ವರ್ಷ 300 ಕೋಟಿ ರೂ. ಕೊನೆಯ ವರ್ಷ 400 ಕೋಟಿ ರೂ. ಮೊತ್ತದಂತೆ ಅನುದಾನ ನೀಡಲಾಗುತ್ತಿದೆ.


ಉದಯವಾಹಿನಿ ಚಿತ್ರ

ಮೊದಲು ರಸ್ತೆ ನಿರ್ಮಾಣ ಮಾಡಬೇಕು.

5 ವರ್ಷಗಳ ನಂತರ ರಿ ಕಾರ್ಪೇಟಿಂಗ್ ಮಾಡಿ ರಸ್ತೆ ನಿರ್ವಹಣೆಯನ್ನೂ ಮಾಡಬೇಕೆಂಬ ಷರತ್ತಿದೆ.

ಹೀಗಾಗಿ ರಸ್ತೆಗಳು ಗುಣಮಟ್ಟದ್ದಾಗಿರಲಿವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತ ಡಾ. ಅಜಯ್ ಸಿಂಗ್ ಹೇಳಿದರು.

ಕಲ್ಯಾಣ ಪಥ ಯೋಜನೆಗೆ ಚಾಲನೆ ನೀಡುತ್ತಿರುವ ಜೇವರ್ಗಿ, ಕಲಬುರಗಿ ರಸ್ತೆಯಲ್ಲಿರುವ ಡಾ. ಧರಂಸಿಂಗ್ ಸ್ಮರಣಾರ್ಥ ತಾಯಿ ಮತ್ತು ಆಸ್ಪತ್ರೆಯ ಮೈದಾನದಲ್ಲಿನ ಸಿದ್ದತೆಗಳನ್ನು ಪರಿಶೀಲಿಸಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪೂರ್ವಭಾವಿ ನಡೆಸಿದ ಡಾ. ಅಜಯ್ ಸಿಂಗ್ ಸಮಾರಂಭದ ಯಶಸ್ಸಿಗೆ ಎಲ್ಲರೂ ಸಹಕರಿಸಬೇಕು. ಯಾವುದೇ ಲೋಪವಾಗದಂತೆ ಸಮಾರಂಭ ನಡೆಯಬೇಕು ಎಂದು ತಾಕೀತು ಮಾಡಿದರು.

**ಐತಿಹಾಸಿಕ ಯೋಜನೆಗೆ ಚಾಲನೆ**

1, 150 ಕೋಟಿ ರು ಮೊತ್ತದ ಯೋಜನೆ, 38 ಮತಕ್ಷೇತ್ರ, 286 ರಸ್ತೆ ಕಾಮಗಾರಿಗಳನ್ನೊಳಗೊಂಡಿರುವ ಕೆಕೆಆರ್‌ಡಿಬಿ ಸಹಕಾರದ ಇದು ರಾಜ್ಯ ಮಟ್ಟದ ಕಾರ್ಯಕ್ರಮವಾಗಿರುವುದರಿಂದ ಮುಖ್ಯಮಂತ್ರಿಗಳ ಜೊತೆಗೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ರಾಜ್ಯಸಭೆ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಪ್ರದೇಶದ ಸಚಿವರು, ಶಾಸಕರು, ನಿಗಮ-ಮಂಡಳಿಗಳ ಅಧ್ಯಕ್ಷರು ಭಾಗಿಯಾಗುವುದರಿಂದ ಎಲ್ಲಾ ರೀತಿಯ ಅಗತ್ಯ ಪೂರ್ವಸಿದ್ಧತೆ ಜೊತೆಗೆ ಹೆಚ್ಚಿನ ಭದ್ರತೆ ವ್ಯವಸ್ಥೆ ಕಲ್ಪಿಸಬೇಕೆಂದರು. ಶಾಮಿಯಾನ ಹಾಕಿಸಬೇಕು.

ಸಾರ್ವಜನಿಕರಿಗೆ ಆಸನ, ಊಟ-ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಜನಪ್ರತಿನಿಧಿಗಳು, ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಬೃಹತ್ ವೇದಿಕೆ ನಿರ್ಮಿಸಬೇಕು. ಪ್ರತ್ಯೇಕ ಊಟೋಪಚಾರದ ವ್ಯವಸ್ಥೆ ಮಾಡಬೇಕು, ಸುಗಮ ಸಂಚಾರಕ್ಕೆ ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾ ಎಸ್ಪಿ ಅಡ್ಡೂರು ಶ್ರೀನಿವಾಸುಲು ಅವರಿಗೆ ಸೂಚಿಸಿದರು.

**ತಕ್ಕಮಟ್ಟಿನ ವ್ಯವಸ್ಥೆ ಕಲ್ಪಿಸಬೇಕು**

**ಕಾರ್ಯಕ್ರಮಕ್ಕೆ ಕೇವಲ 3 ದಿನ ಬಾಕಿ ಇದೆ. ಕಾರ್ಯಕ್ರಮ ನಡೆಯುವ ಸ್ಥಳವಾದ ಜೇವರ್ಗಿ ಹೊರವಲಯದ ತಾಯಿ-ಮಕ್ಕಳ ಅರೋಗ್ಯ ಆಸ್ಪತ್ರೆ ಆವರಣದ ಸ್ವಚ್ಚತೆ ತ್ವರಿತಗತಿಯಲ್ಲಿ ಮಾಡಿ, ಭದ್ರತೆ ನೋಡಿಕೊಂಡು ವಿವಿಐಪಿಗಳಿಗೆ, ಸಾರ್ವಜಜನಿಕರಿಗೆ ಎಲ್ಲರಿಗೂ ತಕ್ಕಮಟ್ಟಿನ ವ್ಯವಸ್ಥೆ ಕಲ್ಪಿಸಬೇಕು. ಅಂದು ಮಹಿಲಾ ದಿನವಾಗಿದ್ದರಿಂದ ಸಮಾರಂಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಇರುವಂತಾಗಬೇಕು. ಅದಕ್ಕಾಗಿ ಸ್ವಸಹಾಯ ಸಂಘಗಳು, ಆಶಾ ಕಾರ್ಯಕರ್ತೆಯರು , ಅಂಗನವಾಡಿ ಕಾರ್ಯಕರ್ತೆಯರು ಸೇರಿದಂತೆ ಕನಿಷ್ಠ 3 ರಿಂದ 4 ಸಾವಿರದಷ್ಟು ಮಹಿಳೆಯರು ಸಮರಂಭದಲ್ಲಿ ಸೇರುವಂತಾಗಬೇಕು. ಇದಕ್ಕೆಲ್ಲ ಸೂಕ್ತ ಸಿದ್ಧತೆ ಮಾಡಿಕೊಳ್ಳುವಂತೆ ತಾಲ್ಲೂಕು ತಹಶೀಲ್ದಾರ್ ಮಲ್ಲಣ್ಣ ಯಲಗೋಡ ಅವರಿಗೆ ಸೂಚಿಸಿದರು.**

**ರಸ್ತೆ ಸಂಪರ್ಕದ ಜೊತೆಗೇ ಕೆಕೆಆರ್‌ಡಿಬಿ ಅದಾಗಲೇ ಗೋಷಿಸಿರುವಂತೆ ಅಕ್ಷರ ಅವಿಷ್ಕಾರದಲ್ಲಿ ನೂರಾರು ಕೋಟಿ ವೆಚ್ಚ ಮಾಡುತ್ತಿದೆ. 857 ಕೋಟಿ ರು ನಲ್ಲಿ ಆರೋಗ್ ರಂಗ ಬಲಗೊಳ್ಳುತ್ತಿದೆ. ಉದ್ಯೋಗ ಅವಿಷ್ಕಾರದಲ್ಲಿ 30 ಸಾವಿರ ಮಕ್ಕಳಿಗೆ ಕೌಶಲ್ಯ ತರಬೇತಿ ನೀಡೋದಿದೆ. ಅದಾಗಲೇ 25 ಸಾವಿರ ಮಕ್ಕಳಿಗೆ ನೀಡಲಾಗಿದೆ. ಬಿಸಿಎಂ, ಹಿಂದುಳಿದ ವರ್ಗ, ಎಸ್ಸಿ ಎಸ್ಟಿ ಹೀಗೆ ಎಲ್ಲಾ ರಂಗಗಳಲ್ಲಿಯೂ ಕೆಕೆಆರ್‌ಡಿಬಿ ಯೋಜನೊಪಿಸಿ ಕಾರ್ಯತತ್ಪರವಾಗಿದೆ -ಡಾ.ಅಜಯ್ ಧರ್ಮಸಿಂಗ್**

## ಜಾನಪದ ಕಲಾ ಪ್ರಕಾರಗಳು ನಡವಳಿಕೆಗಳನ್ನು ಬದಲಾಯಿಸುವಲ್ಲಿ ಪರಿಣಾಮಕಾರಿಯಾಗಿರುತ್ತದೆ

• ಉದಯವಾಹಿನಿ _ಚಿತ್ರದುರ್ಗ

ನಗರದ ವೆಂಕಟೇಶ್ವರ ಬಡಾವಣೆ ಕೊಳಚೆ ಪ್ರದೇಶ ಪ್ರಾಂತ್ಯದಲ್ಲಿ ಮಂಗಳವಾರ ರಾಷ್ಟ್ರೀಯ ಆರೋಗ್ಯ ಅಭಿಯಾನ ಕಾರ್ಯಕ್ರಮದ ಅಡಿಯಲ್ಲಿ ಜಾನಪದ ಕಲಾ ಪ್ರಕಾರಗಳ ಕಿರು ನಾಟಕಗಳ ಮೂಲಕ ದುಸ್ತರವರ್ಗದ ಜನಸಂಖ್ಯೆ ಹೆಚ್ಚಿರುವ ಜಾಗದಲ್ಲಿ ಜಾನಪದ ಕಲಾತಂಡಗಳ ಮೂಲಕ ಕಿರು ನಾಟಕ ಪ್ರದರ್ಶನ ನೀಡಿ ಆರೋಗ್ಯ ಇಲಾಖೆಯ ಸೇವೆಗಳನ್ನ ಬಲಪಡಿಸುವ ಕಾರ್ಯಕ್ರಮಕ್ಕೆ ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾಕ್ಟರ್ ಡಿ ಎಂ ಅಭಿನವ ತಮಟೆ ಬಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿ ತಾಯಿ ಮಕ್ಕಳ ಆರೋಗ್ಯಕ್ಕೆ ಸಂಬಂಧಿಸಿದಂತೆ ಬಹು ಪ್ರಮುಖ ಮಾನದಂಡಗಳಾದ ತಾಯಿ ಮರಣ ಶಿಶುಮರಣ ನಿಯಂತ್ರಣ ಬಾಲ್ಯ ವಿವಾಹ ತಡೆಗಟ್ಟುವಿಕೆ, ಭ್ರೂಣ ಲಿಂಗ ಪತ್ತೆ ಕಾಯ್ದೆ ಅನುಷ್ಠಾನ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜನರ ವರ್ತನೆಗಳು ನಡವಳಿಕೆಗಳು ಬದಲಾವಣೆಯಾಗಬೇಕಾಗಿದೆ.

ಈ ನಿಟ್ಟಿನಲ್ಲಿ ಜಾನಪದ ಕಲಾ ಪ್ರಕಾರಗಳನ್ನು ಕಿರು ನಾಟಕಗಳ ಮೂಲಕ ಪ್ರದರ್ಶನವನ್ನು ನೀಡಿ ಜನರ ಕುಟುಂಬಗಳಲ್ಲಿ ಜರುಗುವ ಪರಿಸ್ಥಿತಿಗಳನ್ನ ನಾಟಕಗಳ ಮೂಲಕ ಪ್ರತಿಫಲಿಸಿ ಘಟನೆಗಳನ್ನು ನೆನಪು ಮಾಡುತ್ತಾ ಪರಿವರ್ತನೆ ತರುವಂತ ಒಂದು


ಉದಯವಾಹಿನಿ ಚಿತ್ರ

ಪ್ರಯತ್ನವಾಗಿದೆ ಅಲ್ಲದೆ ಜನರ ಭಾವನೆಗಳ ಮೇಲೆ ಪರಿಣಾಮಕಾರಿಯಾಗಿ ಧನಾತ್ಮಕ ಬದಲಾವಣೆಗಳನ್ನು ತರುವಂತಹ ಆರೋಗ್ಯ ಸೇವೆಗಳ ಮಾಹಿತಿಯನ್ನು ಜಾನಪದದೊಂದಿಗೆ ಸಮೀಲನಗೊಳಿಸಿ ಕಿರು ನಾಟಕಗಳನ್ನು ಪ್ರದರ್ಶಿಸಿ ಆರೋಗ್ಯ ಸೇವೆಗಳನ್ನು ಬಲಪಡಿಸುವುದಾಗಿದೆ ಜಾನಪದ ಕಲಾ ಪ್ರಕಾರಗಳು ನಡವಳಿಕೆಗಳನ್ನು ಬದಲಾಯಿಸುವಲ್ಲಿ ಪರಿಣಾಮಕಾರಿಯಾಗಿರುತ್ತದೆ ಎಂದರು. ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಬಿ ವಿ ಗಿರೀಶ್ ಮಾತನಾಡಿ ತಾಯಿ ಮರಣ ಶಿಶುಮರಣ ನಿಯಂತ್ರಿಸುವಲ್ಲಿ ಜನರಿಗೆ ಜಾಗೃತಿ ಬೇಕಾಗಿರುತ್ತದೆ ನಾಟಕಗಳು ಪರಿವರ್ತನೆ ತರಬಲ್ಲವೂ ಎಂದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್‌ಎಸ್ ಮಂಜುನಾಥ್ ಜಿಲ್ಲಾ ಪೋಶನ್ ಅಭಿಯಾನದ ವ್ಯವಸ್ಥಾಪಕ ಕರಕಪ್ಪ ಮೇಟಿ ಕ್ಷೇತ್ರ, ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ ಜಾನಕಿ ಬಿ ಮುಗಪ್ಪ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀನಿವಾಸ್ ಗುರುಮೂರ್ತಿ ಪ್ರವೀಣ್ ಆರೋಗ್ಯ ಸುರಕ್ಷತಾ ಅಧಿಕಾರಿ ವತ್ಸಲಮ್ಮ ಆಶಾ ಕಾರ್ಯಕರ್ತೆಯರು ಕಲಾವಿದರ ತಂಡ ಸಾರ್ವಜನಿಕರು ನಾಟಕ ಪ್ರದರ್ಶನದಲ್ಲಿ ಭಾಗವಹಿಸಿದ್ದರು.

**ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದ ಅಡಿಯಲ್ಲಿ ಜಿಲ್ಲೆಯ ಪ್ರತಿ ತಾಲ್ಲೂಕಿಗೂ ಐದು ನಾಟಕ ಪ್ರದರ್ಶನಗಳಂತೆ ಒಟ್ಟು 30 ನಾಟಕ ಪ್ರದರ್ಶನಗಳು ಎಲ್ಲೆಲ್ಲಿ ತಾಯಿ ಮರಣ ಶಿಶುಮರಣ ಹೆಚ್ಚು ಸಂಭವಿಸುತ್ತಿದೆಯೋ ಅಂತಹ ಗ್ರಾಮಗಳನ್ನು ಆಯ್ದು ನಡೆಸಲಾಗುತ್ತದೆ - ಕೃಷ್ಣನಾಯಕ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ**

## ಕಬ್ಬಿಣದ ರಾಡ್‌ನಿಂದ ಹೊಡೆದು ರೌಡಿಶೀಟರ್ ಭೀಕರ ಕೊಲೆ

• ಉದಯವಾಹಿನಿ, ಕಲಬುರಗಿ

ಕಬ್ಬಿಣದ ರಾಡ್‌ನಿಂದ ಹೊಡೆದು ರೌಡಿಶೀಟರ್ ಒಬ್ಬನನ್ನು ಭೀಕರವಾಗಿ ಕೊಲೆ ಮಾಡಿರುವ ಘಟನೆ ನಗರದ ಕಾಕಡೆ ಚೌಕ್‌ನ ಲಂಗರ ಹನುಮಾನ ಮಂದಿರ ಹತ್ತಿರ ಬೆಳಗಿನ ಜಾವ ನಡೆದಿದೆ.



ನಗರದ ಫಿಲ್ಟರ್ ಬೆಡ್ ರಸ್ತೆಯ ಭವಾನಿ ನಗರದ ನಿವಾಸಿ ವಿರೇಶ ಅಲಿಯಾಸ್ ಸಾರಥಿ ತಂದೆ ಶ್ರೀಕಾಂತ ಬಿರಾದಾರ (25) ಕೊಲೆಯಾದವರು.

ಕೊಲೆಯಾದ ವಿರೇಶ ಕಾಕಡೆ ಚೌಕ್‌ನ ಲಂಗರ ಹನುಮಾನ ಮಂದಿರ ಹತ್ತಿರ ನಾಲ್ವರು ಗೆಳೆಯರೊಂದಿಗೆ ಸೇರಿ ಪಾರ್ಟಿ ಮಾಡುತ್ತಿದ್ದ. ಯಾವುದೋ ವಿಷಯಕ್ಕೆ ಅವರ ನಡುವೆ ವಾಗ್ವಾದ ನಡೆದು ಕಬ್ಬಿಣದ ರಾಡ್‌ನಿಂದ ಹೊಡೆದು ವಿರೇಶನನ್ನು ಕೊಲೆ ಮಾಡಿ ಪರಾರಿಯಾಗಿದ್ದಾರೆ ಎಂದು ತಿಳಿದುಬಂದಿದೆ.

ಕೊಲೆಯಾದ ವಿರೇಶ ರೌಡಿಶೀಟರ್ ಆಗಿದ್ದು, ಆತನ ಮೇಲೆ 2017ರಲ್ಲಿ ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ 1 ಕೊಲೆ ಪ್ರಕರಣ, 2022ರಲ್ಲಿ ಚೌಕ್ ಪೊಲೀಸ್ ಠಾಣೆಯಲ್ಲಿ 1 ಕೊಲೆ ಮತ್ತು ಹಲ್ಲೆ ಪ್ರಕರಣ ದಾಖಲಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

## ರಾಜ್ಯ ಸರ್ಕಾರ ಲಿಂಗೈಕ್ಯ ಡಾ.ಪಂಡಿತ ಪುಟ್ಟರಾಜ ಗವಾಯಿಗಳ ಜಯಂತಿ ಆಚರಣೆ ಮಾಡಬೇಕು: ಶರಣು ಪಾಟೀಲ ಒತ್ತಾಯ

• ಉದಯವಾಹಿನಿ, ಚಿಂಚೋಳಿ

ಡಾ.ಪಂಡಿತ ಪುಟ್ಟರಾಜ ಗವಾಯಿಯವರ ಸಂಗೀತ ಸೇವೆ ಅಮೋಘ,ಆಧ್ಯಾತ್ಮ ಸಾಧನೆಯ ಶರಣ ಜೀವನ, ಪರಿಶುದ್ಧ ಆಚಾರ, ನಡೆ- ನುಡಿಗಳೊಂದಿಗೆ ಸದಾ ಕಾಯಕ ನಿರತರಾಗಿ, ಶಿಷ್ಯ ಬಳಗಕ್ಕೆ ವಿದ್ಯೆಯನ್ನು ಧಾರೆ ಎರೆಯುತ್ತಾ ಸಮಾಜದ ಸರ್ವ ತೋಮುಖ ಬೆಳವಣಿಗೆಯತ್ತ ಗಮನಹರಿಸುತ್ತಾ ಸಾರ್ಥಕ ಬದುಕನ್ನು ಸವೆಯಿಸಿದ ಮಹಾನ್ ಸಂತರ ಮಾರ್ಚ 3ರಂದು ಪುಣ್ಯಸ್ಮರಣೆಯ ದಿನವಾಗಿದ್ದು, ಈದಿನ ಜಯಂತಿಯನ್ನು ರಾಜ್ಯ ಸರ್ಕಾರ ಸರಕಾರಿ ಜಯಂತಿಯಾಗಿ ಆಚರಣೆ ಮಾಡಲು ಅಧಿಕೃತ ಘೋಷಣೆ ಮಾಡಿ ಅವರ ಅಪಾರ ಸೇವೆಯನ್ನು ಗುರುತಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸ ಮಾಡಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಾಲ್ಲೂಕಾ ಅಧ್ಯಕ್ಷ ಶರಣುಪಾಟೀಲ್ ಮೋತಕಪಳ್ಳಿ ಒತ್ತಾಯಿಸಿದ್ದಾರೆ.



ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು,ಪದ್ಮಭೂಷಣ, ಗಾನಯೋಗಿ, ಗಾನ ಗಂಧರ್ವ,ಪಂಚಮ ಕೋಗಿಲೆಯ ಡಾ.ಪಂಡಿತ ಪುಟ್ಟರಾಜ ಗವಾಯಿಗಳು, ಕನ್ನಡ ಸಾಹಿತ್ಯ, ಸಾಂಸ್ಕೃತಿಕ ಹಾಗೂ ಆಧ್ಯಾತ್ಮಿಕ,ಸಾಮಾಜಿಕ ಕ್ಷೇತ್ರದಲ್ಲಿ ಅಪಾರವಾದ ಸಾಧನೆ ಮಾಡಿದ ಮಹಾನ್ ಯೋಗಿಗಳಾಗಿದ್ದಾರೆ.

ಇವರು ಕರ್ನಾಟಕ ಮತ್ತು ಹಿಂದುಸ್ಥಾನಿ ಸಂಗೀತದಲ್ಲಿ ಪ್ರಾವಿಣ್ಯತೆ ಪಡೆದುಕೊಂಡು, ಕನ್ನಡ,ಸಂಸ್ಕೃತ ಹಾಗೂ ಹಿಂದಿ ಭಾಷೆಗಳಲ್ಲಿ ಪ್ರಭುತ್ವವನ್ನು ಸಾಧಿಸಿದ ತ್ರಿಭಾಷಾ ಪಂಡಿತರು ಹಾಗೂ ಮಹಾನ್ ಯೋಗಿಗಳಾಗಿದ್ದು ಇವರ ಪುಣ್ಯಸ್ಮರಣೆಯ ದಿನವಾದ ಮಾರ್ಚ್ 3ರಂದು ಸರಕಾರ ಅವರ ಜಯಂತಿ ಆಚರಣೆ ಮಾಡಿ ಅಧಿಕೃತವಾಗಿ ಆದೇಶ ಹೊರಡಿಸಬೇಕು.

**ಸಾಮಾಜಿಕ ಕ್ಷೇತ್ರದಲ್ಲಿ ಅಪಾರವಾದ ಸಾಧನೆ**

ಪುಟ್ಟರಾಜ ಗವಾಯಿಗಳು ವಿವಿಧ ಕ್ಷೇತ್ರಗಳಲ್ಲಿ ಮಹತ್ವದ ಸಾಧನೆ ಮಾಡಿದ ಮಹಾನ್ ಸಂತರು,ಸಾಹಿತ್ಯ, ಸಂಗೀತ,ಆಧ್ಯಾತ್ಮಿಕ ಕ್ಷೇತ್ರವಲ್ಲದೆ,ಸಾಮಾಜಿಕ ಕ್ಷೇತ್ರದಲ್ಲಿ ಅಂಧ-ಅನಾಥ ಮಕ್ಕಳ ಪೋಷಣೆ,ಅವರಿಗೆ ಉತ್ತಮ ಶಿಕ್ಷಣ ನೀಡುವುದು ಹಾಗೂ ವೃತ್ತಿರಂಗಭೂಮಿಯ ಮೂಲಕ ಕಲೆಯ ರಕ್ಷಣೆ,ಶಿಕ್ಷಣ ಸಂಸ್ಥೆಗಳ ಮೂಲಕ ಅಕ್ಷರ ದಾಸೋಹದಂತಹ ಹಲವಾರು ಕ್ಷೇತ್ರದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವ ಮೂಲಕ, ಬಹುಭಾಷಾ ಪಂಡಿತರಾಗಿ,ಗಾಯಕರಾಗಿ,ವಾದಕರಾಗಿ, ನಾಟಕಕಾರರಾಗಿ, ಕವಿಗಳಾಗಿ,ವಚನಕಾರರಾಗಿ ಹೊಸ ರಾಗಗಳ ಅನ್ವೇಶಕರಾಗಿ ಅವರು ವಿವಿಧ ಕ್ಷೇತ್ರಗಳಲ್ಲಿ ನೀಡಿದ ಕೊಡುಗೆ ಅವಿಸ್ಮರಣೀಯವಾಗಿದೆ ಎಂದು ತಿಳಿಸಿದ್ದಾರೆ.

## ವಿದ್ಯಾರ್ಥಿಗಳು ಉತ್ತಮ ವಿದ್ಯಾಭ್ಯಾಸದಿಂದ ಜೀವನ ರೂಪಿಸಿಕೊಳ್ಳಿ: ನೇಮರಾಜ್

• ಉದಯವಾಹಿನಿ, ಚಿಂಚೋಳಿ

ವಿದ್ಯಾರ್ಥಿಗಳು ಉತ್ತಮ ಗುಣಮಟ್ಟದ ಶಿಕ್ಷಣ ಪಡೆದು ದುಶ್ಚಟಗಳಿಂದ ಮೊಬೈಲ್ ಫೋನಯಿಂದ ದೂರವಿದ್ದು ಒಳ್ಳೆಯ ವಿಧ್ಯಾಭ್ಯಾಸ ಮಾಡಿ ಜೀವನ ರೂಪಿಸಿಕೊಳ್ಳಬೇಕು ಎಂದು ಮುಖ್ಯ ಗುರುಗಳು ನೇಮರಾಜ್ ಹವಳೆ ಹೇಳಿದರು.

ತಾಲ್ಲೂಕಿನ ನಾಗಾಯಿದಲ್ಲಾಯಿ ಗ್ರಾಮದಲ್ಲಿ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಆಶ್ರಯದಲ್ಲಿ ತಾಲ್ಲೂಕಿನ ಗಣೇಶ ಜ್ಞಾನ ವಿಕಾಸ ಕೇಂದ್ರದ ವತಿಯಿಂದ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಹತ್ತನೆ ತರಗತಿಯ ವಿದ್ಯಾರ್ಥಿಗಳ ಟ್ಯೂಷನ್ ಕ್ಲಾಸ್ ಸಮಾರೋಪ ಸಮಾರಂಭ ಚಾಲನೆ ನೀಡಿ ಮಾತನಾಡಿದ ಅವರು,ವಿದ್ಯಾರ್ಥಿಗಳು ಸಮಯಕ್ಕೆ ಮಹತ್ವ ನೀಡಿ ಬೆಳಿಗ್ಗೆ ಮತ್ತು ಸಾಯಂಕಾಲ ಕನಿಷ್ಠ ಮೂರು ತಾಸು ವಿದ್ಯಾರ್ಥಿಗಳು ವಿಧ್ಯಾಭ್ಯಾಸಕ್ಕೆ ಸಮಯ ನಿಗಧಿಪಡಿಸಬೇಕು ಆಗ ವಿದ್ಯಾರ್ಥಿಗಳು ಶಿಕ್ಷಣದಲ್ಲಿ ಎತ್ತರಮಟ್ಟಕ್ಕೆ ಬೆಳೆಯಲು ಸಾಧ್ಯವಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ

ಜ್ಞಾನವಿಕಾಸ ಸಮನ್ವಯಾಧಿಕಾರಿ ಜಗದೇವಿ,ಕೃಷಿ ಮೇಲ್ವಿಚಾರಕ ಸತೀಶ,ವಲಯ ಮೇಲ್ವಿಚಾರಕ ಆಂಜನೇಯ,ಧರ್ಮಸ್ಥಳ ಸಂಸ್ಥೆಯ ಯೋಜನಾಧಿಕಾರಿ ಗೋಪಾಲ್ ಜಿ.ಮಾತನಾಡಿದರು.

ಬೋರಪ್ಪ, ರೇಣುಕಾ,ಸಾಧಿಕ್,ಸೇರಿದಂತೆ ಶಾಲೆಯ ಎಲ್ಲಾ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

**ವಿದ್ಯಾರ್ಥಿಗಳು ಶಿಕ್ಷಣವನ್ನು ಕಲಿತರೆ ಸಾಲದು ಅದರ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸಿ ಕೊಳ್ಳಬೇಕು,ಧರ್ಮಸ್ಥಳ ಸಂಸ್ಥೆಯವರು ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಟ್ಯೂಷನ್ ಕ್ಲಾಸ್ ಮಾಡುವುದರ ಮೂಲಕ ವಿದ್ಯಾದಾನ ಮಾಡಿದ್ದಾರೆ,ಬಡ ಮಕ್ಕಳಿಗೆ ಸಾಕಷ್ಟು ಅನುಕೂಲವಾಗಿದೆ -ಜಗದೇವ ಗೌತಮ್, ಅತಿಥಿ ಶಿಕ್ಷಕ**

## ಭೀಕರ ರಸ್ತೆ ಅಪಘಾತ ಮೂವರು ದುರ್ಮರಣ

• ಉದಯವಾಹಿನಿ ಕಾಸರಗೋಡು

ತಲಪಾಡಿ ರಸ್ತೆ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ನಡೆಯುತ್ತಿದ್ದು ಇಲ್ಲಿ ತಾತ್ಕಲಿಕ ಅಲ್ಲಲ್ಲಿ ತಡೆಗೋಡೆ ಹಾಗೂ ಡಿವೈಡರ್ ನಿರ್ಮಿಸುವುದರಿಂದ ವಾಹನ ಚಾಲಕರಿಗೆ ಗೊಂದಲ ಉಂಟಾಗಿ ಹಲವು ಅಪಘಾತ ಸಂಭವಿಸಿದೆ.

ಮಂಜೇಶ್ವರ ಬಳಿಯ ಉಪ್ಪಳ ಬ್ರಿಡ್ಜ್ ಸಮೀಪ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು ಡಿವೈಡರ್‌ಗೆ ಕಾರು ಡಿಕ್ಕಿಯಾದ ರಭಸಕ್ಕೆ ಕಾರು ತುಂಡು ತುಂಡಾಗಿ ರಸ್ತೆಗೆಸೆಯಲ್ಪಟ್ಟ ಘಟನೆ ವರದಿಯಾಗಿದೆ. ಕಾರಿನಲ್ಲಿದ್ದ ನಾಲ್ವರಲ್ಲಿ ಮೂವರು ಸಾವನಪ್ಪಿದ್ದು ಇನ್ನೊಬ್ಬರು ಗಂಭೀರ ಗಾಯಗೊಂಡಿದ್ದಾರೆಂದು ತಿಳಿದು ಬಂದಿದೆ. ಮೃತರನ್ನು ಕಾಸರಗೋಡು ಪೈವಳಿಕೆ ಬಾಯಿಕಟ್ಟೆಯ ನಿವಾಸಿ ಜನಾರ್ದನ, ವರುಣ್, ಕೃಷ್ಣ ಎಂದು ತಿಳಿದು ಬಂದಿದೆ . ಮೃತದೇಹವನ್ನು ಆಸ್ಪತ್ರೆಗೆ ರವಾನಿಸಿದ್ದು ಸ್ಥಳಕ್ಕೆ ಸ್ಥಳೀಯ ಪೊಲಿಸರು ಭೇಟಿನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

## ಅಂಗಡಿಯಿಂದ ನಗದು, ಸಾಮಗ್ರಿ ಕಳವು: ಕೃತ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆ

• ಉದಯವಾಹಿನಿ ಉಳ್ಳಾಲ

ಕೊಣಾಜೆ ಪೊಲೀಸ್ ಠಾಣಾ ವ್ಯಾಪ್ತಿಯ ನರಿಂಗಾನ ಗ್ರಾಮದ ತೌಡುಗೋಳಿ ಜಂಕ್ಷನ್‌ನಲ್ಲಿರುವ ಅಂಗಡಿಯೊಂದರಲ್ಲಿ ನಗದು ಹಾಗೂ ಸಾಮಗ್ರಿಗಳನ್ನು ಕಳವು ಮಾಡಿದ ಘಟನೆ ನಡೆದಿದ್ದು, ಕಳ್ಳತನದ ಸಂಪೂರ್ಣ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.


ಉದಯವಾಹಿನಿ ಚಿತ್ರ

ತೌಡುಗೋಳಿಯ ವಸಂತ ಅವರ ಮಾಲೀಕತ್ವದ ಅಂಗಡಿಗೆ ಕನ್ನ ಹಾಕಲು ಮುಂಜಾನೆ 2.30 ರ ಸುಮಾರಿಗೆ ರಾಡ್ ಸಮೇತ ಆಗಮಿಸಿದ್ದಾನೆ.

ಬಳಿಕ ಕಳ್ಳನು ಹೊರಗಡೆಯ ಕಬ್ಬಿಣದ ಬಾಗಿಲಿಗೆ ಹಾಕಿದ್ದ ಬೀಗವನ್ನು ಮುರಿದು ಅಂಗಡಿ ಒಳಗೆ ಪ್ರವೇಶಿಸಿದ್ದಾನೆ.

ಬಳಿಕ ಅಲ್ಲಿಂದ ಕ್ಯಾಶ್ ಕೌಂಟರ್ ಇರುವ ಕೊಠಡಿಯ ಮರದ ಬಾಗಿಲಿನ ಬೀಗ ಮುರಿಯಲು ಸುಮಾರು ಅರ್ಧ ಗಂಟೆ ಒದ್ದಾಡಿದ್ದಾನೆ, ನಂತರ ಬಾಗಿಲ ಬೀಗ ಮುರಿದ ಆತ ಸುಮಾರು 10,000 ರೂ. ಮತ್ತು ಹಾಗೂ 15,000 ರೂ. ಮೊತ್ತದ ಸಾಮಗ್ರಿಗಳನ್ನು ಕದ್ದೊಯ್ದಿದ್ದಾನೆ. ಕಳ್ಳತನದ ಈ ಎಲ್ಲಾ ದೃಶ್ಯಗಳು ಸಿಸಿಟಿವಿಯಲ್ಲಿ ದಾಖಲಾಗಿದೆ.

# ಕೋಳಿ ಶೀತ ಜ್ವರಕ್ಕೆ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ

• ಸಾರ್ವಜನಿಕರು ಮಾಂಸ ಮತ್ತು ಮೊಟ್ಟೆಗಳನ್ನು ಚೆನ್ನಾಗಿ ಬೇಯಿಸಿದ ನಂತರ ಸೇವನೆ ಮಾಡಬೇಕು: ಜಿಲ್ಲಾಧಿಕಾರಿ

• ಉದಯವಾಹಿನಿ, ಬಳ್ಳಾರಿ

ಕೋಳಿ ಶೀತ ಜ್ವರ(ಹಕ್ಕಿ ಜ್ವರ) ವು ಹೆಚ್5ಎನ್1 ವೈರಸ್ ನಿಂದ ಪಕ್ಷಿಗಳಿಗೆ ಹರಡುವ ಖಾಯಿಲೆಯಾಗಿದ್ದು, ಮನುಷ್ಯರಿಂದ ಮನುಷ್ಯರಿಗೆ ಸಾಂಕ್ರಮಿಕವಾಗಿ ಹರಡುವುದಿಲ್ಲ. ಹಾಗಾಗಿ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಸ್ಪಷ್ಟನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಕಾಣಿಸಿಕೊಂಡ ಕೋಳಿ ಶೀತ ಜ್ವರಕ್ಕೆ ಸಂಬಂಧಿಸಿದಂತೆ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಶೀಥಲ ಪ್ರದೇಶದ ವಲಸೆ ಹಕ್ಕಿಗಳು ವಂಶಾಭಿವೃದ್ಧಿಗಾಗಿ ಬಂದಾಗ ಹಿಕ್ಕೆ, ಪುಕ್ಕ ಹಾಗೂ ಬಾಯಿ ಮತ್ತು ಕಣ್ಣಿನಿಂದ ಹೊರ ಬರುವ ಸ್ರವಿಕೆಯಿಂದ ಕಾಯಿಲೆ ಹರಡು ಸಂಭವವಿದ್ದು, ಪಕ್ಷಿಗಳಿಗೆ ರೋಗವು ಹರಡುತ್ತದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಪ್ರಥಮ ಬಾರಿಗೆ ಫೆ.23ರಂದು ಕುರೇಕುಪ್ಪ ಕುಕ್ಕುಟ ಸಂವರ್ಧನಾ ಕೇಂದ್ರದಲ್ಲಿ ಸಾಕಾಣಿಕೆ ಮಾಡಿದ ಅಸಿಲ್ ಮತ್ತು ಕಾವೇರಿ ತಳಿಯ ಕೋಳಿಗಳಿಗೆ ಕೋಳಿ ಶೀತ ಜ್ವರ ರೋಗದ ಲಕ್ಷಣ ಕಂಡು ಬಂದು ಕೆಲವು ಕೋಳಿಗಳು ಮರಣ ಹೊಂದಿದ್ದವು. ಹೆಚ್ಚಿನ ಪರೀಕ್ಷೆಗಾಗಿ ಬೆಂಗಳೂರಿನ ಐಎಹೆಚ್ ಮತ್ತು ವಿಬಿಗೆ ಮರಣ ಹೊಂದಿದ ಕೋಳಿಗಳ ಮಾದರಿ ಕಳುಹಿಸಲಾಗಿತ್ತು. ಫೆ.25 ರಂದು ಭೋಪಾಲ್‌ನ ಐಸಿಎಆರ್ ರಾಷ್ಟ್ರೀಯ ಹೈ ಸೆಕ್ಯುರಿಟಿ ಪ್ರಾಣಿ ರೋಗಗಳ ಪ್ರಯೋಗಾಲಯ ಸಂಸ್ಥೆಯಿಂದ ರೋಗ ದೃಢೀಕರಣವಾಗಿರುವ ವರದಿ ಬಂದ ನಂತರ ಕೋಳಿ ಶೀತ ಜ್ವರ ರೋಗೋದ್ರೇಕಗೊಂಡಿರುವ ಬಗ್ಗೆ ಘೋಷಿಸಲಾಯಿತು. ಆಗ ಮಾರ್ಗಸೂಚಿಯಂತೆ ಇರುವ 2400 ಕೋಳಿಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಗಿದೆ ಎಂದರು. ಫೆ.28 ರಂದು ಕಪ್ಪಗಲ್ ಗ್ರಾಮದಲ್ಲಿ ಇಂಟಿಗ್ರೇಷನ್ ಪದ್ಧತಿಯಲ್ಲಿ ಮಾಂಸದ ಕೋಳಿಗಳನ್ನು ಸಾಕಾಣಿಕೆ ಮಾಡುವ ಕೇಂದ್ರದಲ್ಲಿ

### ಬೇಯಿಸಿ ನಂತರ ಸೇವಿಸಿ

**ಸಾರ್ವಜನಿಕರು ಮಾಂಸ ಮತ್ತು ಮೊಟ್ಟೆಗಳನ್ನು 70 ಡಿಗ್ರಿ ಅಧಿಕ ಉಷ್ಣಾಂಶದಲ್ಲಿ ಕನಿಷ್ಠ 30 ನಿಮಿಷ ಬೇಯಿಸಿದಾಗ ವೈರಾಣು ನಾಶಗೊಳ್ಳುತ್ತದೆ. ಹಾಗಾಗಿ ಸಾರ್ವಜನಿಕರು ಮಾಂಸ ಮತ್ತು ಮೊಟ್ಟೆಗಳನ್ನು ಚೆನ್ನಾಗಿ ಬೇಯಿಸಿದ ನಂತರ ಸೇವನೆ ಮಾಡಬೇಕು ಎಂದು ಹೇಳಿದರು.**

**ಜಿಲ್ಲೆಯಲ್ಲಿ ಕೋಳಿ ಶೀತ ಜ್ವರ**


ಉದಯವಾಹಿನಿ ಚಿತ್ರ

ಅಸಹಜವಾಗಿ ಕೋಳಿಗಳು ಮರಣ ಹೊಂದಿದ್ದವು. ಪಶು ಪಾಲನಾ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದಾಗ ಒಟ್ಟು 15,000 ಕೋಳಿಗಳ ಪೈಕಿ 8,000 ಕೋಳಿಗಳು ಮರಣ ಹೊಂದಿದ್ದವು. ಮರಣ ಹೊಂದಿದ ಕೋಳಿಗಳ ಮಾದರಿಗಳನ್ನು ಹೆಚ್ಚಿನ ಪರೀಕ್ಷೆಗಾಗಿ ಬೆಂಗಳೂರಿನ ಐಎಹೆಚ್ ಮತ್ತು ವಿಬಿ ಹಾಗೂ ಭೋಪಾಲ್‌ನ ಐಸಿಎಆರ್ ರಾಷ್ಟ್ರೀಯ ಹೈ ಸೆಕ್ಯುರಿಟಿ ಪ್ರಾಣಿ ರೋಗಗಳ ಪ್ರಯೋಗಾಲಯ ಸಂಸ್ಥೆಗೆ ಕಳುಹಿಸಲಾಗಿದೆ ಎಂದು ಜಿಲ್ಲಾಧಿಕಾರಿಯವರು ವಿವರಿಸಿದರು.

ಜಿಲ್ಲೆಯಲ್ಲಿ ಒಟ್ಟು 74 ಮಾಂಸದ ಕೋಳಿ (ಫಾರಂ) ಹಾಗೂ 14 ಮೊಟ್ಟೆ ಕೋಳಿ ಸಾಕಾಣಿಕೆ ಕೇಂದ್ರಗಳಿವೆ ಹಾಗೂ 1,30,221 ಹಿತ್ತಲ ಕೋಳಿ ಇವೆ. ಮರಣ ಹೊಂದಿದ ಕೋಳಿಗಳನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ ಮತ್ತು ಕೋಳಿ ಶೀತ ಜ್ವರ ಕಂಡಿರುವ ಕೋಳಿ ಸಾಕಾಣಿಕೆ ಕೇಂದ್ರವನ್ನು ನಿಭರ್ಂಧಿತ ಪ್ರದೇಶವೆಂದು ಘೋಷಿಸಿ ವಾಹನಗಳ ಮತ್ತು ಸಾರ್ವಜನಿಕರ ಪ್ರವೇಶ ನಿಷೇಧಿಸಲು ಕ್ರಮವಹಿಸಲಾಗಿದೆ ಎಂದರು. ಕಪ್ಪಗಲ್ ಗ್ರಾಮದ ಕೋಳಿ ಸಾಕಾಣಕೆ ಕೇಂದ್ರದ 1 ಕಿ.ಮೀ. ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಕೋಳಿ ಶೀತ ಜ್ವರದ ಬಗ್ಗೆ ಅರಿವು ಮೂಡಿಸಲು ಡಂಗುರ ಸಾರಲಾಗಿದೆ. ರಸಾಯನಿಕ ದ್ರಾವಣ ಸಿಂಪಡಿಸಿ ಸ್ಯಾನಿಟೈಜೇಷನ್ ಮಾಡಲಾಗಿದೆ. ಸುತ್ತ-ಮುತ್ತಲಿನ ಗ್ರಾಮಗಳಲ್ಲಿ ಇರುವ ಹಿತ್ತಲ ಕೋಳಿಗಳ ಆರೋಗ್ಯದ ಮೇಲೆ ನಿಗಾವಹಿಸಲಾಗಿದೆ ಎಂದು ತಿಳಿಸಿದರು. ತುರ್ತು ಸಂದರ್ಭದಲ್ಲಿ ತ್ವರಿತವಾಗಿ ಕ್ರಮ ಜರುಗಿಸಲು ಪಶುವೈದ್ಯಾಧಿಕಾರಿಗಳ ನೇತೃತ್ವದಲ್ಲಿ 13 ಕ್ಷಿಪ್ರ ಪ್ರತಿಕ್ರಿಯೆ ತಂಡ ತಂಡಗಳನ್ನು ರಚನೆ ಮಾಡಲಾಗಿದೆ ಎಂದರು.

### ಅರಿವು ಮೂಡಿಸಲು ಅಧಿಕಾರಿಗಳಿಗೆ ನಿರ್ದೇಶನ

**ಈಗಾಗಲೇ ಜಿಲ್ಲೆಯಲ್ಲಿ ಕೋಳಿ ಶೀತ ಜ್ವರದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಎಲ್ಲಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಕೋಳಿ ಸಾಕಾಣಿಕಾ ಕೇಂದ್ರಗಳ ಮಾಲೀಕರಿಗೆ ಕೋಳಿಗಳಲ್ಲಿ ಅಸಹಜ ಸಾವು ಕಂಡು ಬಂದಲ್ಲಿ ತಕ್ಷಣವೇ ಪಶು ಪಾಲನಾ ಇಲಾಖೆಗೆ ತಿಳಿಸುವಂತೆ ಹಾಗೂ ಗ್ರಾಮಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಕೋಳಿ ಮಾಂಸ ಮತ್ತು ಮೊಟ್ಟೆ ಮಾರಾಟ ಅಂಗಡಿಗಳಲ್ಲಿ ಉತ್ಪಾದನೆಯಾಗುವ ತ್ಯಾಜ್ಯಗಳನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಲು ಕ್ರಮವಹಿಸಲು ಸೂಚನೆ ನೀಡಲಾಗಿದೆ ಎಂದರು.**

### ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತರಬೇತಿ

**ಜಿಲ್ಲೆಗೆ ಬೆಂಗಳೂರಿನ ಐಎಹೆಚ್ ಮತ್ತು ವಿಬಿ ಪ್ರಯೋಗಾಲಯದ ವಿಜ್ಞಾನಿಗಳು ಮತ್ತು ಪಶುಪಾಲನಾ ಇಲಾಖೆಯ ನಿರ್ದೇಶಕರು ಭೇಟಿ ನೀಡಿ ಹಕ್ಕಿ ಜ್ವರದ ನಿಯಂತ್ರಣ ಮಾರ್ಗಸೂಚಿಯಂತೆ ಕಟ್ಟೆಚ್ಚರ ವಹಿಸಲು ಜಿಲ್ಲೆಯ ವಿವಿಧ ತಾಲ್ಲೂಕುಗಳ ಪಶುಪಾಲನಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯವರಿಗೆ ತರಬೇತಿ ನೀಡಿ ಸೂಕ್ತ ಮಾರ್ಗದರ್ಶನ ನೀಡಿದ್ದಾರೆ.**

# ರಾಮಮಂದಿರದ ಮೇಲೆ ದಾಳಿಗೆ ಸಂಚು ಶಂಕಿತ ಉಗ್ರನ ಬಂಧನ

**ಫರಿದಾಬಾದ್:** ಹ್ಯಾಂಡ್ ಗ್ರೆನೇಡ್ ಬಳಸಿ ಅಯೋಧ್ಯೆ ರಾಮ ದೇವಾಲಯದ ಮೇಲೆ ದಾಳಿ ಮಾಡುವ ಮೂಲಕ ಭಾರಿ ವಿನಾಶವನ್ನು ಸೃಷ್ಟಿಸುವುದು ಬಂಧಿತ ಉಗ್ರ ಅಬ್ದುಲ್ ರಹಮಾನ್ ಯೋಜನೆಯಾಗಿತ್ತು ಎನ್ನುವುದು ಪೊಲೀಸರ ತನಿಖೆಯಲ್ಲಿ ಪತ್ತೆಯಾಗಿದೆ. ಪಿತೂರಿಯ ಭಾಗವಾಗಿ, ಅಬ್ದುಲ್ ಹಲವಾರು ಬಾರಿ ರಾಮ ದೇವಾಲಯದ ಬೇಹುಗಾರಿಕೆ ನಡೆಸಿದ್ದರು, ಎಲ್ಲಾ ಮಾಹಿತಿಯನ್ನು ಪಾಕಿಸ್ತಾನದ ಐಎಸ್ಐನೊಂದಿಗೆ ಹಂಚಿಕೊಂಡಿದ್ದ ಎಂದು ಹೇಳಲಾಗಿದೆ. ರಾಮಮಂದಿರ ಸ್ಫೋಟಕ್ಕೆ ಸಂಚು ರೂಪಿಸಿದ್ದ ಉತ್ತರ ಪ್ರದೇಶದ ಫೈಜಾ ಬಾದ್‌ನ ಮಿಲ್ಕಿಪುರ ನಿವಾಸಿ ಅಬ್ದುಲ್ ರೆಹ ಮಾನ್ (19) ಅವರನ್ನು ಫರಿದಾಬಾದ್‌ನಲ್ಲಿ ತಡ ರಾತ್ರಿ ನಡೆಸಿದ ದಾಳಿಯಲ್ಲಿ ಬಂಧಿಸಲಾಗಿದೆ. ದಾಳಿ ವೇಳೆ ಪಾಳುಬಿದ್ದ ಮನೆಯೊಂದರಲ್ಲಿ ಎರಡು ಜೀವಂತ ಹ್ಯಾಂಡ್ ಗ್ರೆನೇಡ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಫರಿದಾಬಾದ್ ಪೊಲೀಸರ ಸಹಾಯದಿಂದ, ಎಟಿಎಸ್ ಸಂಪೂರ್ಣ ಶೋಧ ನಡೆಸಿ, ಸಂಭಾವ್ಯ ಭಯೋತ್ಪಾದಕ ದಾಳಿಯನ್ನು ವಿಫಲಗೊಳಿಸಿದೆ. ಅಬ್ದುಲ್ ರೆಹಮಾನ್‌ನ ಭಯೋತ್ಪಾದಕ ಸಂಪರ್ಕಗಳ ಕುರಿತು ತನಿಖೆ ಮುಂದುವರೆದಿದೆ. ಮೂಲಗಳ ಪ್ರಕಾರ, ಅಯೋಧ್ಯೆಯ ರಾಮಮಂದಿರದ ಮೇಲೆ ದಾಳಿ ನಡೆಸಲು ಸಂಚು ರೂಪಿಸಿದ್ದರು ಎಂದು ಹೇಳಲಾಗುತ್ತಿದೆ. ನಾಲ್ಕು ಗಂಟೆಗಳ ತೀವ್ರ ಹುಡು ಕಾಟದ ನಂತರ, ತಂಡಗಳು ಆತನನ್ನು ವಶಕ್ಕೆ ಪಡೆದವು. ಹರಿಯಾಣ ಬಳಿ ಇಬ್ಬರು ಭಯೋತ್ಪಾದಕರ ಉಪಸ್ಥಿತಿಯನ್ನು ಗುಪ್ತಚರ ಇಲಾಖೆ ಬಹಿರಂಗಪಡಿಸಿದೆ, ಅವರಲ್ಲಿ ಒಬ್ಬನನ್ನು 19 ವರ್ಷದ ಅಬ್ದುಲ್ ರೆಹಮಾನ್ ಎಂದು ಗುರುತಿಸಲಾಗಿದೆ. ಆತನನ್ನು ಬಂಧಿಸಲಾಗಿದ್ದು ಹರಿಯಾಣದಲ್ಲಿ ಆತನ ವಿರುದ್ಧ ದೂರು ದಾಖಲಾಗಿದೆ ಎಂದು ಪೊಲೀಸ್ ಮೂಲ ಗಳು ತಿಳಿಸಿವೆ. ಗುಜರಾತ್ ಎಟಿಎಸ್ ಮೂಲದ ಪ್ರಕಾರ, ಅಬ್ದುಲ್ ರೆಹಮಾನ್ ಸಾಮಾಜಿಕ ಮಾಧ್ಯಮದ ಮೂಲಕ ಭಯೋತ್ಪಾದಕ ಸಂಘಟನೆಯೊಂದಿಗೆ ಸಂಪರ್ಕ ಹೊಂದಿದ್ದ, ಆತನ ಚಲನ-ವಲನಗಳನ್ನು ಪತ್ತೆಹಚ್ಚಲು ಹರಿಯಾಣ ಪೊಲೀಸರೊಂದಿಗೆ ಜಂಟಿ ಕಾರ್ಯಾಚರಣೆಯನ್ನು ನಡೆಸಲಾಗಿತ್ತು. ಗುಪ್ತಚರ ಇಲಾ ಖೆಯು ಅವನ ಭಾಗವಹಿಸುವಿಕೆಯನ್ನು ದೃಢಪಡಿಸಿದ ನಂತರ, ಅವನನ್ನು ವಶಕ್ಕೆ ಪಡೆಯಲಾಯಿತು. ಇದೇ ವೇಳೆ ಅನುಮಾನಾಸ್ಪದ ವೀಡಿಯೋಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಮೂಲಗಳು ಬಹಿರಂಗಪಡಿಸಿವೆ. ಅಬ್ದುಲ್ ಹಲವಾರು ದಿನಗಳಿಂದ ಪಾಲಿ ಗ್ರಾಮದಲ್ಲಿ ನಕಲಿ ಗುರುತಿನಡಿಯಲ್ಲಿ ನೆಲೆಸಿದ್ದನು. ನಮ್ಮ ತಂಡ ಆತನಿಂದ ಸ್ಥಳಕ್ಕೆ ತಲುಪುತ್ತಿದ್ದಂತೆ ಆತ ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದು ಸುತ್ತುವರೆದು ಬಂಧಿಸಲಾಯಿತು ಎಂದು ಎಟಿಎಸ್ ತಿಳಿಸಿದೆ. ಗುಜರಾತ್ ಎಟಿಎಸ್, ಪಲ್ವಾಲ್ ಎಸ್‌ಟಿಎಫ್ ಕಳೆದ ಜಂಟಿ ಕಾರ್ಯಾಚರಣೆಯಲ್ಲಿ ಫರಿದಾಬಾದ್‌ನಿಂದ ಒಬ್ಬ ಭಯೋತ್ಪಾದಕನನ್ನು ಬಂಧಿಸಿದ್ದವು. ಮೂಲಗಳ ಪ್ರಕಾರ, ಶಂಕಿತ ಭಯೋತ್ಪಾದಕನು ರಾಮ ಮಂದಿರವೇ ತನ್ನ ಗುರಿಯಾಗಿತ್ತು ಎಂದು ಸ್ಫೋಟಕ ಮಾಹಿತಿ ಬಹಿರಂಗಪಡಿಸಿದ್ದಾನೆ.





### ಉಕ್ರೇನ್‌ಗೆ ಸೇನಾ ನೆರವು ನಿಲ್ಲಿಸುವ ನಿರ್ಧಾರ ತಳೆದ ಡೊನಾಲ್ಡ್ ಟ್ರಂಪ್; ಡೂಮ್ಸ್‌ಡೇ ಆತಂಕದಲ್ಲಿ ಉಕ್ರೇನಿಯನ್ನರು

# ಝೆಲೆನ್ಸ್ಕಿ ಮೇಲಿನ ಕೋಪ ಅಧಿಕೃತವಾಗಿ ಹೊರಹಾಕಿದ ಡೊನಾಲ್ಡ್

**ವಾಷಿಂಗ್ಟನ್:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಉಕ್ರೇನ್‌ಗೆ ಸೇನಾ ನೆರವು ನಿಲ್ಲಿಸುವ ಘೋಷಣೆ ಮಾಡಿದ್ದು, ಅಮೆರಿಕದ ಸಾಮರಿಕ ಬೆಂಬಲದಿಂದ ರಷ್ಯಾದಂತಹ ದೈತ್ಯ ಸೇನಾಬಲವನ್ನು ಎದುರು ಹಾಕಿಕೊಳ್ಳುವ ಧೈರ್ಯ ತೋರಿದ್ದ ಉಕ್ರೇನ್, ಇದೀಗ ಅಕ್ಷರಶಃ ಕಂಗಾಲಾಗಿದೆ. ಹೌದು, ರಷ್ಯಾದೊಂದಿಗೆ ಶಾಂತಿ ಮಾತು ಕತೆಗೆ ಒಪ್ಪಿಕೊಳ್ಳುವಂತೆ ಡೊನಾಲ್ಡ್ ಟ್ರಂಪ್ ಉಕ್ರೇನ್ ಮೇಲೆ ಒತ್ತಡ ಹಾಕಿದ್ದು, ತಕ್ಷಣವೇ ಜಾರಿಗೆ ಬರುವಂತೆ ಉಕ್ರೇನ್‌ಗೆ ನೀಡಲಾ ಗುತ್ತಿದ್ದ ಅಮೆರಿಕದ ಸೇನಾ ನೆರವನ್ನು ತಡೆಹಿಡಿದಿರುವುದಾಗಿ ಸ್ಪಷ್ಟಪಡಿಸಿದ್ದಾರೆ. ಈ ನಿರ್ಧಾರ ವೊಲೊಡಿಮಿರ್ ಝೆಲೆನ್ಸ್ಕಿ ಮತ್ತು ಡೊನಾಲ್ಡ್ ಟ್ರಂಪ್ ನಡುವಿನ ವಾಕ್ಸಮರದಿಂದ ಕಂಗಾಲಾಗಿದ್ದ ಉಕ್ರೇನಿಯನ್ ಜನರಿಗೆ ಬರಸಿಡಿಲಿನಂತೆ ಬಂದೆರಗಿದೆ.

ಈ ಕುರಿತು ಮಾತನಾಡಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಉಕ್ರೇನ್, ರಷ್ಯಾ ನಡುವಿನ ವಿವಾದದಲ್ಲಿ ದೀರ್ಘಕಾಲೀನ ಪಾಲುದಾರನಾಗಿರಲು ಅಮೆರಿಕ ಸಿದ್ಧವಿಲ್ಲ. ವಿವಾದವನ್ನು ಶಾಂತಿಯುತವಾಗಿ ಬಗೆಹರಿಸಿಕೊಳ್ಳುವಂತೆ ನಾವು ವೊಲೊಡಿಮಿರ್ ಝೆಲೆನ್ಸ್ಕಿ, ವ್ಲಾಡಿಮಿತರ್ ಪುಟಿನ್ ಅವರಿಗೆ ಮನವಿ ಮಾಡುತ್ತೇವೆ. ಇದರ ಹೊರತಾಗಿ ಇನ್ನು ಮುಂದೆ ಉಕ್ರೇನ್‌ಗೆ ಸೇನಾ ನೆರವು ನೀಡುವುದು ಅಮೆರಿಕದಿಂದ ಸಾಧ್ಯವಾಗದ ಮಾತು ಎಂದು ಸೂಚ್ಯವಾಗಿ ಹೇಳಿದ್ದಾರೆ. ಇನ್ನು ಡೊನಾಲ್ಡ್ ಟ್ರಂಪ್ ಅವರ ನಿರ್ಧಾರವನ್ನು ಸ್ವಾಗತಿಸಿರುವ ಶ್ವೇತಭವನ, ಅಧ್ಯಕ್ಷರು ಶಾಂತಿಯ ಮೇಲೆ ತಮ್ಮ ಗಮನವನ್ನು ಕೇಂದ್ರೀಕರಿಸಿದ್ದಾರೆ. ನಮ್ಮ ಪಾಲುದಾರರು ಕೂಡ ಈ ಗುರಿಗೆ ಬದ್ಧರಾಗಿರಬೇಕು ಎಂದು ಹೇಳಿರುವುದು ಜಾಗತಿಕವಾಗಿ ಗಮನ ಸೆಳೆದಿದೆ. ಉಕ್ರೇನ್‌ಗೆ ನೀಡಲಾಗುತ್ತಿರುವ ಸೇನಾ ನೆರವನ್ನು ನಿಲ್ಲಿಸುವ ಬಗ್ಗೆ ನಾವು ಪರಿಶೀಲಿಸುತ್ತಿದ್ದೇವೆ. ಈ ಕುರಿತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಿರ್ಧಾರ ಅಂತಿಮವಾಗಿರಲಿದೆ. ಅವರ ನಿರ್ಧಾರ ಏನೆಂಬುದು ಈಗಾಗಲೇ ಜಗತ್ತಿಗೆ ತಿಳಿದಿದೆ ಎಂದು ಹೆಸರು ಹೇಳಲು ಇಚ್ಛಿಸದ ಶ್ವೇತಭವನದ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

**ನಿರ್ಧಾರ ಏನೆಂಬುದು ಜಗತ್ತಿಗೆ ತಿಳಿದಿದೆ**



**ಡೆಮಾಕ್ರೆಟಿಕ್ ಸದಸ್ಯರ ವಿರೋಧ:** ಇನ್ನು ಉಕ್ರೇನ್‌ಗೆ ನೀಡಲಾಗುತ್ತಿರುವ ಮಿಲಿಟರಿ ನೆರವನ್ನು ತಕ್ಷಣ ರದ್ದುಗೊಳಿಸುವ ಡೊನಾಲ್ಡ್ ಟ್ರಂಪ್ ನಿರ್ಧಾರವನ್ನು ಡೆಮಾಕ್ರೆಟಿಕ್ ಪಕ್ಷದ ಸದಸ್ಯರು ಟೀಕಿಸಿದ್ದಾರೆ. ಇದು ಅತ್ಯಂತ ಅಪಾಯಕಾರಿ ಮತ್ತು ಕಾನೂನುಬಾಹಿರ.. ಎಂದು ಡೆಮಾಕ್ರೆಟಿಕ್ ಸದಸ್ಯರು ಆತಂಕ ಹೊರಹಾಕಿದ್ದಾರೆ. ಜೋ ಬೈಡನ್ ಆಡಳಿತವು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಯುದ್ಧ ಅಪರಾಧಿ ಎಂದು ಬಣ್ಣಿಸಿತ್ತು. ಆದರೆ ಇದ್ಯಾವುದನ್ನು ಪರಿಗಣನೆಗೆ ತೆಗೆದುಕೊಳ್ಳಲು ಸಿದ್ಧರಿಲ್ಲದ ಡೊನಾಲ್ಡ್ ಟ್ರಂಪ್, ರಷ್ಯಾ-ಉಕ್ರೇನ್ ಯುದ್ಧದಿಂದ ಅಮೆರಿಕವನ್ನು ಬೇರ್ಪಡಿಸುವ ದಿಟ್ಟ ನಿರ್ಧಾರವನ್ನು ತಳೆದಿದ್ದಾರೆ. ಇದು ಸಹಜ ವಾಗಿ ಡೆಮಾಕ್ರೆಟಿಕ್ ಪಕ್ಷದ ಸದಸ್ಯರ ಚಿಂತೆಗೆ ಕಾರಣವಾಗಿದೆ. ಅಮೆರಿಕ ಪ್ರವಾಸ ಕೈಗೊಂಡಿದ್ದ ಉಕ್ರೇನ್ ಅಧ್ಯಕ್ಷ ವೊಲೊ ಡಿಮಿರ್ ಝೆಲೆನ್ಸ್ಕಿ, ಉಕ್ರೇನ್‌ಗೆ ಅಮೆರಿಕ ನೀಡಿರುವ ಬೆಂಬಲಕ್ಕೆ ಧನ್ಯವಾದ ಅರ್ಪಿಸಿಲ್ಲ ಎಂಬ ಕಾರಣಕ್ಕೆ, ಡೊನಾಲ್ಡ್ ಟ್ರಂಪ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರು. ಅಲ್ಲದೇ ಖನಿಜ ಒಪ್ಪಂದಕ್ಕೆ ಸಹಿ ಹಾಕುವಂತೆ ಝೆಲೆನ್ಸ್ಕಿ ಮೇಲೆ ಒತ್ತಡ ಹಾಕಿದ್ದ ಟ್ರಂಪ್, ಅಂತಿಮವಾಗಿ ಝೆಲೆನ್ಸ್ಕಿ ಅವರೊಂದಿಗೆ ತೀವ್ರ ವಾಕ್ಸಮರ ನಡೆಸಿದ್ದನ್ನು ಇಲ್ಲಿ ಸ್ಮರಿಸಬಹುದು.

**ತಡೆಹಿಡಿಯಲು ಟ್ರಂಪ್ ನಿರ್ಧಾರ**


**ಶ್ವೇತಭವನದಲ್ಲಿ ತಮ್ಮೆದುರು ಕುಳಿತು ಏರು ಧ್ವನಿಯಲ್ಲಿ ಮಾತನಾಡಿದ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ವಿರುದ್ಧ ಅಮೆರಿಕ ಅಧ್ಯಕ್ಷ ಟ್ರಂಪ್ ಅಕ್ಷರಶಃ ಕೆಂಡಾಮಂಡಲರಾಗಿದ್ದಾರೆ. ಝೆಲೆನ್ಸ್ಕಿ ವಿರುದ್ಧದ ಟ್ರಂಪ್ ಕೋಪಕ್ಕೆ ಸಾಕ್ಷಿ ದೊರೆತಿದ್ದು, ರಷ್ಯಾ ವಿರುದ್ಧದ ಯುದ್ಧದಲ್ಲಿ ಉಕ್ರೇನ್‌ಗೆ ನೀಡಲಾಗುತ್ತಿದ್ದ ಮಿಲಿಟರಿ ನೆರವನ್ನು ಸಂಪೂರ್ಣವಾಗಿ ನಿಲ್ಲಿಸುವುದಾಗಿ ಅಮೆರಿಕ ಅಧ್ಯಕ್ಷರು ಘೋಷಿಸಿದ್ದಾರೆ. ರಷ್ಯಾ-ಉಕ್ರೇನ್ ವಿವಾದಕ್ಕೆ ಶಾಂತಿಯುತ ಪರಿಹಾರ ದೊರೆಯುವ ನಿಟ್ಟಿನಲ್ಲಿ, ಉಕ್ರೇನ್‌ಗೆ ನೀಡಲಾಗುತ್ತಿದ್ದ ಸೇನಾ ನೆರವನ್ನು ತಡೆಹಿಡಿಯುವ ನಿರ್ಧಾರವನ್ನು ಟ್ರಂಪ್ ಮಾಡಿದ್ದಾರೆ ಎಂದು ಶ್ವೇತಭವನ ಸ್ಪಷ್ಟಪಡಿಸಿದೆ.**

- ಉಕ್ರೇನ್‌ಗೆ ಸೇನಾ ನೆರವು ನಿಲ್ಲಿಸುವ ನಿರ್ಧಾರ ತಳೆದ ಅಮೆರಿಕ ಅಧ್ಯಕ್ಷ
- ರಷ್ಯಾ-ಉಕ್ರೇನ್ ವಿವಾದ ಪರಿಹಾರಕ್ಕೆ ಶಾಂತಿಯುತ ಮಾರ್ಗ ಸೂಕ್ತವೆಂದ ಟ್ರಂಪ್
- ಜಗತ್ತನ್ನು ದಿಗ್‌ಭ್ರಮೆಗೊಳಿಸಿದ ಡೊನಾಲ್ಡ್ ಟ್ರಂಪ್ ಅನಿರೀಕ್ಷಿತ ನಿರ್ಧಾರ

# ಸರ್ಕಾರದ ವಿರುದ್ಧ ತೊಡೆತಟ್ಟಿದ ಬುಡಕಟ್ಟು ಸಂಘಟನೆ

**ಗುವಾಹಟಿ:** ಮಣಿಪುರದ ಕುಕಿ-ಝೋ ಸಂಘ ಟನೆಯ ಬುಡಕಟ್ಟು ಏಕತೆ ಸಮಿತಿ, ಸಮುದಾಯದ ಬೇಡಿಕೆಗಳನ್ನು ಗೌರವಿಸುವ ನಿರ್ಣಯವನ್ನು ತೆಗೆದುಕೊಳ್ಳುವವರೆಗೂ ಕುಕಿ- ಝೋ ಪ್ರದೇಶಗಳಲ್ಲಿ ಯಾವುದೇ ಮುಕ್ತ ಸಂಚಾರಕ್ಕೆ ಅವಕಾಶ ನೀಡಲಾಗುವುದಿಲ್ಲ ಎಂದು ಹೇಳಿದೆ. ಸೋಮವಾರ ನಡೆದ ಕಾರ್ಯಕ್ರಮದಲ್ಲಿ 'ಎಂಟು ಅಂಶಗಳ ನಿರ್ಣಯ'ದ ಭಾಗವಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಮಾರ್ಚ್ 8ರಿಂದ ಮಣಿ ಪುರದ ಎಲ್ಲಾ ರಸ್ತೆಗಳಲ್ಲಿ ಜನರಿಗೆ ಮುಕ್ತ ಸಂಚಾರವನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭದ್ರತಾ ಸಂಸ್ಥೆಗಳಿಗೆ ನಿರ್ದೇಶನ ನೀಡಿದ ಬೆನ್ನಲ್ಲೇ ಈ ನಿರ್ಣಯ ಕೈಗೊಳ್ಳಲಾಗಿದೆ. ಮಾರ್ಚ್ 1ರಂದು ನವದೆಹಲಿಯಲ್ಲಿ ಮಣಿಪುರ ಭದ್ರತಾ ಪರಿಸ್ಥಿತಿಯ ಕುರಿತು ಉನ್ನತ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಶಾ, ಅಡೆತಡೆಗಳನ್ನು ಸೃಷ್ಟಿಸಲು ಪ್ರಯತ್ನಿಸುವ ಯಾರಾದರೂ ಸಹ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ನಿರ್ದೇಶನ ನೀಡಿದ್ದರು. ಸಭೆಯಲ್ಲಿ ಮಣಿಪುರ ರಾಜ್ಯಪಾಲ ಅಜಯ್ ಕುಮಾರ್ ಭಲ್ಲಾ, ಕೇಂದ್ರ ಗೃಹ ಕಾರ್ಯ ದರ್ಶಿ, ಗುಪ್ತಚರ ಬ್ಯೂರೋ ನಿರ್ದೇಶಕ, ಸೇನಾ ಸಿಬ್ಬಂದಿಯ ಉಪ ಮುಖ್ಯಸ್ಥ, ಪೂರ್ವ ಕಮಾಂಡ್‌ನ ಸೇನಾ ಕಮಾಂಡರ್, ಬಿಎಸ್‌ಎಫ್, ಸಿಆರ್‌ಪಿಎಫ್ ಮತ್ತು ಅಸ್ಸಾಂ ರೈಫಲ್ಸ್‌ನ ಮಹಾನಿರ್ದೇಶಕರು, ಮಣಿಪುರದ ಭದ್ರತಾ ಸಲಹೆಗಾರ ಮತ್ತು ಗೃಹ ವ್ಯವಹಾರ ಸಚಿವಾಲಯ, ಸೇನೆ ಮತ್ತು ಮಣಿಪುರ ಆಡಳಿತದ ಹಿರಿಯ ಅಧಿಕಾರಿಗಳು ಭಾಗ ವಹಿಸಿದ್ದರು. 2023ರ ಮೇ 3ರಂದು ಜನಾಂಗೀಯ ಹಿಂಸಾಚಾರ ಭುಗಿಲೆದ್ದ ನಂತರ ಮಣಿಪುರ ಜನಾಂಗೀಯವಾಗಿ ವಿಭಜನೆಯಾಗಿಯೇ ಉಳಿದಿದೆ. ಕುಕಿ-ಝೋ ಬುಡಕಟ್ಟು ಜನಾಂಗದವರು ಪ್ರತ್ಯೇಕ ಆಡಳಿತ ಸಾಧಿಸುವವರೆಗೆ, ಯಾವುದೇ ರಾಜಿ ಅಥವಾ ಶರಣಾಗತಿ ಆಗಲ್ಲ ಎಂದು ಹೇಳಿವೆ. ಪ್ರತಿಭಟನೆಗಳನ್ನು ಪ್ರಜಾ ಪ್ರಭುತ್ವದ ಅಡಿಯಲ್ಲೇ ಮುಂದುವರಿಯುತ್ತದೆ ಎಂದು COTU ಹೇಳಿದೆ.

ಜನರ ಶ್ರೇಯೋಭಿವೃದ್ಧಿಗಿಂತ ವೈಯಕ್ತಿಕ ಹಿತಾಸಕ್ತಿಗಳಿಗೆ ಆದ್ಯತೆ ನೀಡುವ ಅಥವಾ ಸರ್ಕಾರದೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ಯಾವುದೇ ವ್ಯಕ್ತಿಯನ್ನು ದೇಶದ್ರೋಹಿ ಎಂದು COTU ಎಚ್ಚರಿಸಿದೆ.




**ಮುಕ್ತ ಸಂಚಾರಕ್ಕೆ ಅವಕಾಶ ಕೊಡಲ್ಲ**

**ಇದಲ್ಲದೆ, ಕುಕಿ-ಝೋ ಸ್ವಯಂಸೇವಕರ ಬಂಧನದ ವಿರುದ್ಧ ಅದು ಎಚ್ಚರಿಕೆ ನೀಡಿದೆ. ಕುಕಿ-ಝೋ ರಾಜಕೀಯ ಸಮಸ್ಯೆಯನ್ನು ಪರಿಹರಿಸದೆ ಸರ್ಕಾರ ಶಾಂತಿಯನ್ನು ಹೇರಿದರೆ, ಆಡಳಿತ ಸರ್ಕಾರವನ್ನು ಸಂಪೂರ್ಣವಾಗಿ ಬಹಿಷ್ಕರಿಸಲಾಗುವುದು ಎಂದು ಸಂಘಟನೆ ಹೇಳಿದೆ.**

# ದೇಶದ ಧಾರ್ಮಿಕ ಭಾವನೆಗಳೊಂದಿಗೆ ಎಸ್‌ಪಿ ಆಟವಾಡುತ್ತಿದೆ: ಸಿಎಂ ಯೋಗಿ ಆದಿತ್ಯನಾಥ್

**ಲಖನೌ:** ದೇಶದ ಜನರ ಧಾರ್ಮಿಕ ಭಾವನೆಗಳೊಂದಿಗೆ ಸಮಾಜವಾದಿ ಪಕ್ಷವು, ಆಟವಾಡುತ್ತಿದೆ ಎಂದು ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಆರೋಪಿಸಿದ್ದಾರೆ. ವಿಧಾನಸಭೆ ವಿರೋಧ ಪಕ್ಷದ ನಾಯಕ ಮಾತಾ ಪ್ರಸಾದ್ ಪಾಂಡೆ ಆದಿತ್ಯನಾಥ್ ಅವರನ್ನು ಕೋಮುವಾದಿ ಎಂದು ಕರೆದ ಬೆನ್ನಲ್ಲೇ ಯೋಗಿ ಆದಿತ್ಯನಾಥ್ ಈ ಹೇಳಿಕೆ ನೀಡಿದ್ದಾರೆ. ಸದನವನ್ನು ಉದ್ದೇಶಿಸಿ ಭಾಷಣ ಮಾಡಿದ ಆದಿತ್ಯನಾಥ್, ದೇಶವು ಎಲ್ಲಿಯವರೆಗೆ ರಾಮ, ಕೃಷ್ಣ, ಆದಿ ಶಂಕರಾಚಾರ್ಯರನ್ನು ಮಾರ್ಗ ದರ್ಶಕರನ್ನಾಗಿ ಪರಿಗಣಿಸುತ್ತದೆಯೋ ಅಲ್ಲಿಯವರೆಗೆ ಯಾವುದೇ ಶಕ್ತಿಗೂ ದೇಶಕ್ಕೆ ಹಾನಿಯನ್ನುಂಟು ಮಾಡಲು ಸಾಧ್ಯವಿಲ್ಲ ಎಂದು ಸಮಾಜವಾದಿ ನಾಯಕ ರಾಮ್ ಮನೋಹರ್ ಲೋಹಿಯಾ ಅವರ ಹೇಳಿಕೆಯನ್ನು ಉಲ್ಲೇಖಿಸಿದರು.

ಈ ಮೂವರು ಮಹಾನ್ ವ್ಯಕ್ತಿಗಳು ದೇಶದ ಏಕತೆಯ ಅಡಿಪಾಯವನ್ನು ರೂಪಿಸುತ್ತಾರೆ. ಈ ದೇಶದ ಜನರು ಅವರನ್ನು ಗೌರವಿಸುವವರೆಗೆ, ಭಾರತವು ಬಲಿಷ್ಠವಾಗಿ ಉಳಿಯುತ್ತದೆ ಎಂದು ಅವರು ಹೇಳಿದ್ದಾರೆ. ಇಂದಿನ ಸಮಾಜವಾದಿ ಪಕ್ಷವು ಲೋಹಿಯಾ ಅವರ ಮೌಲ್ಯಗಳು, ಆದರ್ಶ ಗಳಿಂದ ದೂರ ಸರಿದಿದೆ ಎಂದು ಆದಿತ್ಯನಾಥ್ ಆರೋಪಿಸಿದ್ದಾರೆ. ನೀವು ದೇಶದ ಧಾರ್ಮಿಕ ಭಾವನೆಗಳೊಂದಿಗೆ ಆಟವಾಡುತ್ತಿದ್ದೀರಿ. ನಮ್ಮ ಚಿಂತನೆಗಳನ್ನು ಕೋಮುವಾದ ಎಂದು ಕರೆಯುತ್ತೀರಿ. ನಾವು ಎಲ್ಲಾರನ್ನೂ ಒಳಗೊಂಡ ಅಭಿವೃದ್ಧಿಯಲ್ಲಿ ನಂಬಿಕೆ ಇಟ್ಟಿದ್ದೇವೆ. ನಮ್ಮ ಮಾರ್ಗದರ್ಶಿ ತತ್ವ ಸರ್ವೇ ಭವಂತು ಸುಖಿನಃ, ಸರ್ವೇ ಸಂತು ನಿರಾಮಯ ಎಲ್ಲಾರೂ ಸಂತೋಷವಾಗಿರಲಿ, ಎಂಬು ದಾಗಿದೆ. ಅದು ಹೇಗೆ ಕೋಮುವಾದವಾಗುತ್ತದೆ ಎಂದು ಪ್ರಶ್ನಿಸಿದ್ದಾರೆ.



# ಸಚಿವ ಸ್ಥಾನಕ್ಕೆ ಧನಂಜಯ್ ಮುಂಡೆ ರಾಜೀನಾಮೆ ?



**ಮುಂಬೈ:** ಸರಪಂಚ್ ಸಂತೋಷ್ ದೇಶಮುಖ್ ಹತ್ಯೆ ಪ್ರಕರಣದಲ್ಲಿ ಆಪ್ತ ಸಹಾಯಕ ಆರೋಪಿಯಗಿರುವುದರಿಂದ ನೀವು ರಾಜೀನಾಮೆ ನೀಡುವಂತೆ ಸಚಿವ ಧನಂಜಯ್ ಮುಂಡೆ ಅವರಿಗೆ ಮಹಾರಾಷ್ಟ್ರ ಮುಖ್ಯ ಮಂತ್ರಿ ದೇವೇಂದ್ರ ಫಡ್ನವೀಸ್ ಸೂಚನೆ ನೀಡಿದ್ದಾರೆ. ದೇಶಮುಖ್ ಹತ್ಯೆ ಪ್ರಕರಣದಲ್ಲಿ ಸಿಐಡಿ ಸಲ್ಲಿಸಿದ ಆರೋಪಪಟ್ಟಿಯಲ್ಲಿ ಸಚಿವರ ಆಪ್ತ ಸಹಾಯಕ ವಾಲಿಕ್‌ಕರದ್ ಆರೋಪಿಯನ್ನಾಗಿ ಹೆಸರಿಸಿರುವ ಕಾರಣ ಉಪಮುಖ್ಯಮಂತ್ರಿ ಅಜಿತ್ ಪವಾರ್ ಕಳೆದ ರಾತ್ರಿ ಫಡ್ನವೀಸ್ ಅವರನ್ನು ಭೇಟಿ ಮಾಡಿ ಮಾತುಕತೆ ನಂತರ ಈ ಬೆಳವಣಿಗೆ ನಡೆದಿದೆ. ರಾಜ್ಯ ಆಹಾರ, ನಾಗರಿಕ ಸರಬರಾಜು ಸಚಿವ ಮುಂಡೆ ಅವರು ಬೀಡ್ ಜಿಲ್ಲೆಯ ಪಾರ್ಲಿಯ ಕ್ಷೇತ್ರದ ಎನ್‌ಸಿಪಿ ಶಾಸಕರಾಗಿದ್ದಾರೆ. ಅವರು ಈ ಹಿಂದೆ ಬೀಡ್‌ನ ಉಸ್ತುವಾರಿ ಸಚಿವರಾಗಿದ್ದರು.

ಧನಂಜಯ್ ಮುಂಡೆ ಅವರನ್ನು ಮಂಗಳವಾರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಫಡ್ನವೀಸ್ ಕೇಳಿಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿದೆ ಪ್ರಸ್ತುತ, ಎನ್‌ಸಿಪಿ ಮುಖ್ಯಸ್ಥ ಅಜಿತ್ ಪವಾರ್ ಪುಣೆ ಜೊತೆಗೆ ಬೀಡ್ ಜಿಲ್ಲೆಯ ಉಸ್ತುವಾರಿ ಸಚಿವರಾಗಿದ್ದಾರೆ. ಬೀಡ್‌ನ ಮಸಾಜೋಗ್ ಗ್ರಾಮದ ಸರಪಂಚ ದೇಶಮುಖ್ ಅವರನ್ನು ಕಳೆದ ವರ್ಷ ಡಿ. 9 ರಂದು ಅಪಹರಿಸಿ, ಚಿತ್ರಹಿಂಸೆ ನೀಡಿ ಕೊಲೆ ಮಾಡಲಾಗಿತ್ತು. ದೇಶಮುಖ್ ಹತ್ಯೆ ಮತ್ತು ಸಂಬಂಧಿತ ಎರಡು ಪ್ರಕರಣಗಳಿಗೆ ಸಂಬಂಧಿಸಿದಂತೆ ರಾಜ್ಯ ಅಪರಾಧ ತನಿಖಾ ಇಲಾಖೆ (ಸಿಐಡಿ) ಕಳೆದ ಫೆ.27 ರಂದು ಬೀಡ್ ಜಿಲ್ಲೆಯ ನ್ಯಾಯಾಲಯದಲ್ಲಿ 1,200 ಕ್ಕೂ ಹೆಚ್ಚು ಪುಟಗಳ ಆರೋಪಪಟ್ಟಿ ಸಲ್ಲಿಸಿದೆ. ಈವರೆಗೆ ಏಳು ಜನರನ್ನು ಬಂಧಿಸಲಾಗಿದೆ ಮತ್ತು ಎಂಸಿಒಸಿಎ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಆರೋಪಿಗಳಲ್ಲಿ ಒಬ್ಬರು ಇನ್ನೂ ತಲೆಮರೆಸಿಕೊಂಡಿದ್ದಾರೆ.

# ರೈತ ಸಂಘದ ಹಲವು ನಾಯಕರನ್ನು ಬಂಧಿಸಿದ ಪಂಜಾಬ್ ಪೊಲೀಸರು

**ಚಂಡೀಗಢ:** ಸಂಯುಕ್ತ ಕಿಸಾನ್ ಮೋರ್ಚಾ ಮಾರ್ಚ್ 5 ರಂದು ಚಂಡೀಗಢ ಚಲೋಗೆ ಕರೆ ನೀಡಿದ್ದು, ಬುಧವಾರ ಪ್ರತಿಭಟನಾ ಮೆರವಣಿಗೆಗೆ ಸಿದ್ಧವಾಗಿದ್ದ ಹಲವು ರೈತರ ಮುಖಂಡರನ್ನು ಪಂಜಾಬ್ ಪೊಲೀಸರು ಮಂಗಳವಾರ ಬಂಧಿಸಿದ್ದಾರೆ. ಮಾರ್ಚ್ 3 ರಂದು ರೈತ ನಾಯಕರು ಮತ್ತು ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ನಡುವಿನ ಮಾತುಕತೆ ವಿಫಲವಾದ ನಂತರ ರೈತರು ಚಂಡೀಗಢ ಚಲೋಗೆ ಕರೆ ನೀಡಿದ್ದಾರೆ. ಪಂಜಾಬ್ ಪೊಲೀಸರು ಮಧ್ಯರಾತ್ರಿ ಕಾರ್ಯಾಚರಣೆಯಲ್ಲಿ ರಾಜ್ಯಾದ್ಯಂತ ಹಲವಾರು ರೈತ ಸಂಘಗಳ ನಾಯಕರ ನಿವಾಸಗಳ ಮೇಲೆ ದಾಳಿ ನಡೆಸಿ ಅವರನ್ನು ಬಂಧಿಸಿದ್ದಾರೆ. ಏತನ್ಮಧ್ಯೆ, ರೈತ ನಾಯಕರನ್ನು ಬಂಧಿಸಿದ್ದಕ್ಕಾಗಿ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ವಿರುದ್ಧ ವಾಗ್ದಾಳಿ ನಡೆಸಿದ ವಿರೋಧ ಪಕ್ಷದ ನಾಯಕರು, ಇದು ಸರ್ಕಾರದ ರೈತ ವಿರೋಧಿ ಮನಸ್ಥಿತಿಯನ್ನು ತೋರಿಸುತ್ತದೆ ಎಂದು ಟೀಕಿಸಿದ್ದಾರೆ. ಆದಾಗ್ಯೂ, ರೈತ ಸಂಘದ ನಾಯಕರು ಪ್ರತಿಭಟನೆಗೂ ಮುಂಚಿತವಾಗಿ ರಾಜ್ಯ ಸರ್ಕಾರದಿಂದ ಇಂತಹ ಕ್ರಮ ನಿರೀಕ್ಷಿಸಿತ ಎಂದಿದ್ದಾರೆ.

ಪೊಲೀಸರು ಬಂಧಿಸಲು ಬಂದಾಗ ಬೆಳಗ್ಗೆ ಹೆಚ್ಚಿನ ನಾಯಕರು ಮನೆಯಲ್ಲಿ ಇರಲಿಲ್ಲ. ಅವರಲ್ಲಿ ಕೆಲವರನ್ನು ಬಂಧಿಸಲಾಗಿದ್ದರೂ, ದಾಳಿಯ ಸಮಯದಲ್ಲಿ ಅನೇಕ ರೈತ ನಾಯಕರು ಇರಲಿಲ್ಲ ಎಂದು ರೈತ ಮುಖಂಡರೊಬ್ಬರು ಹೇಳಿದ್ದಾರೆ.

ಪೊಲೀಸರು ಬಂಧಿಸಿದ ಸಂಯುಕ್ತ ಕಿಸಾನ್ ಮೋರ್ಚಾದ ರೈತ ನಾಯಕರಲ್ಲಿ ಪ್ರೇಮ್ ಸಿಂಗ್ ಭಂಗು, ರುಲ್ದು ಸಿಂಗ್ ಮಾನ್ಸಾ, ಹರಿಂದರ್ ಸಿಂಗ್ ಲಖೋವಾಲ್, ಮಹೇಶ್ ಚಂದರ್ ಶರ್ಮಾ ಮತ್ತು ಪರಮದೀಪ್ ಸಿಂಗ್ ಬೈದ್ವಾನ್ ಸೇರಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಪಂಜಾಬ್ ಪೊಲೀಸರು ಎಸ್‌ಕೆಎಂ ನಾಯಕರ ನಿವಾಸಗಳ ಮೇಲೆ ಮಂಗಳವಾರ ಬೆಳಗಿನ ಜಾವ ದಾಳಿ ನಡೆಸಿದ್ದಾರೆ ಎಂದು ಭಾರತೀಯ ಕಿಸಾನ್ ಯೂನಿಯನ್ (ಲಖೋವಾಲ್) ಪ್ರಧಾನ ಕಾರ್ಯದರ್ಶಿ ಹರಿಂದರ್ ಸಿಂಗ್ ಲಖೋವಾಲ್ ಹೇಳಿದ್ದಾರೆ. ಇಂತಹ ಕ್ರಮಗಳಿಂದ ಸರ್ಕಾರ ರೈತರ ಧ್ವನಿಯನ್ನು ಹತ್ತಿಕ್ಕಲು ಸಾಧ್ಯವಿಲ್ಲ. ನಾವು ವಿವಿಧ ರೈತರ ಬೇಡಿಕೆಗಳನ್ನು ಬೆಂಬಲಿಸಿ ಹೋರಾಡುತ್ತಿದ್ದೇವೆ ಎಂದು ಅವರು ತಿಳಿಸಿದ್ದಾರೆ.



# ಸುಮಾರು 8,000 ಸರ್ಕಾರಿ ಶಾಲೆಗಳಲ್ಲಿ ಒಬ್ಬರೇ ಶಿಕ್ಷಕರು: ಶಿಕ್ಷಣ ಸಚಿವ

**ರಾಂಚಿ:** ಜಾರ್ಖಂಡ್‌ನಲ್ಲಿ ಸುಮಾರು 7,930 ಸರ್ಕಾರಿ ಶಾಲೆಗಳು ತಲಾ ಒಬ್ಬ ಶಿಕ್ಷಕರೊಂದಿಗೆ ಕಾರ್ಯನಿರ್ವಹಿಸುತ್ತಿವೆ ಎಂದು ಶಿಕ್ಷಣ ಸಚಿವ ರಾಮದಾಸ್ ಸೊರೇನ್ ಅವರು ಮಂಗಳವಾರ ತಿಳಿಸಿದ್ದಾರೆ. ಶಿಕ್ಷಕರ ಬಿಕ್ಕಟ್ಟಿನ ಕುರಿತು ವಿಧಾನಸಭೆಯಲ್ಲಿ ಬಿಜೆಪಿ ಶಾಸಕ ರಾಜ್ ಸಿನ್ಹಾ ಅವರ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ ಸೊರೇನ್, ಈ ಏಕ ಶಿಕ್ಷಕ ಶಾಲೆಗಳಲ್ಲಿ 3.81 ಲಕ್ಷ ವಿದ್ಯಾರ್ಥಿಗಳು ದಾಖಲಾಗಿದ್ದಾರೆ ಎಂದು ಹೇಳಿದರು. 103 ಶಾಲೆಗಳು ಯಾವುದೇ ವಿದ್ಯಾರ್ಥಿಗಳಿಲ್ಲದೆ ಕಾರ್ಯನಿರ್ವಹಿಸುತ್ತಿವೆ ಮತ್ತು ಅವುಗಳಲ್ಲಿ 17 ಶಿಕ್ಷಕರು ಕೆಲಸ ಮಾಡುತ್ತಿದ್ದಾರೆ ಎಂದು ನಂತರ ಜಾರ್ಖಂಡ್ ಶಿಕ್ಷಣ ಸಚಿವರು ಸದನಕ್ಕೆ ಮಾಹಿತಿ ನೀಡಿದರು.

ವಿದ್ಯಾರ್ಥಿಗಳನ್ನು ಮರಳಿ ಕರೆತರಲು ನಾವು ಆಯಾ ಪ್ರದೇಶಗಳಲ್ಲಿ ಶಾಲಾ ಚಲೋ ಅಭಿಯಾನ'ದ ಮಾದರಿಯಲ್ಲಿ ಅಭಿಯಾನ ನಡೆಸುತ್ತಿದ್ದೇವೆ ಎಂದು ಅವರು ಹೇಳಿದರು. 26,000 ಸಹಾಯಕ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯ ಹಂತದಲ್ಲಿದೆ ಎಂದು ಸಚಿವರು ತಿಳಿಸಿದರು.

# ಆನ್‌ಲೈನ್ ಗೇಮ್ ಗೀಳು: ತಂದೆ-ತಾಯಿ, ಸಹೋದರಿಯನ್ನು ಕೊಂದ ಯುವಕ

**ಪಾರಾದೀಪ್:** ಆನ್‌ಲೈನ್ ಗೇಮ್ ಆಡದಂತೆ ಮನೆಯಲ್ಲಿ ವಿರೋಧ ವ್ಯಕ್ತಪಡಿಸಿದ ಕಾರಣಕ್ಕಾಗಿ, ತಂದೆ, ತಾಯಿ ಮತ್ತು ಸಹೋದರಿಯನ್ನು ಹತ್ಯೆ ಮಾಡಿರುವ ಘಟನೆ ಒಡಿಶಾದ ಜಗತ್‌ಸಿಂಗ್‌ಪುರದಲ್ಲಿ ನಡೆದಿದೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ. ಆರೋಪಿಯನ್ನು ಸೂರ್ಯಕಾಂತ್ ಸೇಥಿ (21), ಕಾಲೇಜು ವಿದ್ಯಾರ್ಥಿ ಎಂದು ಗುರುತಿಸಲಾಗಿದೆ. ಆನ್‌ಲೈನ್ ಗೇಮ್ ಆಡದಂತೆ ಕುಟುಂಬಸ್ಥರಿಂದ ಭಾರಿ ವಿರೋಧ ವ್ಯಕ್ತವಾಗಿದ್ದು, ಇದರಿಂದ ವಿಪರೀತ ಕೋಪಕೊಂಡ ಸೂರ್ಯಕಾಂತ್, ತಂದೆ-ತಾಯಿ ಮತ್ತು ಸಹೋದರಿಯನ್ನು ಹತ್ಯೆ ಮಾಡಿದ್ದಾನೆ. ಬಳಿಕ ಗ್ರಾಮವೊಂದರ ಬಳಿ ತಲೆಮರೆಸಿಕೊಂಡಿದ್ದನು ಎಂದು ಪೊಲೀಸ್ ವರಿಷ್ಠಾಧಿಕಾರಿ ಭವಾನಿ ಶಂಕರ್ ಮಾಹಿತಿ ನೀಡಿದ್ದಾರೆ.

ಈ ಪ್ರಕರಣ ಸಂಬಂಧ ಆರೋಪಿಯನ್ನು ಬಂಧಿಸಲಾಗಿದ್ದು, ತನಿಖೆ ಮುಂದುವರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಪುನರ್‌ವಸತಿ ಕೇಂದ್ರವಾದ ವಂತಾರಕ್ಕೆ ಮೋದಿ ಭೇಟಿ

**ಜಾಮ್ ನಗರ್:** ಮೂರು ದಿನಗಳ ಪ್ರವಾಸಕ್ಕಾಗಿ ಗುಜರಾತ್‌ನಲ್ಲಿರುವ ಪ್ರಧಾನಿ ಮೋದಿ, ಮಾ.04 ರಂದು ಅನಂತ್ ಅಂಬಾನಿಯವರ ಪ್ರಾಣಿಗಳ ರಕ್ಷಣೆ, ಸಂರಕ್ಷಣೆ ಮತ್ತು ಪುನರ್‌ವಸತಿ ಕೇಂದ್ರವಾದ ವಂತಾರಕ್ಕೆ ಭೇಟಿ ನೀಡಿ ಉದ್ಘಾಟಿಸಿದರು. ನಂತ್ ಅಂಬಾನಿ ಒಡೆತನದ ವಂತಾರ ಪ್ರಾಣಿ ರಕ್ಷಣಾ ಕೇಂದ್ರವಾಗಿದ್ದು, ಅನಾಥ ಪ್ರಾಣಿಗಳನ್ನು ಪ್ರಾಣಿಗಳನ್ನು ಸಂರಕ್ಷಿಸುವ ಉದ್ದೇಶದಿಂದ ರಿಲಯನ್ಸ್ ಫೌಂಡೇಶನ್ ವಂತಾರಾ ಎಂಬ ಸಮಗ್ರ ಯೋಜ ನೆಯನ್ನು ಪ್ರಾರಂಭಿಸಿದೆ. ಬಹ್ರೇನ್‌ನಲ್ಲಿ ಪ್ರಾಣಿ ಸಂಗ್ರಹಾಲಯದಲ್ಲಿ ಪ್ರಾಣಿಗಳನ್ನು ಸಾಕಲು ಸಾಧ್ಯವಾಗದೆ ಕೈಬಿಡಲಾಗಿತ್ತು. 200 ಪ್ರಾಣಿಗಳಿಗೆ ಜಾಮ್ ನಗರ ದಲ್ಲಿರುವ ವಂತಾರದಲ್ಲಿ ಪುನರ್ವಸತಿ ಕಲ್ಪಿಸಲಾಗಿದೆ. ಪ್ರಧಾನಿ ಈ ಕೇಂದ್ರಕ್ಕೆ ಭೇಟಿ ನೀಡಿ ಸಮಯ ಕಳೆದಿದ್ದಾರೆ. ವಂತಾರದಲ್ಲಿ 2,000 ಕ್ಕೂ ಹೆಚ್ಚು ಪ್ರಭೇದಗಳ ಪ್ರಾಣಿಗಳಿದ್ದು, ರಕ್ಷಿಸಲಾಗಿದೆ, ಅಳಿವಿನಂಚಿನಲ್ಲಿರುವ ಮತ್ತು ಅಪಾಯದಲ್ಲಿರುವ ಪ್ರಾಣಿಗಳು 1.5 ಲಕ್ಷ ಪ್ರಾಣಿಗಳಿಗೆ ಆಶ್ರಯ ಕಲ್ಪಿಸಲಾಗಿದೆ. ಇದು ರಿಲಯನ್ಸ್ ಜಾಮ್‌ನಗರ ಸಂಸ್ಕರಣಾಗಾರ ಸಂಕೀರ್ಣದಲ್ಲಿ 3000 ಎಕರೆಗಳಷ್ಟು ವಿಸ್ತಾರವಾಗಿದ್ದು, ಅತ್ಯಾಧುನಿಕ ಪ್ರಾಣಿ ರಕ್ಷಣಾ ಪುನರ್ವಸತಿ ಕೇಂದ್ರವಾಗಿದೆ. ಪ್ರಧಾನಿ ಮೋದಿ ಪುನರ್ವಸತಿ ಕಲ್ಪಿಸಲಾದ ವಿವಿಧ ಜಾತಿಯ ಪ್ರಾಣಿಗಳೊಂದಿಗೆ ನಿಕಟ ವಾಗಿ ಒಡನಾಡುತ್ತಿರುವ, ಸಮಯ ಕಳೆಯುತ್ತಿ ರುವುದನ್ನು ಕಾಣಬಹುದಾಗಿದೆ.

ಪ್ರಧಾನಿ ಮೋದಿ ಒರಾಂಗುಟನ್‌ಗಳು, ಏಷ್ಯಾಟಿಕ್ ಸಿಂಹದ ಮರಿಗಳು, ಬಿಳಿ ಸಿಂಹದ ಮರಿ, ಅಪರೂಪದ ಮತ್ತು ಅಳಿವಿನಂಚಿನಲ್ಲಿರುವ ಪ್ರಭೇದವಾಗಿರುವ ಮೋಡದ ಚಿರತೆ ಮರಿ ಸೇರಿದಂತೆ ಇತರ ಪ್ರಾಣಿಗಳೊಂದಿಗೆ ಆಟವಾಡುವುದನ್ನು ಮತ್ತು ಆಹಾರ ನೀಡುವ ವಿಡಿಯೋ ವೈರಲ್ ಆಗತೊಡಗಿದೆ. ಪ್ರಧಾನಿ ಮೋದಿ ಅವರು ವಂತಾರಾದ ಕೇಂದ್ರದಲ್ಲಿ ವಿವಿಧ ಸೌಲಭ್ಯಗಳನ್ನು ಅನ್ವೇಷಿಸಿದರು. ಅವರು ವಂತಾರಾದ ವನ್ಯಜೀವಿ ಆಸ್ಪತ್ರೆಗೆ ಭೇಟಿ ನೀಡಿದರು ಮತ್ತು MRI, CT ಸ್ಕ್ಯಾನ್‌ಗಳು, ICUಗಳು ಸೇರಿದಂತೆ ಇತರವುಗಳನ್ನು ಹೊಂದಿರುವ ಪಶುವೈದ್ಯಕೀಯ ಸೌಲಭ್ಯಗಳನ್ನು ವೀಕ್ಷಿಸಿದರು ಮತ್ತು ವನ್ಯಜೀವಿ ಅರಿವಳಿಕೆ, ಹೃದ್ರೋಗ, ನೆಫ್ರಾಲಜಿ, ಎಂಡೋಸ್ಕೋಪಿ, ದಂತಚಿಕಿತ್ಸೆ, ಆಂತರಿಕ ಔಷಧ ಇತ್ಯಾದಿಗಳನ್ನು ಒಳಗೊಂಡ ಬಹು ವಿಭಾಗಗಳನ್ನು ಸಹ ವೀಕ್ಷಿಸಿದರು.



# ಪಾಕ್ ವ್ಯಾಪ್ತಿಯ ಸಿಂಧು ನದಿಯಲ್ಲಿ 80,000 ಕೋಟಿರೂ. ಚಿನ್ನದ ನಿಕ್ಷೇಪ ಪತ್ತೆ

**ಇಸ್ಲಾಮಾಬಾದ್:** ಆರ್ಥಿಕವಾಗಿ ದಿವಾಳಿ ಅಂಚಿನಲ್ಲಿರುವ ಪಾಕಿಸ್ತಾನದಲ್ಲಿ ಬರೋಬ್ಬರಿ 80 ಸಾವಿರ ಕೋಟಿ ಮೌಲ್ಯದ ಚಿನ್ನದ ನಿಕ್ಷೇಪ ಪತ್ತೆಯಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಪಂಜಾಬ್ ಪ್ರಾಂತ್ಯದ ಅಟಾಕ್ ನಗರದ ಕಡೆಯಿಂದ ಹಾದು ಹೋಗುವ ಮಾರ್ಗದಲ್ಲಿ ನಿಕ್ಷೇಪ ಪತ್ತೆಯಾಗಿದೆ. 127 ಸ್ಥಳಗಳಲ್ಲಿನ ಮಾದರಿಯನ್ನು ಸಂಗ್ರಹಿಸಲಾಗಿ ಪರಿಶೀಲನೆ ನಡೆಸಿರುವ ಭೂವೈಜ್ಞಾನಿಕ ಸರ್ವೇಕ್ಷಣಾ ಇಲಾಖೆ ಚಿನ್ನ ಇರುವುದನ್ನು ದೃಢಪಡಿಸಿದೆ ಎಂದು ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಮಾಜಿ ಗಣಿ ಸಚಿವ ಇಬ್ರಾಹಿಂ ಹಸನ್ ಮರಾದ್ ಈಚೆಗೆ ಹೇಳಿದ್ದರು. ಪಂಜಾಬ್ ಪ್ರಾಂತ್ಯದ ಸಿಂಧು ನದಿ ದಡದ 32 ಕಿ.ಮೀ. ದೂರದಲ್ಲಿ ಚಿನ್ನದ ನಿಕ್ಷೇಪ ಪತ್ತೆಯಾಗಿದೆ.



ಇದು ರಾಷ್ಟ್ರದ ಆರ್ಥಿಕ ಪ್ರಗತಿಗೆ ನೆರವಾಗಬಹುದು ಎಂದು ಸರ್ಕಾರಿ ಸ್ವಾಮ್ಯದ ರಾಷ್ಟ್ರೀಯ ಎಂಜಿನಿಯರಿಂಗ್ ಸೇವೆಗಳ ಪಾಕಿಸ್ತಾನ (ಎನ್‌ಇಎಸ್‌ಪಿಎಕೆ), ಪಂಜಾಬ್‌ನ ಗಣಿ ಮತ್ತು ಖನಿಜಗಳ ಇಲಾಖೆ ಅಂದಾಜಿಸಿದೆ. ಹಿಮಾಲಯದಲ್ಲಿ ಹುಟ್ಟುವ ಸಿಂಧು ನದಿ ಭಾರತದ ಮೂಲಕ ಪಾಕಿಸ್ತಾನ ಪ್ರವೇಶಿಸುತ್ತದೆ. ಸಿಂಧು ನದಿ ಪ್ರವೇಶಿಸುವ ನಿಖರ ಸ್ಥಳದಲ್ಲಿ ಚಿನ್ನದ ನಿಕ್ಷೇಪ ಪತ್ತೆಯಾಗಿದೆ ಎಂದು ಭೂಗರ್ಭಶಾಸ್ತ್ರಜ್ಞರು ಹೇಳಿದ್ದಾರೆ. ಐತಿಹಾಸಿಕವಾಗಿ ನೈಸರ್ಗಿಕ ಸಂಪನ್ಮೂಲಗಳಿಂದ ಸಮೃದ್ಧವಾಗಿರುವ ಸಿಂಧು ಕಣಿವೆ ಪ್ರದೇಶದಲ್ಲಿ ಬಹಳ ಹಿಂದಿನಿಂದಲೂ ಚಿನ್ನ ಮತ್ತು ಇತರ ಅಮೂಲ್ಯ ಲೋಹಗಳು ಪತ್ತೆಯಾಗಿವೆ ಎಂದು ಅವರು ತಿಳಿಸಿದ್ದಾರೆ. ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಪಾಕಿಸ್ತಾನವು ಈಚೆಗೆ ಚೀನಾ, ಯುಎಇ ಮತ್ತು ಸೌದಿ ಅರೇಬಿಯಾದಿಂದ ಹಣಕಾಸಿನ ನೆರವು ಕೇಳಿತ್ತು.

### ಫೆಬ್ರವರಿ 11 ರ ನ್ಯಾಯಾಲಯದ ಆದೇಶದಲ್ಲಿ, ಮೇಲ್ಮನವಿದಾರರು ಮಾಹಿತಿದಾರರನ್ನು ಮಿಯಾನ್-ಟಿಯಾನ್ ಮತ್ತು ಪಾಕಿಸ್ತಾನಿ ಎಂದು ಕರೆಯುವ ಮೂಲಕ ಅವರ ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡಿದ್ದಾರೆ ಎಂದು ಆರೋಪಿಸಲಾಗಿತ್ತು.

# ನೀನು ಪಾಕಿಸ್ತಾನಿ ಎಂದು ಟೀಕಿಸುವ ಮುನ್ನ ಇನ್ನು ಮುಂದೆ ಯೋಚಿಸಬೇಕಿಲ್ಲ

**ನವದೆಹಲಿ:** ಮಿಯಾನ್-ಟಿಯಾನ್, ಪಾಕಿಸ್ತಾನಿ ಎಂಬ ಪದಗಳನ್ನು ಬಳಸುವುದು ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡುವ ಅಪರಾಧವಲ್ಲ ಆದರೆ ಅದು ಕೆಟ್ಟ ಅಭಿರುಚಿಯ ಹೇಳಿಕೆ ಎಂದು ಕೋರ್ಟ್ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ನ್ಯಾಯಮೂರ್ತಿಗಳಾದ ಬಿ.ವಿ. ನಾಗರತ್ನ, ಸತೀಶ್ ಚಂದ್ರ ಶರ್ಮಾ ಅವರ ಪೀಠ ಜಾರ್ಖಂಡ್‌ನ ಚಾಸ್‌ನ ಉಪ-ವಿಭಾಗೀಯ ಕಚೇರಿಯಲ್ಲಿ ಉರ್ದು ಭಾಷಾಂತರಕಾರ ಮತ್ತು ಮಾಹಿತಿ ಹಕ್ಕು (ಆರ್‌ಟಿಐ) ನ ಕಾರ್ಯಕಾರಿ ಗುಮಾಸ್ತರು ಸಲ್ಲಿಸಿದ ಕ್ರಿಮಿನಲ್ ಪ್ರಕರಣದಿಂದ ವ್ಯಕ್ತಿಯನ್ನು ಖುಲಾಸೆಗೊಳಿಸಿತು. ಫೆಬ್ರವರಿ 11 ರ ನ್ಯಾಯಾಲಯದ ಆದೇಶದಲ್ಲಿ, ಮೇಲ್ಮನವಿದಾರರು ಮಾಹಿತಿದಾರರನ್ನು ಮಿಯಾನ್-ಟಿಯಾನ್, ಪಾಕಿಸ್ತಾನಿ ಎಂದು ಕರೆಯುವ ಮೂಲಕ ಅವರ ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡಿದ್ದಾರೆ ಎಂದು ಆರೋಪಿಸಲಾಗಿತ್ತು.

ನಿಸ್ಸಂದೇಹವಾಗಿ, ಈ ಹೇಳಿಕೆಗಳು ಕಳಪೆ ಅಭಿರುಚಿಯಿಂದ ಕೂಡಿವೆ. ಆದಾಗ್ಯೂ, ಇದು ಮಾಹಿತಿದಾರರ ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡುವುದಿಲ್ಲ. ಆದ್ದರಿಂದ,

ಮೇಲ್ಮನವಿದಾರರನ್ನು ಸೆಕ್ಷನ್ 298 ಐಪಿಸಿ ಅಡಿಯಲ್ಲಿಯೂ ಬಿಡುಗಡೆ ಮಾಡಲಾಗುತ್ತದೆ ಎಂದು ನಾವು ಅಭಿಪ್ರಾಯಪಟ್ಟಿದ್ದೇವೆ. ಐಪಿಸಿಯ ಸೆಕ್ಷನ್ 298 ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡುವ ಉದ್ದೇಶಪೂರ್ವಕ ಉದ್ದೇಶದಿಂದ ಮಾಡಿದ ಪದಗಳು ಅಥವಾ ಹೇಳಿಕೆಗಳಿಗೆ ಸಂಬಂಧಪಟ್ಟಿದ್ದಾಗಿದೆ. ಆರೋಪಿ ಹರಿನಂದನ್ ಸಿಂಗ್, ಬೊಕಾರೊದ ಹೆಚ್ಚುವರಿ ಕಲೆಕ್ಟರ್-ಕಮ್-ಫಸ್ಟ್ ಮೇಲ್ಮನವಿ ಪ್ರಾಧಿಕಾರದಿಂದ ಮಾಹಿತಿ ಹಕ್ಕು ಕಾಯ್ದೆಯಡಿಯಲ್ಲಿ ಮಾಹಿತಿ ಕೋರಿದ್ದು, ಮಾಹಿತಿಯನ್ನು ಅವರಿಗೆ ಕಳುಹಿಸಲಾಗಿದೆ ಎಂದು ದಾಖಲಾಗಿದೆ. ಆದಾಗ್ಯೂ, ನೋಂದಾಯಿತ ಅಂಚೆ ಮೂಲಕ ಕಚೇರಿಯಿಂದ ಕಳುಹಿಸಲಾದ ದಾಖಲೆಗಳನ್ನು ತಿರುಚಿದ ಮತ್ತು ದಾಖಲೆಗಳಲ್ಲಿ ತಿರುಚಿದ ಸುಳ್ಳು ಮಾಹಿತಿಗಳನ್ನು ನೀಡಿದ್ದಾರೆ ಎಂದು ಆರೋಪಿಸಿ ಅವರು ಮೇಲ್ಮನವಿ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಿದ್ದರು. ಮೇಲ್ಮನವಿ ಪ್ರಾಧಿಕಾರವು, ಅನುವಾದಕರಿಗೆ ಮಾಹಿತಿಯನ್ನು ವೈಯಕ್ತಿಕವಾಗಿ ಮೇಲ್ಮನವಿದಾರರಿಗೆ ಒದಗಿಸುವಂತೆ ನಿರ್ದೇಶಿಸಿತು. ನವೆಂಬರ್ 18, 2020 ರಂದು, ಮಾಹಿತಿದಾರರು, ಉಪ-ವಿಭಾಗೀಯ ಕಚೇರಿಯ ಸಂದೇಶವಾಹಕ ಚಾಸ್ ಅವರೊಂದಿಗೆ ಮಾಹಿತಿಯನ್ನು ಹಸ್ತಾಂತರಿಸಲು ಆರೋಪಿಯ ಮನೆಗೆ ಹೋದರು.

ಆರೋಪಿಗಳು ಆರಂಭದಲ್ಲಿ ದಾಖಲೆಗಳನ್ನು ಸ್ವೀಕರಿಸಲು ನಿರಾಕರಿಸಿದರು ಆದರೆ ಮಾಹಿತಿದಾರರ ಒತ್ತಾಯದ ಮೇರೆಗೆ ಅದನ್ನು ಸ್ವೀಕರಿಸಿದರು. ಮಾಹಿತಿದಾರ ತನ್ನ ನಂಬಿಕೆಯನ್ನು ಉಲ್ಲೇಖಿಸುವಾಗ ಅವರನ್ನು ನಿಂದಿಸಿದ್ದಾರೆ ಮತ್ತು ಅವರ ವಿರುದ್ಧ ಕ್ರಿಮಿನಲ್ ಬಲಪ್ರಯೋಗ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಈ ವಿಷಯವು ಅನುವಾದಕನನ್ನು ಆರೋಪಿಯ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಮಾಡಿತ್ತು.

ತನಿಖೆಯ ನಂತರ, ವಿಚಾರಣಾ ನ್ಯಾಯಾಲಯವು ಆರೋಪಿಗಳ ವಿರುದ್ಧ ಐಪಿಸಿ ಸೆಕ್ಷನ್ 353 (ಸಾರ್ವಜನಿಕ ಸೇವಕನ ಮೇಲೆ ಹಲ್ಲೆ ಅಥವಾ ಕ್ರಿಮಿನಲ್ ಬಲಪ್ರಯೋಗ), 504 ಅಡಿಯಲ್ಲಿ ಆರೋಪಗಳನ್ನು ದಾಖಲಿ ಸಲು ಆದೇಶಿಸಿತ್ತು.

ವಿಚಾರಣಾ ನ್ಯಾಯಾಲಯದ ಆದೇಶವನ್ನು ಸಮರ್ಥಿಸಿಕೊಂಡಿರುವ ಹೈಕೋರ್ಟ್‌ನ ಆದೇಶವನ್ನು ನಾವು ರದ್ದುಗೊಳಿಸಿದ್ದೇವೆ, ಪರಿಣಾಮವಾಗಿ ಮೇಲ್ಮನವಿ ಸಲ್ಲಿಸಿದ ಅರ್ಜಿಯನ್ನು ಅನುಮತಿಸುತ್ತೇವೆ, ಮೇಲ್ಮನವಿ ಸಲ್ಲಿಸಿ ದವರ ವಿರುದ್ಧ ಆರೋಪಿಸಲಾದ ಎಲ್ಲಾ ಮೂರು ಅಪರಾಧ ಗಳಿಂದ ಅವರನ್ನು ಬಿಡುಗಡೆ ಮಾಡುತ್ತೇವೆ ಎಂದು ಕೋರ್ಟ್ ಹೇಳಿದೆ.

**ಸುಪ್ರೀಂ ಹೇಳಿದ್ದೇನು...?**



**ಅಪರಾಧದಿಂದ ಮುಕ್ತ**

**ಈ ಪ್ರಕ್ರಿಯೆಗಳನ್ನು ರದ್ದುಗೊಳಿಸುವಂತೆ ಆರೋಪಿ ಸಲ್ಲಿಸಿದ್ದ ಅರ್ಜಿಯನ್ನು ಜಾರ್ಖಂಡ್ ಹೈಕೋರ್ಟ್ ವಜಾಗೊಳಿಸಿತ್ತು. ಹೈಕೋರ್ಟ್ ಆದೇಶದ ವಿರುದ್ಧ ವ್ಯಕ್ತಿಯ ಅರ್ಜಿಯನ್ನು ವಿಚಾರಣೆ ನಡೆಸುವಾಗ, ಸೆಕ್ಷನ್ 353 ಹೊರತುಪಡಿಸಿ ಶಾಂತಿ ಭಂಗವನ್ನು ಉಂಟುಮಾಡುವ ಯಾವುದೇ ಕೃತ್ಯ ಆತನ ಕಡೆಯಿಂದ ಇಲ್ಲ ಎಂದು ಗಮನಿಸಿದ ಪೀಠ ಅವರನ್ನು ಉದ್ದೇಶಪೂರ್ವಕ ಅವಮಾನದ ಅಪರಾಧದಿಂದ ಮುಕ್ತಗೊಳಿಸಿತು.**

# ಶ್ರೀಲೀಲಾ ಸಿನಿಮಾದಲ್ಲಿ ವಾರ್ನರ್





ಆಸ್ಟ್ರೇಲಿಯಾದ ಕ್ರಿಕೆಟರ್ ಡೇವಿಡ್ ವಾರ್ನರ್ ತೆಲುಗು ಚಲನಚಿತ್ರ ರಂಗಕ್ಕೆ ಎಂಟ್ರಿ ಕೊಟ್ಟಿದ್ದಾರೆ. 'ರಾಬಿನ್ ಹುಡ್' ಚಿತ್ರದಲ್ಲಿ ಅವರು ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಐಪಿಎಲ್ ಮತ್ತು ಜಾಹೀರಾತುಗಳಲ್ಲಿ ಗುರುತಿಸಿಕೊಂಡಿರುವ ವಾರ್ನರ್ ಅವರ ಈ ಹೊಸ ಅವತಾರ ಅಭಿಮಾನಿಗಳಲ್ಲಿ ಕುತೂಹಲ ಹುಟ್ಟಿಸಿದೆ. ಮಾರ್ಚ್ 28ರಂದು ಚಿತ್ರ ತೆರೆಗೆ ಬರಲಿದೆ. ವಾರ್ನರ್ 2025ರ ಐಪಿಎಲ್‌ನಲ್ಲಿ ಅನ್ ಸೋಲ್ಡ್ ಆಗಿದ್ದಾರೆ ಮತ್ತು ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಹೊಂದಿದ್ದಾರೆ ಎಂಬುದು ಗಮನಾರ್ಹ.

ಆಸ್ಟ್ರೇಲಿಯಾ ಕ್ರಿಕೆಟರ್ ಡೇವಿಡ್ ವಾರ್ನರ್ ಬಗ್ಗೆ ಅನೇಕರಿಗೆ ಗೊತ್ತು. ಐಪಿಎಲ್‌ನ ಸನ್ ರೈಸರ್ಸ್ ಹೈದರಾಬಾದ್ ತಂಡದಲ್ಲಿ ಇದ್ದಾಗ ಅವರು ತೆಲುಗು ಹಾಡುಗಳಿಗೆ ಡ್ಯಾನ್ಸ್ ಮಾಡಿ, ರೀಲ್ಸ್ ಮಾಡಿ ಗಮನ ಸೆಳೆದರು. ಅವರು ಈ ಮೊದಲು ವಿವಿಧ ರೀತಿಯ ಜಾಹೀರಾತುಗಳಲ್ಲೂ ಕಾಣಿಸಿಕೊಂಡಿದ್ದರು. ಈಗ ಅವರು ತೆಲುಗು ಸಿನಿಮಾದಲ್ಲಿ ನಟಿಸೋದು ಪಕ್ಕಾ ಆಗಿದೆ. ಈ ಬಗ್ಗೆ ವೇದಿಕೆ ಮೇಲೆ ಮಾಹಿತಿ ರಿವೀಲ್ ಆಗಿದೆ.

ಮೈತ್ರಿ ಮೂವೀ ಮೇಕರ್ಸ್ ಹಲವು ಸೂಪರ್ ಹಿಟ್ ಚಿತ್ರಗಳನ್ನು ನೀಡಿದೆ. ಇವರು ಈಗ ಡೇವಿಡ್ ವಾರ್ನರ್‌ನ ಕರೆತಂದಿದ್ದಾರೆ. ಈ ಸಂಸ್ಥೆಯ ನಿರ್ಮಾಪಕರಲ್ಲಿ ಒಬ್ಬರಾದ ರವಿ ಶಂಕರ್ ಅವರು ಪ್ರೆಸ್‌ಮೀಟ್ ಒಂದರಲ್ಲಿ ಈ ಮಾತನ್ನು ಹೇಳಿದ್ದಾರೆ. ಈ ಸಂಸ್ಥೆ ನಿರ್ಮಾಣ ಮಾಡುತ್ತಿರುವ 'ರಾಬಿನ್ ಹುಡ್' ಚಿತ್ರದಲ್ಲಿ ಡೇವಿಡ್ ವಾರ್ನರ್ ಅತಿಥಿ ಪಾತ್ರ ಮಾಡಿದ್ದಾರೆ.

ಈ ಬಗ್ಗೆ ಸೋಶಿಯಲ್ ಮಿಡಿಯಾದಲ್ಲಿ ಚರ್ಚೆ ಶುರುವಾಗಿದೆ. ಅವರ ಪಾತ್ರ ಯಾವ ರೀತಿಯಲ್ಲಿ ಇರಲಿದೆ ಎನ್ನುವ ಕುತೂಹಲ ಅಭಿಮಾನಿಗಳಿಗೆ ಮೂಡಿದೆ. ಅವರನ್ನು ದೊಡ್ಡ ಪರದೆಯಮೇಲೆ ನೋಡಲು ಫ್ಯಾನ್ಸ್ ಕೂಡ ಕಾದಿದ್ದಾರೆ. ಡೇವಿಡ್ ವಾರ್ನರ್ ಅವರ ಪರ್ಸನಾಲಿಟಿ ಭಿನ್ನವಾಗಿದೆ. ತೆಲುಗು ಪ್ರೇಕ್ಷಕರ ಜೊತೆ ಅವರು ಒಳ್ಳೆಯ ನಂಟು ಹೊಂದಿರುವುದರಿಂದ ಮತ್ತಷ್ಟು ಇಷ್ಟ ಆಗುವ ಸಾಧ್ಯತೆ ಹೆಚ್ಚು.



# ಅಹ್ಮದಾಬಾದ್ ಸೋಲಿಗೆ ದುಬೈನಲ್ಲಿ ತಿರುಗೇಟು

## ಸೆಮಿಫೈನಲ್‌ನಲ್ಲಿ ಆಸ್ಟ್ರೇಲಿಯಾ ಬಗ್ಗುಬಡಿದ ಭಾರತ! ಚಾಂಪಿಯನ್ಸ್ ಟ್ರೋಫಿಯಲ್ಲಿ ಹ್ಯಾಟ್ರಿಕ್ ಫೈನಲ್ ಪ್ರವೇಶ

ವಿರಾಟ್ ಕೊಹ್ಲಿಯ ಅವರ ಅಮೋಘ ಆಟದ ನೆರವಿನಿಂದ ಆಸ್ಟ್ರೇಲಿಯಾ ತಂಡವನ್ನು 4 ವಿಕೆಟ್ ಗಳಿಂದ ಬಗ್ಗು ಬಡಿದ ಟೀಂ ಇಂಡಿಯಾ ರಾಜಾರೋಷವಾಗಿ ಐಸಿಸಿ ಚಾಂಪಿಯನ್ಸ್ ಟ್ರೋಫಿ ಟೂರ್ನಿಯ ಫೈನಲ್ ಪ್ರವೇಶಿಸಿದೆ. ಜೊತೆಗೆ 14 ವರ್ಷಗಳ ಬಳಿಕ ಐಸಿಸಿ ನಾಕೌಟ್ ಫೋಬಿಯಾದಿಂದಲೂ ಹೊರಬಂದಿದೆ. ಜೊತೆಗೆ ನಿರಂತರ 3ನೇ ಬಾರಿಗೆ ಟೂರ್ನಿಯ ಫೈನಲ್ ತಲುಪಿದ ಸಾಧನೆ ಮಾಡಿದೆ. ಈ ಹಿಂದೆ 2013 ಮತ್ತು 2017ರಲ್ಲೂ ಭಾರತ ತಂಡ ಫೈನಲ್ ಪ್ರವೇಶಿಸಿತ್ತು. ಬುಧವಾರ ನ್ಯೂಜಿಲೆಂಡ್ ಮತ್ತು ದಕ್ಷಿಣ ಆಫ್ರಿಕಾ ವಿರುದ್ಧ ನಡೆಯಲಿರುವ ಮತ್ತೊಂದು ಸೆಮಿ ಫೈನಲ್ ಪಂದ್ಯದಲ್ಲಿ ವಿಜಯಿಯಾಗುವ ತಂಡ ಭಾರತವನ್ನು ಫೈನಲ್ ನಲ್ಲಿ ಎದುರಿಸಲಿದೆ. ಮಾರ್ಚ್ 9 ಭಾನುವಾರದಂದು ಫೈನಲ್ ಪಂದ್ಯ ದುಬೈನಲ್ಲಿ ನಡೆಯಲಿದೆ. ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಗೆಲ್ಲಲು 265 ರನ್ ಗಳ ಗುರಿ ಪಡೆದ ಭಾರತ ತಂಡ ಇನ್ನೂ 11 ಎಸೆತಗಳು ಬಾಕಿ ಇರುವಾಗಲೇ ಜಯಭೇರಿ ಬಾರಿಸಿತು. ಮಾಜಿ ನಾಯಕ ವಿರಾಟ್ ಕೊಹ್ಲಿ, ಶ್ರೇಯಸ್ ಅಯ್ಯರ್ ಅವರ ತಾಳ್ಮೆಯ ಆಟವಾಡಿದರು. ಅಂತಿಮ ಓವರ್ ಗಳಲ್ಲಿ ಕೆಎಲ್ ರಾಹುಲ್ ಅವರು ಸಿಡಿದಿದ್ದರಿಂದ ಕಾಂಗರೂಗಳ ಕೈಯಿಂದ ಜಯ ಕಸಿದುಕೊಂಡರು. ಐಸಿಸಿ ಟೂರ್ನಿಯಲ್ಲಿ 24ನೇ ಬಾರಿ 50ಕ್ಕಿಂತ ಹೆಚ್ಚು ರನ್ ಬಾರಿಸುವ ಮೂಲಕ ಸಚಿನ್ ತೆಂಡೂಲ್ಕರ್ ಅವರ ದಾಖಲೆಯನ್ನು ಮುರಿದಿದ್ದಾರೆ.

**ವಿರಾಟ್ -ಶ್ರೇಯಸ್ ಜೊತೆಯಾಟ**

ಒಟ್ಟು 98 ಎಸೆತಗಳನ್ನು ಎದುರಿಸಿದ ಅವರು 5 ಬೌಂಡರಿಗಳಿದ್ದ 84 ರನ್ ಗಳಿಸಿ ಝುಂಪಾ ಬೌಲಿಂಗ್ ನಲ್ಲಿ ಔಟಾದರು.



### ಭಾರತದ ಬೌಲರ್‌ಗಳ ಮುಂದೆ ಎದುರಾಳಿಯ ಶರಣಾಗತಿ

**ಭಾರತವು 2025 ರ ಚಾಂಪಿಯನ್ಸ್ ಟ್ರೋಫಿಯ ಸೆಮಿಫೈನಲ್‌ನಲ್ಲಿ ಆಸ್ಟ್ರೇಲಿಯಾವನ್ನು ಎದುರಿಸುತ್ತಿದೆ. ಭಾರತೀಯ ಬೌಲರ್‌ಗಳು ಅದ್ಭುತವಾಗಿ ಬೌಲಿಂಗ್ ಮಾಡಿ ಆಸ್ಟ್ರೇಲಿಯಾವನ್ನು ಕೇವಲ 49.3 ಓವರ್‌ಗಳಲ್ಲಿ 264 ರನ್‌ಗಳಿಗೆ ಆಲೌಟ್ ಮಾಡಿದರು. ಮೊಹಮ್ಮದ್ ಶಮಿ 3 ವಿಕೆಟ್‌ಗಳನ್ನು ಪಡೆದು ಅತ್ಯುತ್ತಮ ಪ್ರದರ್ಶನ ನೀಡಿದರು. ಈ ಟೂರ್ನಿಯಲ್ಲಿ ಭಾರತ 4 ಪಂದ್ಯಗಳಲ್ಲೂ ಎದುರಾಳಿ ತಂಡವನ್ನು ಆಲೌಟ್ ಮಾಡಿ 40 ವಿಕೆಟ್‌ಗಳನ್ನು ಪಡೆದಿದೆ.**

ಶ್ರೇಯಸ್ ಅಯ್ಯರ್ ಅವರ ಜೊತೆಗೆ 3ನೇ ವಿಕೆಟ್‌ಗೆ ಮಹತ್ವದ 91 ರನ್‌ಗಳ ಜೊತೆಯಾಟ ಆಡುವ ಮೂಲಕ ಪಂದ್ಯದ ಮೇಲೆ ಹಿಡಿತ ಸಾಧಿಸಿದರು. ಆ ಬಳಿಕ ಕ್ರೀಸಿಗೆ ಬಂದ ಅಕ್ಷರ್ ಪಟೇಲ್ ಅವರು ದೊಡ್ಡ ಜೊತೆಯಾಟವಾಡದಿದ್ದರೂ 30 ಎಸೆತಗಳಿಂದ 27 ರನ್ ಗಳ ಉಪಯುಕ್ತ ಕೊಡುಗೆ ನೀಡಿದರು. ಅಕ್ಷರ್ ಮತ್ತು ವಿರಾಟ್ ಕೊಹ್ಲಿ ಅವರ ವಿಕೆಟ್ ಪತನದ ಬಳಿಕ ರಾಹುಲ್ ಮತ್ತು ಹಾರ್ದಿಕ್ ಪಾಂಡ್ಯ ಸಲೀಸಾಗಿ ಭಾರತವನ್ನು ವಿಜಯದ ದಡದ ವರೆಗೆ ಕೊಂಡೊಯ್ದರು. ಇನ್ನೇನು ಗೆಲುವಿಗೆ 6 ರನ್ ಬೇಕಿದ್ದಾಗ ಪಾಂಡ್ಯ ವಿಕೆಟ್ ಪತನವಾಯಿತು. ಅದಾಗಲೇ ಭಾರತ ಗೆಲುವಿನ ವಿಜಯೋತ್ಸಾಹಕ್ಕೆ ಸಿದ್ಧವಾಗಿತ್ತು. ಉಳಿದ ರನ್ ಗಳನ್ನು ಕೆಎಲ್ ರಾಹುಲ್ ಮತ್ತು ರವೀಂದ್ರ ಜಡೇಜಾ ಗಳಿಸಿದರು. ಇದು ಐಸಿಸಿ ಚಾಂಪಿಯನ್ಸ್ ಟ್ರೋಫಿಯ ನಾಕೌಟ್ ಹಂತದ ಪಂದ್ಯದಲ್ಲಿ ಭಾರತ ರನ್ ಬೆಂಬತ್ತಿ ಗಳಿಸಿದ ಎರಡನೇ ಅತಿ ದೊಡ್ಡ ಗೆಲುವು ಗಳಿಸಿದ ಮೊತ್ತವಾಗಿದೆ. ಈ ಹಿಂದೆ 2017ರಲ್ಲಿ ನಡೆದ ಟೂರ್ನಿಯ ಸೆಮಿಫೈನಲ್ ಪಂದ್ಯದಲ್ಲಿ ಭಾರತ ಇಷ್ಟೇ ರನ್ ಗಳನ್ನು ಚೇಸ್ ಮಾಡಿ ಗೆದ್ದಿತ್ತು.





**ಸಂಕ್ಷಿಪ್ತ ಸ್ಕೋರ್**

ಆಸ್ಟ್ರೇಲಿಯಾ- 49.3 ಓವರ್ ಗಳಲ್ಲಿ 264/10, ಸ್ಟೀವ್ ಸ್ಮಿತ್ 73, ಅಲೆಕ್ಸ್ ಕ್ಯಾರಿ 61, ಟ್ರಾವಿಸ್ ಹೆಡ್ 39, ಶಮಿ 48ಕ್ಕೆ 3, ವರುಣ್ 49ಕ್ಕೆ 2, ಜಡೇಜಾ 40ಕ್ಕೆ 2 ಭಾರತ 267/6 ವಿರಾಟ್ ಕೊಹ್ಲಿ 84, ಶ್ರೇಯಸ್ ಅಯ್ಯರ್ 45, ಕೆಎಲ್ ರಾಹುಲ್ 42, ರೋಹಿತ್ 28, ಹಾರ್ದಿಕ್ 28, ಝುಂಪಾ 60ಕ್ಕೆ 2, ಎಲ್ಲಿಸ 49ಕ್ಕೆ 2

# ಪಾಕಿಸ್ತಾನ ತಂಡದಿಂದ ಬಾಬರ್-ರಿಜ್ವಾನ್ ಔಟ್..!

### ಯುವ ಆಟಗಾರನಿಗೆ ನಾಯಕತ್ವ

ಪಾಕಿಸ್ತಾನವು ನ್ಯೂಜಿಲೆಂಡ್ ವಿರುದ್ಧದ ಏಕದಿನ ಮತ್ತು ಟಿ20 ಸರಣಿಗಾಗಿ ತನ್ನ ತಂಡಗಳನ್ನು ಪ್ರಕಟಿಸಿದೆ. ಬಾಬರ್ ಆಝಂ ಮತ್ತು ಮೊಹಮ್ಮದ್ ರಿಜ್ವಾನ್ ಅವರನ್ನು ಟಿ20 ತಂಡದಿಂದ ಕೈಬಿಡಲಾಗಿದೆ. ಸಲ್ಮಾನ್ ಅಲಿ ಅಘಾ ಟಿ20 ತಂಡದ ನಾಯಕರಾಗಿದ್ದಾರೆ ಮತ್ತು ಮೊಹಮ್ಮದ್ ರಿಜ್ವಾನ್ ಏಕದಿನ ತಂಡದ ನಾಯಕರಾಗಿ ಮುಂದುವರಿದಿದ್ದಾರೆ. ಶಾಹೀನ್ ಅಫ್ರಿದಿ ಮತ್ತು ನಸೀಮ್ ಶಾ ಅವರು ಎರಡೂ ಸರಣಿಗಳಲ್ಲಿ ಆಡಲಿದ್ದಾರೆ ಆದರೆ ವಿಭಿನ್ನ ತಂಡಗಳಲ್ಲಿ. ಚಾಂಪಿಯನ್ಸ್ ಟ್ರೋಫಿಯಲ್ಲಿ ಅತ್ಯಂತ ಕಳಪೆ ಪ್ರದರ್ಶನ ನೀಡಿ ಲೀಗ್ ಹಂತದಲ್ಲೇ ಟೂರ್ನಿಯಿಂದ ಹೊರಬಿದ್ದಿದ್ದ ಆತಿಥೇಯ ಪಾಕಿಸ್ತಾನ ತಂಡ ಸಾಕಷ್ಟು ನಿಂದನೆಗೆ ಒಳಗಾಗುತ್ತಿದೆ. ತಂಡದ ಹಿರಿಯ ಆಟಗಾರರನ್ನು ಇನ್ನಿಲ್ಲದಂತೆ ಟೀಕಿಸಲಾಗುತ್ತಿದೆ. ಇದೆಲ್ಲದರ ನಡುವೆ ನ್ಯೂಜಿಲೆಂಡ್ ಪ್ರವಾಸಕ್ಕಾಗಿ ಪಾಕಿಸ್ತಾನ ಏಕದಿನ ಮತ್ತು ಟಿ20 ತಂಡವನ್ನು ಪ್ರಕಟಿಸಿದೆ. ಪಾಕಿಸ್ತಾನ ಕ್ರಿಕೆಟ್ ಮಂಡಳಿಯು ಸಲ್ಮಾನ್ ಅಲಿ ಅಘಾ ಅವರನ್ನು ಟಿ20





ತಂಡದ ನೂತನ ನಾಯಕನನ್ನಾಗಿ ಅಧಿಕೃತವಾಗಿ ನೇಮಿಸಿದೆ. ಹಾಗೆಯೇ ಪಾಕಿಸ್ತಾನದ ಟಿ20 ತಂಡದಿಂದ ಬಾಬರ್ ಆಝಂ ಮತ್ತು ಮೊಹಮ್ಮದ್ ರಿಜ್ವಾನ್ ಅವರನ್ನು ಕೈಬಿಡಲಾಗಿದೆ.

**ಏಕದಿನ ತಂಡಕ್ಕೆ ರಿಜ್ವಾನ್ ನಾಯಕ:** ಟಿ20 ತಂಡದ ಹೊರತಾಗಿ, ಪಾಕಿಸ್ತಾನವು ನ್ಯೂಜಿಲೆಂಡ್ ಪ್ರವಾಸದಲ್ಲಿ ನಡೆಯಲಿರುವ ಏಕದಿನ ಸರಣಿಗೂ 15 ಸದಸ್ಯರ ತಂಡವನ್ನು ಆಯ್ಕೆ ಮಾಡಿದೆ. ಏಕದಿನ ತಂಡದ ನಾಯಕತ್ವ ಮೊಹಮ್ಮದ್ ರಿಜ್ವಾನ್ ಕೈಯಲ್ಲಿದೆ. ಕಳಪೆ ಪ್ರದರ್ಶನದ ಹೊರತಾಗಿಯೂ ಅನುಭವಿ ಬ್ಯಾಟರ್ ಬಾಬರ್ ಆಝಂ ಏಕದಿನ ತಂಡದಲ್ಲಿ ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಬಾಬರ್ ಮತ್ತು ರಿಜ್ವಾನ್ ಹೊರತುಪಡಿಸಿ, ಇಮಾಮ್ ಉಲ್ ಹಕ್, ಅಬ್ದುಲ್ಲಾ ಶಫೀಕ್ ಅವರಂತಹ ಆಟಗಾರರು ಕೂಡ ಏಕದಿನ ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

**ಟಿ20 ತಂಡಕ್ಕೆ ನೂತನ ನಾಯಕ:** ಟಿ20 ಸರಣಿಗೆ ಪಾಕಿಸ್ತಾನ 16 ಸದಸ್ಯರ ಟಿ20 ತಂಡವನ್ನು ಪ್ರಕಟಿಸಿದ್ದು, ಯುವ ಆಟಗಾರನಿಗೆ ನಾಯಕತ್ವ ನೀಡಲಾಗಿದೆ. ವಾಸ್ತವವಾಗಿ ನಾಯಕತ್ವದ ರೇಸ್‌ನಲ್ಲಿ ಸಲ್ಮಾನ್ ಅಲಿ ಅಘಾ ಅವರ ಹೆಸರು ಈಗಾಗಲೇ ಮುಂಚೂಣಿಯಲ್ಲಿತ್ತು. ಈಗ ಅವರ ಹೆಸರನ್ನು ಅಂತಿಮಗೊಳಿಸಲಾಗಿದೆ. ಸಲ್ಮಾನ್ ಅಲಿ ಅಘಾ ನಾಯಕತ್ವವಹಿಸಿಕೊಂಡರೆ, ಶದಾಬ್ ಖಾನ್ ತಂಡದ ಉಪನಾಯಕನಾಗಿ ಆಯ್ಕೆಯಾಗಿದ್ದಾರೆ.



# ರನ್ಯಾ ಬಳಿ ಸಿಕ್ಕಿದ್ದು, 14.8 ಕೆಜಿ ಚಿನ್ನ

ಕನ್ನಡ ಚಿತ್ರರಂಗದ ನಟಿ ರನ್ಯಾ ರಾವ್ ದುಬೈನಿಂದ 14.8 ಕೆಜಿ ಚಿನ್ನವನ್ನು ಅಕ್ರಮವಾಗಿ ತಂದು ಸಾಗಿಸುತ್ತಿದ್ದ ಆರೋಪದ ಮೇಲೆ ಬಂಧನಕ್ಕೊಳಗಾಗಿದ್ದಾರೆ. ಇದರ ಬೆಲೆ 12 ಕೋಟಿ ರೂಪಾಯಿಗಳಷ್ಟು ಆಗಿದೆ. ಐಪಿಎಸ್ ಅಧಿಕಾರಿಯ ಮಗಳಾದ ರನ್ಯಾ ತಂದೆಯ ಹೆಸರನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂಬ ಆರೋಪವಿದೆ. ಈ ಪ್ರಕರಣ ದೊಡ್ಡ ಸಂಚಲನವನ್ನು ಸೃಷ್ಟಿಸಿದೆ.

ಕನ್ನಡದ 'ಮಾಣಿಕ್ಯ' ಚಿತ್ರದಲ್ಲಿ ನಟಿಸಿದ್ದ ರನ್ಯಾ ರಾವ್ ಅವರು ಅಕ್ರಮ ಚಿನ್ನ ಸಾಗಾಟ ಆರೋಪದಲ್ಲಿ ಸಿಕ್ಕಿ ಬಿದ್ದಿದ್ದಾರೆ. ಈ ವಿಚಾರ ಸೆನ್ಸೇನ್ ಸೃಷ್ಟಿ ಮಾಡಿತ್ತು. ಈಗ ಈ ವಿಚಾರ ಮತ್ತಷ್ಟು ಸೆನ್ಸೇಷನ್ ಸೃಷ್ಟಿಸುವ ರೀತಿಯಲ್ಲಿ ಇದೆ. ದುಬೈನಿಂದ ಬಂದಿದ್ದ ಅವರ ಬಳಿ ಇದ್ದಿದ್ದು ಒಂದಲ್ಲ, ಎರಡಲ್ಲ ಬರೋಬ್ಬರಿ 14.8 ಕೆಜಿ ಚಿನ್ನ! ಈ ವಿಚಾರ ಕೇಳಿ ಅನೇಕರು ಹೌಹಾರಿದ್ದಾರೆ.

ನಟಿ ರನ್ಯಾ ರಾವ್ ಆಗಾಗ ದುಬೈಗೆ ಹೋಗುತ್ತಿದ್ದರು. ಬಿಸ್‌ನೆಸ್ ಕೆಲಸದ ನಿಮಿತ್ತ ದುಬೈಗೆ ಹೋಗುತ್ತಿದ್ದಾಗಿ ಅವರು ಹೇಳುತ್ತಿದ್ದರು. ಅದೇ ರೀತಿ ಮಾರ್ಚ್ 3ರ ರಾತ್ರಿ ಕೂಡ ಅವರು ದುಬೈನಿಂದ ಬಂದಿದ್ದಾರೆ. ಈ ವೇಳೆ ಅವರನ್ನು ವಶಕ್ಕೆ ಪಡೆದಾಗ ಉಡುಪಿನ ಒಳಗೆ ಬರೋಬ್ಬರಿ 14.8 ಕೆಜಿ ಚಿನ್ನ ಸಿಕ್ಕಿದೆ.

**12 ಕೋಟಿ ರೂಪಾಯಿ ಮೌಲ್ಯ:** ಅನೇಕ ಬಾರಿ ದುಬೈಗೆ ಹೋಗಿ ಬರುತ್ತಿದ್ದರು ರನ್ಯಾ. ಈ ವಿಚಾರದಿಂದ ಕಸ್ಟಮ್‌ನ ಡಿಆರ್‌ಐ ಅಧಿಕಾರಿಗಳಿಗೆ ಅನುಮಾನ ಮೂಡಿತ್ತು. ಹೀಗಾಗಿ ದೆಹಲಿಯ ಅಧಿಕಾರಿಗಳು ನಟಿಯ ಹಿಂದೆ ಬಿದ್ದಿದ್ದರು. ಅವರು ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬರುವ ಎರಡು ಗಂಟೆ ಮೊದಲೇ ಆಗಮಿಸಿದ್ದರು. ಈ ರೀತಿ ವಶಕ್ಕೆ ಪಡೆದ ಚಿನ್ನದ ಮೌಲ್ಯ ಸುಮಾರು 12 ಕೋಟಿ ರೂಪಾಯಿ ಎಂದು ಅಂದಾಜಿಸಲಾಗಿದೆ. ರನ್ಯಾ ರಾವ್ ಅನೇಕ ಬಾರಿ ಈ ರೀತಿ ಚಿನ್ನಸಾಗಾಣೆಗೆ ಮಾಡಿರುವ ಬಗ್ಗೆ ಅನುಮಾನ ವ್ಯಕ್ತವಾಗಿದೆ.



# ನಮ್ಮ ನಾಯಕರು ಬೆದರಿಕೆ ಹಾಕುವುದನ್ನು ನಿಲ್ಲಿಸಬೇಕು

ಡಿಸಿಎಂ ಡಿಕೆಶಿವಕುಮಾರ್ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದ ರಮ್ಯಾ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಇನ್‌ಸ್ಟಾದಲ್ಲಿ ಪೋಸ್ಟ್ ಹಾಕಿದ ರಮ್ಯಾ, ಡಿ ಕೆ ಶಿವಕುಮಾರ್ ಅವರ ಮಾತಿಗೆ ಅಡ್ಡಗೋಡೆ ಮೇಲೆ ದೀಪವಿಟ್ಟಂತೆ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಡಿ.ಕೆ. ಶಿವಕುಮಾರ್ ಅವರ ಹೇಳಿಕೆ ಸಂಪೂರ್ಣ ತಪ್ಪು ಎಂದು ಹೇಳಲಾಗದು. ನಟರಾಗಿರುವ ನಾವೆಲ್ಲರೂ ಸಾರ್ವಜನಿಕರ ಮೇಲೆ ಗಮನಾರ್ಹ ಪ್ರಭಾವವನ್ನು ಹೊಂದಿದ್ದೇವೆ ಮತ್ತು ನಾವು ನಂಬುವ ಕಾರಣಗಳಿಗೆ ನಮ್ಮ ಧ್ವನಿಯನ್ನು ಒದಗಿಸುವುದು ಅಗತ್ಯ. ಸಂವಾದ ಪ್ರಜಾಪ್ರಭುತ್ವಕ್ಕೆ ಅತ್ಯಗತ್ಯ. ಗೋಕಾಕ್ ಚಳುವಳಿಗೆ ತಮ್ಮ ಬೆಂಬಲವನ್ನು ನೀಡಿದ ಡಾ. ರಾಜಕುಮಾರ್ ಅವರೇ ಅದಕ್ಕೆ ಶ್ರೇಷ್ಠ ಉದಾಹರಣೆ. ಒಬ್ಬ ಕಲಾವಿದನು ತನ್ನ ಹೆಸರನ್ನು ಯಾವಾಗಲೂ ಒಂದು ಚಳುವಳಿಗೆ ಒದಗಿಸಬೇಕೆ, ಬೇಡವೇ ಎನ್ನುವುದು ಅವನ ಇಚ್ಛೆ. ಆದರೆ ಯಾವುದೇ ಸಂದರ್ಭದಲ್ಲೂ ಯಾರನ್ನಾದರೂ ಬೆದರಿಸಲು ಸಾಧ್ಯವಿಲ್ಲ. ಚಿತ್ರರಂಗದಲ್ಲಿನ ನನ್ನ ಬಹುತೇಕ ಸ್ನೇಹಿತರು ಖಾಸಗಿ ಜೀವನದಲ್ಲಿ ತಮ್ಮ ಅಭಿಪ್ರಾಯಗಳನ್ನು ಬಹಳ ಮುಕ್ತವಾಗಿ ಹಂಚಿಕೊಳ್ಳುತ್ತಾರೆ. ಆದರೆ ಸಾರ್ವಜನಿಕವಾಗಿ ಹೇಳಲು ಹಿಂಜರಿಯುತ್ತಾರೆ. ಇದಕ್ಕೆ ಕಾರಣ ಅವರ ಮಾತುಗಳಿಗೆ ರಾತ್ರೋರಾತ್ರಿ ಟ್ರೋಲ್ ಆಗುತ್ತದೆ. ಇದು ಅಪಾಯಕರವಾಗಿ ಪರಿಣಾಮ ಬೀರುತ್ತದೆ.



ನಿನ್ನೆ ಸಮರ್ಥನೆ, ಇಂದು ರಮ್ಯಾ ಆಕ್ಷೇಪ

# ಶ್ರದ್ಧಾ ಕೊಟ್ಟ ಉಡುಗೊರೆ ಮಾರಿಬಿಟ್ಟ ತಂದೆ ಶಕ್ತಿ ಕಪೂರ್

ಶಕ್ತಿ ಕಪೂರ್, ನಿಜ ಜೀವನದಲ್ಲಿ ಬಹಳ ಪ್ರಾಕ್ಟಿಕಲ್ ವ್ಯಕ್ತಿ. ಹಣ, ಆಸ್ತಿಯ ವಿಷಯದಲ್ಲಿಯೂ ಸಹ. ಈ ಬಗ್ಗೆ ಸಂದರ್ಶನಗಳಲ್ಲಿ ಅವರೇ ಹೇಳಿಕೊಂಡಿದ್ದಾರೆ. ಈ ಹಿಂದೆ ತಮ್ಮ ಪುತ್ರಿ ಶ್ರದ್ಧಾ ಕಪೂರ್ ತಮ್ಮ ಹುಟ್ಟುಹಬ್ಬಕ್ಕೆಂದು ನೀಡಿದ್ದ ದುಬಾರಿ ಉಡುಗೊರೆಯನ್ನು ಮಾರಾಟ ಮಾಡಿದ್ದಾರೆ ನಟ ಶಕ್ತಿ ಕಪೂರ್. ಕಳೆದ ವರ್ಷವಷ್ಟೆ ಶಕ್ತಿ ಕಪೂರ್ ಹುಟ್ಟುಹಬ್ಬಕ್ಕೆಂದು ಮಗಳು ಶ್ರದ್ಧಾ ಕಪೂರ್, ಮುಂಬೈನ ಜುಹು ಏರಿಯಾನಲ್ಲಿ ಸಿಲ್ವರ್ ಬೀಚ್ ಹೆಚೆಲ್ ಕೋ ಅಪರೇಟಿವ್ ಸೊಸೈಟಿಯಲ್ಲಿ ಐಶಾರಾಮಿ ಫ್ಲ್ಯಾಟ್ ಒಂದನ್ನು ಉಡುಗೊರೆಯಾಗಿ ನೀಡಿದ್ದರು. 881 ಚದರ ಅಡಿ ವಿಶಾಲವಾದ ಫ್ಲ್ಯಾಟ್ ಅನ್ನು ಶ್ರದ್ಧಾ ಕಪೂರ್ ತಂದೆಯ ಹುಟ್ಟುಹಬ್ಬಕ್ಕೆ ಉಡುಗೊರೆಯಾಗಿ ನೀಡಿದ್ದರು. ಆದರೆ ಇತ್ತೀಚೆಗೆ ಈ ಫ್ಲ್ಯಾಟ್ ಅನ್ನು ಬರೋಬ್ಬರಿ 6.11 ಕೋಟಿಗೆ ಮಾರಾಟ ಮಾಡಿದ್ದಾರೆ ಶಕ್ತಿ ಕಪೂರ್. ಈ ಫ್ಲ್ಯಾಟ್ ಅನ್ನು ಬೆಂಗಳೂರಿನ ಉದ್ಯಮಿಗಳಾದ ಸತೀಶ್ ವೆಂಕಟೇಶ್ ಮತ್ತು ಅರ್ಚನಾ ತನೇಜ ಅವರಿಂದ ಖರೀದಿ ಮಾಡಿದ್ದರು ಶ್ರದ್ಧಾ ಕಪೂರ್. ಈ ಫ್ಲ್ಯಾಟ್ ಶಕ್ತಿ ಕಪೂರ್ ಹಾಗೂ ಶ್ರದ್ಧಾ ಕಪೂರ್ ಅವರ ಜಂಟಿ ಹೆಸರಿನಲ್ಲಿತ್ತು.

# ನಟ್ ಬೋಲ್ಟ್ ಟೈಟ್ ಹೇಳಿಕೆಗೆ ಕಂಗನಾ ಟಾಂಗ್!




ಕಲಾವಿದರ ರಕ್ಷಣೆಗೆ ದೇವರು ಬರ್ತಾನೆ

ರಾಜ್ಯದಲ್ಲಿ ಸದ್ದು ಮಾಡ್ತಿರುವ ನಟ್ಟು ಬೋಲ್ಟ್ ವಿವಾದದ ಬಗ್ಗೆ ಬಿಜೆಪಿ ಸಂಸದೆ ಹಾಗೂ ಬಾಲಿವುಡ್ ಕ್ವೀನ್ ಕಂಗನಾ ರಣಾವತ್ ಪ್ರತಿಕ್ರಿಯಿಸಿದ್ದಾರೆ. ಡಿಸಿಎಂ ಡಿಕೆಶಿ ನಟ್ಟು ಬೋಲ್ಟ್ ಹೇಳಿಕೆಗೆ ಕಂಗನಾ ತಿರುಗೇಟು ನೀಡಿದ್ದಾರೆ.

ಬೆಂಗಳೂರು ಅಂತಾರಾಷ್ಟ್ರಿಯ ಸಿನಿಮೋತ್ಸವದ ವೇಳೆ ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ ನಟ್ಟು ಬೋಲ್ಟ್ ಟೈಟ್ ಮಾಡ್ಬೇಕು ಎನ್ನುವ ಹೇಳಿಕೆ ಭಾರೀ ವಿವಾದಕ್ಕೆ ಕಾರಣವಾಗಿದೆ. ಈ ವಿಚಾರ ದಿನೇ ದಿನೇ ಹೊಸ ಸ್ವರೂಪ ಪಡೆದುಕೊಳ್ತಿದೆ. ವಿವಾದ ಬಗ್ಗೆ ಬಿಜೆಪಿ ಸಂಸದೆ ಹಾಗೂ ಬಾಲಿವುಡ್ ನಟಿ ಕಂಗನಾ ರಣಾವತ್ ಮಾತಾಡಿದ್ದು ಡಿಕೆ ಶಿವಕುಮಾರ್ ಅವರಿಗೆ ಟಾಂಗ್ ಕೊಟ್ಟಿದ್ದಾರೆ. ಕಟೀಲು ದುರ್ಗಾ ಪರಮೇಶ್ವರಿ ದರ್ಶನ ಪಡೆಯಲು ಕರ್ನಾಟಕಕ್ಕೆ ಬಂದಿದ್ದ ಬಾಲಿವುಡ್ ನಟಿ ಕಂಗನಾ ರಣಾವತ್, ರಾಜ್ಯದಲ್ಲಿ ಸದ್ದು ಮಾಡ್ತಿರುವ ನಟ್ಟು ಬೋಲ್ಟ್ ವಿವಾದದ ಬಗ್ಗೆ ಕೂಡ ಮಾತಾಡಿದ್ದಾರೆ. ಡಿಸಿಎಂ ಡಿ.ಕೆ ಶಿವಕುಮಾರ್ ಅವರಿಗೆ ಬಾಲಿವುಡ್ ಕ್ವೀನ್ ಪರೋಕ್ಷವಾಗಿಯೇ ಟಾಂಗ್ ಕೊಟ್ಟಿದ್ದಾರೆ.

# ಕನ್ನಡ ಮಾತಾಡಮ್ಮ, ಗೋವಾ ಕ್ಯಾಸಿನೋನಲ್ಲಿ ನಿವೇದಿತಾ ಗೌಡಗೆ ಕನ್ನಡಿಗರ ಕ್ಲಾಸ್





ಇನ್‌ಸ್ಟಾಗ್ರಾಂ ಸೆಲೆಬ್ರಿಟಿ, ನಟಿ ನಿವೇದಿತಾ ಗೌಡ, ಗೋವಾದ ಕ್ಯಾಸಿನೋ (ಜೂಜು ಅಡ್ಡೆ)ಕ್ಕೆ ಅತಿಥಿಯಾಗಿ ಹೋಗಿದ್ದು, ಅಲ್ಲಿ ತಮ್ಮ ಬಗ್ಗೆ ಇಂಗ್ಲೀಷ್‌ನಲ್ಲಿ ಮಾತನಾಡಿ ಪೇಚಿಗೆ ಸಿಲುಕಿದ್ದಾರೆ. ಕನ್ನಡಿಗರೇ ಹೆಚ್ಚಾಗಿದ್ದ ಕ್ಯಾಸಿನೋ ಕೇಂದ್ರಕ್ಕೆ ಅತಿಥಿಯಾಗಿ ಹೋಗಿದ್ದ ನಿವೇದಿತಾ ಗೌಡ, ಅಲ್ಲಿ ನಿರೂಪಕಿ ಕೇಳಿದ ಪ್ರಶ್ನೆಗಳಿಗೆ ಇಂಗ್ಲೀಷ್‌ನಲ್ಲಿ ಉತ್ತರಿಸುತ್ತಿದ್ದರು. ಈ ವೇಳೆ ಅಲ್ಲಿ ಹಾಜರಿದ್ದ ಕನ್ನಡಿಗರು 'ನಿವೇದಿತಾ ಕನ್ನಡದಲ್ಲಿ ಮಾತನಾಡು' ಎಂದರು. ಕೂಡಲೇ ಭಾಷೆ ಬದಲಾಯಿಸಿಕೊಂಡ ನಿವೇದಿತಾ ಗೌಡ, ಕನ್ನಡದಲ್ಲಿ ಮಾತನಾಡಿ ಎಲ್ಲಾರೂ ಹೆಚ್ಚು ಹೆಚ್ಚು ಹಣ ಗೆದ್ದುಕೊಂಡು ಹೋಗಿ ಎಂದು ಶುಭ ಹಾರೈಸಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966